ಬೆಂಗಳೂರು ಸಂಪುಟ: 16 ಸಂಚಿಕೆ: 49 ಪುಟ: 06 ಸೋಮವಾರ 13-01-2025 ₹ 3

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ಸತ್ಯ ಒಂದಿನ ಹೊರಗೆ ಬರಲೇಬೇಕು!

ನಾನು ಬದುಕಿದ್ದೇ ಪವಾಡ

ಚಿತ್ರರಂಗದಿಂದ ದೂರವಾಗಿದ್ದೇಕೆ ಇಮ್ರಾನ್ ಪುಟ 6

# ಕಾಂಗ್ರೆಸ್‌ನಲ್ಲಿ ಒಡಕಿಲ್ಲ

## ಪಕ್ಷದಲ್ಲಿ ಭಿನ್ನಾಭಿಪ್ರಾಯ ವದಂತಿ ಕೆಲ ಮಾಧ್ಯಮಗಳ ಸೃಷ್ಟಿ: ಸುರ್ಜೇವಾಲ

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ನಡುವೆ ಯಾವುದೇ ಭಿನ್ನಾಭಿಪ್ರಾಯ ಇಲ್ಲ. ಬಿಜೆಪಿಯವರು ತಮ್ಮ ವೈಫಲ್ಯ ಮುಚ್ಚಿಕೊಳ್ಳಲು ಈ ಆರೋಪ ಮಾಡುತ್ತಿದ್ದಾರೆ. ಕೆಲ ಮಾಧ್ಯಮಗಳ ಗುಂಪಿನಿಂದ ಈ ಗೊಂದಲ ಸೃಷ್ಟಿಯಾಗಿದೆ ಎಂದು ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲ ಹೇಳಿದ್ದಾರೆ.

ಸೋಮವಾರ ಕೆಪಿಸಿಸಿ ಕಚೇರಿಯಲ್ಲಿ ನಡೆದ ಸರ್ವ ಸದಸ್ಯರ ಸಭೆಯಲ್ಲಿ ಮಾತನಾಡುತ್ತಾ ಈ ವಿಚಾರವನ್ನು ಪ್ರಸ್ತಾಪಿಸಿ ಬಿಜೆಪಿಯನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ 58 ಸಾವಿರ ಕೋಟಿ ರೂಗಳ ಗ್ಯಾರಂಟಿ ಯೋಜನೆಗಳು ಯಶಸ್ವಿಯಾಗಿವೆ. ಇವುಗಳ ಲಾಭ ಜನತೆಗೆ ಸಿಗುತ್ತಿದೆ. ಇವು ದೇಶದ ದೊಡ್ಡ ಯೋಜನೆಗಳೆನಿಸಿವೆ. ಇವುಗಳ ಯಶಸ್ಸಿನಿಂದ ಬಿಜೆಪಿ ಹತಾಶೆಗೊಂಡಿದೆ. ಇದನ್ನು ಮರೆಮಾಚಲು ಕಾಂಗ್ರೆಸ್‌ನಲ್ಲಿ ಇಲ್ಲದ ಒಡಕನ್ನು ಸೃಷ್ಟಿಸಲು ಬಿಜೆಪಿ ಯತ್ನಿಸುತ್ತಿದೆ ಎಂದು ರಣದೀಪ್ ಸುರ್ಜೆವಾಲ ಆರೋಪಿಸಿದ್ದಾರೆ.

ಕರ್ನಾಟಕ ಘಟಕದ ಬಿಜೆಪಿಯಲ್ಲಿ ಬೇರೆ ಬೇರೆ ಬಣಗಳಿವೆ. ಒಂದೆಡೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ಬಣ ಇದೆ. ಇನ್ನೊಂದೆಡೆ ಬಸನಗೌಡ ಪಾಟೀಲ್ ಯತ್ನಾಳರದ್ದು ಬಣ ಇದೆ. ಮತ್ತೊಂದೆಡೆ ಆರ್ ಅಶೋಕ್ ಅವರ ಬಣ ಇದೆ. ಮಗದೊಂದೆಡೆ ಅಶ್ವತ್ಥ ನಾರಾಯಣ ಅವರ ಬಣ ಇದೆ ಎಂದು ಬಿಜೆಪಿ ವಿರುದ್ಧ ಸುರ್ಜೆವಾಲ ವ್ಯಂಗ್ಯ ಮಾಡಿದ್ದಾರೆ.

ವಿಜಯೇಂದ್ರ ವಿರುದ್ಧ ಯತ್ನಾಳ ವಾಗ್ದಾಳಿ ನಡೆಸುತ್ತಿದ್ದಾರೆ. ಯತ್ನಾಳರಿಗೆ ರಮೇಶ್ ಜಾರಕಿಹೊಳಿ



ಬೆಂಬಲ ನೀಡುತ್ತಿದ್ದಾರೆ. ಬಿಜೆಪಿಯ ಆಂತರಿಕ ಕಿತ್ತಾಟಕ್ಕೆ ಜೆಡಿಎಸ್ ಕೂಡ ಬೆಂಬಲ ನೀಡುತ್ತಿದೆ. ಈ ಎಲ್ಲಾ ಹತಾಶೆಗಳನ್ನು ಮುಚ್ಚಿಹಾಕಲು ಕಾಂಗ್ರೆಸ್ ವಿರುದ್ಧ ಬಿಜೆಪಿ ಇಲ್ಲದ ಆರೋಪ ಮಾಡುತ್ತಿದೆ ಎಂದು ರಣದೀಪ್ ಸುರ್ಜೆವಾಲ ಹೇಳಿದ್ದಾರೆ.

ಕಾಂಗ್ರೆಸ್ ಪಕ್ಷದೊಳಗೆ ಯಾವುದೇ ಒಡಕಿಲ್ಲ. ಸಿಎಂ ಮತ್ತು ಡಿಸಿಎಂ ಮಧ್ಯೆ ಯಾವ ಭಿನ್ನಾಭಿಪ್ರಾಯವೂ ಇಲ್ಲ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಉತ್ತಮವಾಗಿ ಆಡಳಿತ ನಡೆಸುತ್ತಿದೆ ಎಂದು ಕರ್ನಾಟಕ ಕಾಂಗ್ರೆಸ್‌ನ ಉಸ್ತುವಾರಿಗಳು ಅಭಿಪ್ರಾಯಪಟ್ಟಿದ್ದಾರೆ.

ಇವತ್ತಿನ ಸಭೆ ಜೈ ಬಾಪೂ, ಜೈ ಭೀಮ್, ಜೈ ಸಂವಿಧಾನ ಸಮಾವೇಶದ ಸಿದ್ಧತಾ ಸಭೆಯಾಗಲಿದೆ. ಅಮಿತ್ ಷಾ ಅಂಬೇಡ್ಕರ್ ಅವರಿಗೆ ಅಪಮಾನ ಮಾಡಿದ್ದಾರೆ. ದೇಶದ ಎಸ್‌ಸಿ, ಎಸ್‌ಟಿ, ಒಬಿಸಿ ಜನರಿಗೆ ಅಪಮಾನ ಮಾಡಿದ್ದಾರೆ. ದೇಶದಲ್ಲಿ ಅಮಿತ್ ಷಾ ಅವರ ರಾಜೀನಾಮೆ ಕೇಳ್ತಿದ್ದೇವೆ, ಬೆಳಗಾವಿ ಸಮಾವೇಶದಲ್ಲೂ ಕೇಳುತ್ತಿದ್ದೇವೆ ಎಂದರು.

### ಶಾಸಕಾಂಗ ಸಭೆ

ಈ ನಡುವೆ ಇಂದು ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಡೆಯುತ್ತಿದೆ. ಸಭೆಯಲ್ಲಿಅಧಿಕಾರಿ ಹಂಚಿಕೆ ವಿಷಯ ಪ್ರಮುಖವಾಗಿ ಚರ್ಚೆಗೆ ಬರುವ ಸಾಧ್ಯತೆಯಿದ್ದು, ಸಂಜೆ 6 ಗಂಟೆಗೆ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಡೆಯಲಿದೆ. ಸಭೆಯತ್ತ ಎಲ್ಲರ ಚಿತ್ತ ನೆಟ್ಟಿದೆ.




ಬೆಳಗಾವಿಯಲ್ಲಿ ಇದೇ ಜನವರಿ 21 ರಂದು ಗಾಂಧಿ ಭಾರತ ಕಾರ್ಯಕ್ರಮದ ಅಂಗವಾಗಿ ನಡೆಯಲಿರುವ "ಜೈ ಬಾಪು, ಜೈ ಭೀಮ್, ಜೈ ಸಂವಿಧಾನ್" ಬೃಹತ್ ಸಮಾವೇಶದ ಹಿನ್ನೆಲೆಯಲ್ಲಿ ಕೆಪಿಸಿಸಿ ಕಚೇರಿಯಲ್ಲಿ ಸೋಮವಾರ ನಡೆದ ಪೂರ್ವಭಾವಿ ಸಿದ್ಧತೆ ಸಭೆಯಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲ, ಕೆಪಿಸಿಸಿ ಅಧ್ಯಕ್ಷರೂ ಆದ ಡಿಸಿಎಂ ಡಿ ಕೆ ಶಿವಕುಮಾರ್, ಸಿಎಂ ಸಿದ್ದರಾಮಯ್ಯ, ಸಚಿವರಾದ ಎಚ್ ಕೆ ಪಾಟೀಲ್, ಈಶ್ವರ್ ಖಂಡ್ರೆ, ಕೆ.ಜೆ. ಜಾರ್ಜ್, ಕೆ ಎಚ್ ಮುನಿಯಪ್ಪ, ಎಚ್ ಸಿ ಮಹದೇವಪ್ಪ, ಚಲುವರಾಯಸ್ವಾಮಿ, ವಸಂತ ಕುಮಾರ್ ಮತ್ತಿತರರು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ಮಾಜಿ

# ಪುಸ್ತಕಾಭಿರುಚಿ ಬೆಳೆಸುವ ಉದ್ದೇಶ

**ಬೆಂಗಳೂರು:** ಪುಸ್ತಕ ಅಭಿರುಚಿಯನ್ನು ಇಂದಿನ ಯುವಪೀಳಿಗೆಯಲ್ಲಿ ಬೆಳೆಸುವುದು 'ಮನೆಗೊಂದು ಗ್ರಂಥಾಲಯ' ಕಾರ್ಯಕ್ರಮದ ಮುಖ್ಯ ಉದ್ದೇಶ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

'ಮನೆಗೊಂದು ಗ್ರಂಥಾಲಯ'ದ ಮೊದಲ ಗ್ರಂಥಾಲಯವನ್ನು ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣಾದಲ್ಲಿಯೇ ಸ್ಥಾಪಿಸುತ್ತಿದ್ದು, ಗ್ರಂಥಾಲಯಕ್ಕೆ ಹಿರಿಯ ಸಾಹಿತಿ ನಾಡೋಜ ಡಾ. ಹಂ ಪ ನಾಗರಾಜಯ್ಯ ಚಾಲನೆ ನೀಡಿದರು.

ನಂತರ ಮಾತನಾಡಿದ ಸಿಎಂ, ಮನೆಗೊಂದು ಗ್ರಂಥಾಲಯ ಈ ಯೋಜನೆಯು ಕನ್ನಡ ಪುಸ್ತಕ ಪ್ರಾಧಿಕಾರದ ಮಹತ್ವಾಕಾಂಕ್ಷೆಯ ಯೋಜನೆಯಾಗಿದೆ. ಈ ಯೋಜನೆಯಡಿ ರಾಜ್ಯದಾದ್ಯಂತ ಪ್ರಸಕ್ತ ಸಮಿತಿಯ ಅವಧಿಯಲ್ಲಿ ಒಂದು ಲಕ್ಷ ಮನೆಗಳಲ್ಲಿ ಗ್ರಂಥಾಲಯ ಸ್ಥಾಪಿಸುವ ಗುರಿಯನ್ನು ಹೊಂದಲಾಗಿದೆ ಎಂದರು.


ಮರೆಯಾಗುತ್ತಿರುವ ಪುಸ್ತಕ ಸಂಸ್ಕೃತಿಯನ್ನು ಪುಟ 2




### ಸಿಲಿಂಡರ್ ಸ್ಫೋಟ: 7 ಮಂದಿಗೆ ಗಾಯ

**ಬೆಂಗಳೂರು:** ದಾಸರಹಳ್ಳಿಯ ಚೊಕ್ಕಸಂದ್ರದ ಮನೆಯೊಂದರಲ್ಲಿ ಸಿಲಿಂಡರ್ ಸ್ಫೋಟಗೊಂಡು ಏಳು ಮಂದಿ ಗಂಭೀರವಾಗಿ ಗಾಯಗೊಂಡಿದ್ದಾರೆ. ದಿಜುಧಾರ್ (34), ಅಂಜಲಿದಾಸ್ (31), ಮನುಶ್ರೀ (3), ಮನು(25), ತಿಪ್ಪೇರುದ್ರಸ್ವಾಮಿ (50), ಪಕ್ಕದ ಮನೆ ಶೋಭ (60) ಮತ್ತು ಕರೀಬುಲ್ಲ ಎಂಬುವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಗಾಯಾಳು ದಿಜುಧಾರ್ ಎಂಬುವರ ಮನೆಯಲ್ಲಿ ಗ್ಯಾಸ್ ಸಿಲಿಂಡರ್ ಪುಟ 2 ಸೋರಿಕೆಯಾಗಿ ಸ್ಫೋಟಗೊಂಡಿದೆ. ಸ್ಫೋಟದ ತೀವ್ರತೆಗೆ ಎದುರು ಮನೆಯವರಿಗೂ ಗಾಯವಾಗಿದೆ. ಪುಟ 2

### ಬಿಬಿಎಂಪಿ: ಇಬ್ಬರು ಅಧಿಕಾರಿಗಳು ಅಮಾನತು




**ಬೆಂಗಳೂರು:** ಬಿಬಿಎಂಪಿ ದಕ್ಷಿಣ ವಲಯ ಕಚೇರಿ ಮೇಲೆ ಲೋಕಾಯುಕ್ತ ದಾಳಿ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ಪಾಲಿಕೆ ಅಧಿಕಾರಿಗಳನ್ನು ಅಮಾನತುಗೊಳಿಸಲಾಗಿದೆ. ಲೋಕಾಯುಕ್ತ ದಾಳಿ ವೇಳೆ ತಮ್ಮ ಬದಲಿಗೆ ಮಗನನ್ನು ಕಚೇರಿಯಲ್ಲಿ ಕೂರಿಸಿದ್ದ ಎಸ್‌ಡಿಎ ಕವಿತಾ ಹಾಗೂ ಸಹಾಯಕ ಕಂದಾಯ ಅಧಿಕಾರಿ ಸುಜಾತಾ ತಮ್ಮ ಅಧಿಕಾರ ವ್ಯಾಪ್ತಿಯಲ್ಲಿ ಅವ್ಯವಸ್ಥೆ ಇದ್ದರೂ ಕ್ರಮ ತೆಗೆದುಕೊಂಡಿರಲಿಲ್ಲ. ಪುಟ 2

# ಜಾಗ ಕಬ್ಜಾ ಮಾಡುವ ದುಷ್ಕೃತ್ಯ

**ಬೆಂಗಳೂರು:** ನಗರದಲ್ಲಿ ಹಸುಗಳ ಕೆಚ್ಚಲು ಕೊಯ್ದ ಘಟನೆ ಒಂದು ಷಡ್ಯಂತ್ರ ಮತ್ತು ಕಡಿಮೆ ಸಂಖ್ಯೆಯಲ್ಲಿರುವ ಹಿಂದೂಗಳನ್ನು ಓಡಿಸಿ ಜಾಗ ಕಬ್ಜಾ ಮಾಡುವ ದುಷ್ಕೃತ್ಯ ಎಂದು ಬಿಜೆಪಿ ಮುಖಂಡ ಮತ್ತು ಮಾಜಿ ಐಪಿಎಸ್ ಅಧಿಕಾರಿ ಭಾಸ್ಕರ್ ರಾವ್ ಅವರು ಆರೋಪಿಸಿದ್ದಾರೆ.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ"ದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಇಂದು ಮಾತನಾಡಿದ ಅವರು, ಅಲ್ಲಿಂದ 5 ಬಾರಿ ಆಯ್ಕೆಯಾದ ಜಮೀರ್ ಅಹ್ಮದ್ ಮೂರು ಹಸು ಖರೀದಿಸಿ ನೀಡುವುದಾಗಿ ಹೇಳಿಕೆ ನೀಡಿದ್ದು ಅದು ಇನ್ನಷ್ಟು ಆಘಾತಕಾರಿ ಎಂದು ಖಂಡಿಸಿದರು. ಸಂಕ್ರಾಂತಿ ಹಬ್ಬದ ಸಮಯದಲ್ಲಿ ಹೀಗಾಗಿದೆ. ಇವರಿಗೆ ಮಾನವೀಯತೆ ಇಲ್ಲವೇ? ಹಸು ಖರೀದಿಸಿ ಕೊಡಲು ಇದೇನು ಆಟದ ಸಾಮಗ್ರಿಯೇ ಎಂದು ಪ್ರಶ್ನಿಸಿದರು.




ಇದರಿಂದ ಹಿಂದೂಗಳಿಗೆ ದೊಡ್ಡ ಆಘಾತವಾಗಿದೆ. ರಾಜ್ಯ ಸರಕಾರದ ಅದೃಷ್ಟ ಚೆನ್ನಾಗಿದ್ದ ಕಾರಣ ಚಾಮರಾಜಪೇಟೆಯಲ್ಲಿ ರಕ್ತಪಾತ ಆಗಲಿಲ್ಲ; ಕೋಮುದಂಗೆ ಆಗುವ ಸಾಧ್ಯತೆ ಇತ್ತು. ದಾನಿಗಳಾದ ಸಜ್ಜನ್ ರಾವ್ ಅವರು ಪಶುಚಿಕಿತ್ಸೆಗಾಗಿ 100 ವರ್ಷಗಳ ಹಿಂದೆ ಆಸ್ಪತ್ರೆ ಕೊಟ್ಟಿದ್ದರು. 2,227 ಪಶುಗಳು ಅಲ್ಲಿವೆ. ಅಲ್ಲಿ ಯಾರ ಜೊತೆಗೂ ಚರ್ಚಿಸದೆ ಆಸ್ಪತ್ರೆ ಕೆಡವಿ ಅಲ್ಪಸಂಖ್ಯಾತರ ಶಾಲೆ ನಿರ್ಮಿಸಲು ಹೊರಟದ್ದು ದೊಡ್ಡ ತಪ್ಪು ಎಂದು ವಿಶ್ಲೇಷಿಸಿದರು.

ಆಗ ದೊಡ್ಡ ಪ್ರತಿಭಟನೆ ನಡೆದಿತ್ತು. ಈ ಹಸುಗಳ ಮಾಲೀಕರು ಮುಂಚೂಣಿಯಲ್ಲಿದ್ದರು. ಅವರ ಮನೆಯೂ ಮದ್ರಸ ಎದುರುಗಡೆ ಇದೆ. ಜಮೀರ್ ಅಹ್ಮದ್ ಅಲ್ಲಿನ ಹಿಂದೂಗಳಲ್ಲಿ ಭಯ ಹುಟ್ಟಿಸಿ ಜಾಗ ಬಿಟ್ಟು ಹೊರಟು ಹೋಗಬೇಕೆಂದು ಯತ್ನಿಸುತ್ತಿದ್ದಾರೆ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಈ ಘಟನೆ ಖಂಡನೀಯ ಮಾತ್ರವಲ್ಲ ಅಕ್ಷಮ್ಯ ಎಂದು ಅವರು ನುಡಿದರು.

ಒತ್ತಡದ ಕಾರಣ ಸಂಬಂಧವಿಲ್ಲದ ಬಿಹಾರಿ ಹುಚ್ಚ ವ್ಯಕ್ತಿಯನ್ನು ಕರೆತಂದು ಬಂಧಿಸಿ ಸಾಕ್ಷಿ ಪುಟ 2

### ಝಡ್-ಮೋರ್ಹ್ ಸುರಂಗ ಮಾರ್ಗ ಉದ್ಘಾಟಿಸಿದ ಮೋದಿ



**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರದ ಗಂದರ್‌ಬಾಲ್ ಜಿಲ್ಲೆಯಲ್ಲಿ ಮಹತ್ವದ ಮೂಲಸೌಕರ್ಯ ಯೋಜನೆಯಾದ ಝಡ್-ಮೋರ್ಹ್ ಸುರಂಗ ಮಾರ್ಗವನ್ನು ಪ್ರಧಾನಿ ನರೇಂದ್ರ ಮೋದಿ ಅವರು ಸೋಮವಾರ ಉದ್ಘಾಟಿಸಿದರು.

ಬೆಳಗ್ಗೆ ಶ್ರೀನಗರ ವಿಮಾನನಿಲ್ದಾಣದಲ್ಲಿ ಬಂದಿಳಿದ ಮೋದಿ, ಹೆಲಿಕಾಪ್ಟರ್ ಮೂಲಕ ತೆರಳಿ ಸುರಂಗ ಮಾರ್ಗ ಉದ್ಘಾಟಿಸಿದರು. ಮೋದಿ ಜೊತೆಗೆ ಕೇಂದ್ರ ಸಚಿವ ನಿತಿನ್ ಗಡ್ಕರಿ, ಜಮ್ಮು ಮತ್ತು ಕಾಶ್ಮೀರದ ಮುಖ್ಯಮಂತ್ರಿ ಓಮರ್ ಅಬ್ದುಲ್ಲಾ, ರಾಜ್ಯಪಾಲ ಮನೋಜ್ ಸಿನ್ಹಾ ಇತರ ನಾಯಕರು ಜೊತೆಗಿದ್ದರು.

ಉದ್ಘಾಟನೆ ಬಳಿಕ ಸುರಂಗದ ಒಳಗೆ ತೆರಳಿದ ಮೋದಿ, ಅಧಿಕಾರಿಗಳ ಜೊತೆ ಮಾತುಕತೆ ನಡೆಸಿದರು. ಅತ್ಯಂತ ಕಠಿಣ ಹವಾಮಾನದಲ್ಲೂ ಶ್ರಮಪಟ್ಟು ಸುರಂಗ ನಿರ್ಮಿಸಿದ ಪುಟ 2

# ಬಾಕಿ ಪಾವತಿಗೆ ಮನವಿ ಸಲ್ಲಿಕೆ; ಚರ್ಚಿಸಿ ನಿರ್ಧಾರ ಕೈಗೊಳ್ಳುವ ಭರವಸೆ

**ಬೆಂಗಳೂರು:** ಹಿಂದೂಸ್ತಾನ್ ಮಶೀನ್ ಅಂಡ್ ಟೂಲ್ಸ್ ಕಾರ್ಖಾನೆಯ ಹಾಲಿ ಹಾಗೂ ನಿವೃತ್ತ ಉದ್ಯೋಗಿಗಳು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಭೇಟಿಯಾಗಿ ತಮ್ಮ ಸಮಸ್ಯೆಗಳ ಬಗ್ಗೆ ಚರ್ಚಿಸಿ ಮನವಿ ಸಲ್ಲಿಸಿದರು.

ಬೆಂಗಳೂರಿನ ಹೆಚ್ ಎಂಟಿ ಕಚೇರಿಯಲ್ಲಿ ಸಚಿವರನ್ನು ಭೇಟಿಯಾದ ಉದ್ಯೋಗಿಗಳು; ವೇತನ, ಗ್ರಾಚ್ಯುಟಿ, ಭವಿಷ್ಯ ನಿಧಿ ಪಾವತಿ ಸೇರಿದಂತೆ ಇನ್ನಿತರೆ ಸಮಸ್ಯೆಗಳ ಬಗ್ಗೆ ಗಮನ ಸೆಳೆದರು.

ಕೇಂದ್ರ ಬೃಹತ್ ಕೈಗಾರಿಕೆ ಸಇವರೊಬ್ಬರನ್ನು ಜೀವನದಲ್ಲಿ ಮೊತ್ತ ಮೊದಲ ಬಾರಿಗೆ ನಾವು ಭೇಟಿಯಾಗುತ್ತಿದ್ದು, ಅದಕ್ಕೆ ಅವಕಾಶ ಕೊಟ್ಟ ನಿಮಗೆ ಧನ್ಯವಾದಗಳು ಎಂದು ಉದ್ಯೋಗಿಗಳು ಹೇಳಿದರು.

ಸಚಿವರ ಮುಂದೆ ತಮ್ಮ ಸಮಸ್ಯೆಗಳನ್ನು ಹೇಳಿಕೊಂಡ ನಿವೃತ್ತ ಉದ್ಯೋಗಿಗಳು, ನಾವು



ನಿವೃತ್ತರಾಗಿ ಹಲವಾರು ವರ್ಷಗಳೇ ಕಳೆದಿದ್ದರೂ ನಮಗೆ ದೊರೆಯಬೇಕಾದ ಸೌಲಭ್ಯಗಳು ಇನ್ನೂ ಬಂದಿಲ್ಲ. ಕೆಲವರು ಕಾನೂನು ಹೋರಾಟ ನಡೆಸುತ್ತಿದ್ದು, ಇನ್ನೂ ಅನೇಕ ಉದ್ಯೋಗಿಗಳಿಗೆ ಅದು ಸಾಧ್ಯವಾಗುತ್ತಿಲ್ಲ. ಈ ಬಗ್ಗೆ ತಾವು ತುರ್ತಾಗಿ ಗಮನ ಹರಿಸಬೇಕು ಎಂದು ಸಚಿವರಲ್ಲಿ ಮನವಿ ಮಾಡಿದರು.

ನಿವೃತ್ತಿ ನಂತರ ಕಂಪನಿಯಿಂದ ಬರಬೇಕಾದ ನಮ್ಮ ಸೌಲಭ್ಯಗಳು ಬಾರದೆ ಇರುವುದರಿಂದ ನಮಗೆ ಕಾಯಿಲೆ ಬಂದಾಗ ಔಷಧ ಖರೀದಿ ಮಾಡುವುದು ಕೂಡ ಕಷ್ಟವಾಗಿದೆ. ಸುಮಾರು ಐದಾರು ವರ್ಷಗಳಿಂದ ನಮಗೆ ಬರಬೇಕಿರುವ 30ರಿಂದ 40 ಲಕ್ಷ ರೂಪಾಯಿ ಹಣ ಕಂಪನಿಯಲ್ಲಿಯೇ ಉಳಿದಿದೆ. ಈ ಹಣವನ್ನು ತಾವು ಕೊಡಿಸಬೇಕು ಎಂದು ಅವರು ಕೋರಿದರು. ಅಲ್ಲದೆ; ಯಾವುದೇ ಕಾರಣಕ್ಕೂ ದೇಶದ ಪ್ರತಿಷ್ಠೆಯ ಕಂಪನಿಯಾಗಿದ್ದ ಹೆಚ್ ಎಂಟಿಯನ್ನು ಮುಚ್ಚಬಾರದು. ಒಂದು ವೇಳೆ ಅಂತಹ ಸಂದರ್ಭ ಬಂದರೆ ಬಿಹೆಚ್ ಇಎಲ್, ಬಿಇಎಲ್, ಬಿಇಎಂಎಲ್ ದಂತಹ ಕಂಪನಿಗಳಲ್ಲಿ ಹೆಚ್ ಎಂಟಿಯನ್ನು ವಿಲೀನ ಮಾಡಬೇಕು ಅಥವಾ ನೌಕರಿಗಾದರೂ ಆ ಸಂಸ್ಥೆಗಳಲ್ಲಿ ಉದ್ಯೋಗವಕಾಶ ಮಾಡಿಕೊಡಬೇಕು ಎಂದು ಮನವಿ ಮಾಡಿಕೊಂಡರು.

ಕಾಲಮಿತಿಯೊಳಗೆ ತಮ್ಮ ಕಷ್ಟಗಳಿಗೆ ನೀವು ಸ್ಪಂದಿಸಬೇಕು, ಇಲ್ಲವಾದರೆ ನಮಗೆ ಬದುಕೇ ಕಷ್ಟವಾಗಿದೆ ಎಂದು ಉದ್ಯೋಗಿಗಳು ಪುಟ 2

ಮೊದಲ ಪುಟದಿಂದ

## ಉದ್ಘಾಟಿಸಿದ ಮೋದಿ

ಕಾರ್ಮಿಕರ ಜೊತೆಯೂ ಮಾತುಕತೆ ನಡೆಸಿದರು. ಮಧ್ಯ ಕಾಶ್ಮೀರದ ಗಂದರ್‌ಬಾಲ್ ಜಿಲ್ಲೆಯ ಗಗಾಂಗೀರ್ ಮತ್ತು ಸೋನಾಮಾರ್ಗ್ ನಡುವಿನ 6.5 ಕಿಮೀ ಉದ್ದದ 2 ಪಥದ ರಸ್ತೆ ಸುರಂಗದಲ್ಲಿ ತುರ್ತು ಪರಿಸ್ಥಿತಿಗಳಿಗಾಗಿ ಸಮಾನಾಂತರ 7.5 ಮೀಟರ್ ಎಸ್ಕೆಪ್ ಮಾರ್ಗವನ್ನು ನಿರ್ಮಿಸಲಾಗಿದೆ.

## 7 ಮಂದಿಗೆ ಗಾಯ

ಸ್ಫೋಟದ ತೀವ್ರತೆಗೆ ಬಾಗಿಲು, ಕಿಟಕಿ ಚೂರಾಗಿದ್ದು, ಕಿಟಕಿಗೆ ಹಾಕಿದ್ದ ಬಟ್ಟೆ ಸುಟ್ಟು ಕರಕಲಾಗಿದೆ. ಜೊತೆಗೆ ಅಕ್ಕಪಕ್ಕದ ಮನೆಗಳಿಗೂ ಹಾನಿಯುಂಟು ಮಾಡಿದೆ.ಗಾಯಾಳುಗಳನ್ನು ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿದೆ. ಸ್ಥಳಕ್ಕೆ ಪೀಣ್ಯ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ನಾಗಸಂದ್ರದಲ್ಲಿನ ಆರ್.ಎ.ಫ್ಯಾಷನ್ ಗಾರ್ಮೆಂಟ್ಸ್‌ನಲ್ಲಿ ಶಾರ್ಟ್ ಸರ್ಕ್ಯೂಟ್‌ನಿಂದ ಅಗ್ನಿ ಅವಘಡ ಸಂಭವಿಸಿದೆ. 40 ಲಕ್ಷ ರೂಪಾಯಿಗೂ ಹೆಚ್ಚು ಬೆಲೆಬಾಳುವ ಬಟ್ಟೆ ಸೇರಿದಂತೆ ಹಲವು ವಸ್ತುಗಳು ಸುಟ್ಟುಭಸ್ಮವಾಗಿವೆ. ಖ.ಂ.ಫ್ಯಾಷನ್ ಗಾರ್ಮೆಂಟ್ಸ್ ಅರುಣ್ ಮತ್ತು ಶಿವು ಎಂಬುವರಿಗೆ ಸೇರಿದೆ. ಅಗ್ನಿಶಾಮಕ ದಳ ಸಿಬ್ಬಂದಿಯಿಂದ ಬೆಂಕಿ ನಂದಿಸುವ ಕಾರ್ಯ ನಡೆಯುತ್ತಿದೆ. ಘಟನೆ ಸಂಬಂಧ ಪೀಣ್ಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಅಧಿಕಾರಿಗಳು ಅಮಾನತು

ಅಧಿಕಾರ ಸಹ ದುರುಪಯೋಗ ಮಾಡಿಕೊಂಡಿದ್ದಾರೆ. ಈ ಹಿನ್ನೆಲೆ ಇಬ್ಬರನ್ನೂ ಅಮಾನತುಗೊಳಿಸಲಾಗಿದೆ.ಕೆಂಪೇಗೌಡ ನಗರದ ಸಹಾಯಕ ಕಂದಾಯ ಅಧಿಕಾರಿ ಕಚೇರಿಯಲ್ಲಿ ಈ ಘಟನೆ ನಡೆದಿತ್ತು. ಈಗ ಬಗ್ಗೆ ಲೋಕಾಯುಕ್ತ ದೂರಿನ ಅನ್ವಯ ಸಿದ್ದಾಪುರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಎಫ್‌ಐಆರ್ ದಾಖಲಾಗುತ್ತಿದ್ದಂತೆ ಎಸ್‌ಡಿಎ ಕವಿತಾ ಹಾಗೂ ಎಆರ್‌ಓ ಸುಜಾತಾ ಇಬ್ಬರನ್ನು ಬಿಬಿಎಂಪಿ ಅಮಾನತುಗೊಳಿಸಿದೆ.

**ಏನಿದು ಪ್ರಕರಣ?:** ಬಿಬಿಎಂಪಿ ಕಚೇರಿ ಮೇಲೆ ಲೋಕಾಯುಕ್ತ ಅಧಿಕಾರಿಗಳ ತಂಡ ಏಕಾಏಕಿ ದಾಳಿ ನಡೆಸಿದ ವೇಳೆ ಹಲವು ಅಕ್ರಮಗಳು ಬಹಿರಂಗಗೊಂಡಿದ್ದವು. ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ನೇತೃತ್ವದಲ್ಲಿ ಶುಕ್ರವಾರ (ಜ.10) ಬಿಬಿಎಂಪಿಯ 54 ಕಚೇರಿಗಳ ಮೇಲೆ ದಾಳಿ ನಡೆಸಲಾಗಿತ್ತು. ಸೌತ್ ಎಂಡ್ ಸರ್ಕಲ್‌ನಲ್ಲಿರುವ ಸಹಾಯಕ ಕಂದಾಯ ಅಧಿಕಾರಿ ಕಚೇರಿ ಮೇಲೆ ದಾಳಿ ನಡೆಸಿದಾಗ ತಾಯಿ ಬದಲಾಗಿ ಕಚೇರಿ ಲಾಗಿನ್ ಐಡಿ ಪಡೆದು ಮಗ ಕೆಲಸ ಮಾಡುತ್ತಿರುವುದು ಪತ್ತೆಯಾಗಿತ್ತು. ಈ ಸಂಬಂಧ ಲೋಕಾಯುಕ್ತ ಅಧಿಕಾರಿಗಳು ಸಿದ್ದಾಪುರ ಪೊಲೀಸರಿಗೆ ದೂರು ನೀಡಿದ್ದರು. ಪ್ರಕರಣ ದಾಖಲಿಸಿಕೊಂಡ ಪೊಲೀಸರು ಕಚೇರಿಯಲ್ಲಿ ಅನಧಿಕೃತವಾಗಿ ಕೆಲಸ ಮಾಡುತ್ತಿದ್ದ ನವೀನ್ ಎಂಬಾತನನ್ನ ಬಂಧಿಸಿದ್ದರು.ಸೌತ್ ಎಂಡ್ ಸರ್ಕಲ್‌ನಲ್ಲಿರುವ ಸಹಾಯಕ ಕಂದಾಯ ಅಧಿಕಾರಿ ಕಚೇರಿಯಲ್ಲಿ ದ್ವಿತೀಯ ದರ್ಜೆ ಸಹಾಯಕರಾಗಿರುವ ಕವಿತಾ, ತನ್ನ ಬದಲಿಗೆ ಕಚೇರಿ ಲಾಗಿನ್ ಐಡಿಯನ್ನ ಮಗ ನವೀನ್‌ಗೆ ನೀಡಿ ಕೆಲಸಕ್ಕೆ ಕಳಿಸಿದ್ದರು. ದಾಳಿ ನಡೆಸಿದ ವೇಳೆ ವಿಚಾರಿಸಿದಾಗ, ಸಾರ್ವಜನಿಕರಿಗೆ ಆಗುವ ಅನಾನುಕೂಲತೆ ತಪ್ಪಿಸಲು ನಾನು ನನ್ನ ತಾಯಿಯ ಪರವಾಗಿ ಕೆಲಸ ಮಾಡುತ್ತಿದ್ದೇನೆ ಎಂದು ನವೀನ್ ಖುದ್ದು ಒಪ್ಪಿಕೊಂಡಿದ್ದನು ಎಂದು ನ್ಯಾ. ಬಿ. ವೀರಪ್ಪ ಅವರು ಹೇಳಿದ್ದರು. ಅಲ್ಲದೇ ಕವಿತಾ ಅವರು ಸಹಾಯಕರನ್ನಾಗಿ ಗೀತಾ ಎಂಬುವವರನ್ನು ಅಕ್ರಮವಾಗಿ ನೇಮಕ ಮಾಡಿಕೊಂಡಿದ್ದರು. ಹಾಗಾಗಿ ಅಧಿಕಾರ ದುರುಪಯೋಗ ಆರೋಪದ ಮೇಲೆ ಕಚೇರಿ ಮುಖ್ಯಸ್ಥರಾದ ಸುಜಾತ, ಕೇಸ್ ವರ್ಕರ್ ಕವಿತಾ, ಮಗ ನವೀನ್ ವಿರುದ್ಧ ಸಿದ್ದಾಪುರ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

## ಜಾಗ ಕಬ್ಜಾ ಮಾಡುವ ದುಷ್ಕೃತ್ಯ

ಸೃಷ್ಟಿಸುತ್ತಿದ್ದಾರೆ. ನಿಜವಾದ ಅಪರಾಧಿಗಳನ್ನು ಬಂಧಿಸಬೇಕು ಎಂದು ಅವರು ಆಗ್ರಹಿಸಿದರು. ಆ ಕ್ಷೇತ್ರದಲ್ಲಿ ಸ್ವಚ್ಛತೆ ಇಲ್ಲ; ಅಲ್ಲದೆ, ಮಾದಕ ವಸ್ತುಗಳ ತಾಣವಾಗಿದೆ. ಅವರ ವಿರುದ್ಧ ಮಾತನಾಡಿದರೆ ರೌಡಿಶೀಟರ್ ಎಂದು ಹಾಕುತ್ತಾರೆ ಎಂದು ಟೀಕಿಸಿದರು.ಸಿದ್ದರಾಮಯ್ಯನವರು ಜಮೀರ್ ಅಹ್ಮಗೆ ಬಾಲ ಬಿಚ್ಚಲು ಅವಕಾಶ ಮಾಡಿಕೊಟ್ಟಿದ್ದಾರೆ. ಇದು ವಿನಾಶಕಾರಿ ಕೃತ್ಯಕ್ಕೆ ಪ್ರೋತ್ಸಾಹ; ಅಭಿವೃದ್ಧಿ ಕಾರ್ಯವಲ್ಲ ಎಂದ ಅವರು, ಕಲ್ಲೆಸೆಯುವವರು, ಬೆಂಕಿ ಹಚ್ಚುವ ಬ್ರಿಗೇಡ್ ತಯಾರು ಮಾಡುತ್ತಿದ್ದೀರಿ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಅಲ್ಪಸಂಖ್ಯಾತರ ದಾರಿ ತಪ್ಪಿಸುತ್ತಿದ್ದಾರೆ ಎಂದು ದೂರಿದರು.

ಜಮೀರ್ ಅಹ್ಮದ್ ವೈಯಕ್ತಿಕವಾಗಿ ಕೋಟ್ಯಧೀಶ ಆಗುತ್ತಿದ್ದಾರೆ. ಸಿದ್ದರಾಮಯ್ಯನವರಿಗೆ ಏನು ಕೊಡ್ತಾರೋ, ಜಮೀರ್ ಹೇಳಿದ್ದನ್ನೆಲ್ಲ ಮಾಡಿಕೊಂಡು ಹಿಂದೂ ವಿರೋಧಿ ನಡವಳಿಕೆ ಮುಂದುವರೆಸುತ್ತಿದ್ದಾರೆ ಎಂದರು. ಬೇರೆ ಸರಕಾರ ಇದ್ದರೆ ಹೀಗಾಗಲು ಸಾಧ್ಯವಿರಲಿಲ್ಲ; ಬಸವನಗುಡಿ, ಜಯನಗರದಲ್ಲಿ ಇಂಥ ಘಟನೆ ನಡೆಯಲು ಸಾಧ್ಯವೇ ಎಂದು ಕೇಳಿದರು. ಒಂದು ಸಮುದಾಯದ ವಿರುದ್ಧ ಮಾತನಾಡುತ್ತಿಲ್ಲ; ಸಮುದಾಯದ ನಾಯಕತ್ವದ ಬಗ್ಗೆ ಮಾತನಾಡುತ್ತಿದ್ದೇನೆ. ಸಮುದಾಯದವರನ್ನು ದಾರಿ ತಪ್ಪಿಸಿ ಪ್ರಚೋದಿಸಿ ಕ್ರಿಮಿನಲ್ ಕೆಲಸ ಮಾಡಿಸುತ್ತಿದ್ದಾರೆ. 153 ಸೆಕ್ಷನ್ ಅಡಿ ಕೇಸು ದಾಖಲಿಸಬೇಕಿತ್ತು. ಯಾಕೆ ಮಾಡಿಲ್ಲ ಎಂದು ಪ್ರಶ್ನೆಯನ್ನು ಮುಂದಿಟ್ಟರು.ಗೋವು ಸಾಕುವವರನ್ನು ಅಲ್ಲಿಂದ ಓಡಿಸಿ ಆಸ್ಪತ್ರೆ ಕಬ್ಜಾ ಪಡೆಯಲು, ಹಿಂದೂಪರ ಸಂಸ್ಥೆಗಳು ಬೆಳೆಯಬಾರದೆಂದು ಹೀಗೆ ಮಾಡುತ್ತಿದ್ದಾರೆ ಎಂದು ಆರೋಪಿಸಿದರು. ಅಲ್ಲಿ ಗೋವಧೆ ನಿಷೇಧ ಕಾಯ್ದೆಯಡಿ ಪ್ರಕರಣ ದಾಖಲಾಗುತ್ತಿಲ್ಲ ಎಂದು ಟೀಕಿಸಿದರು.ನಿಜವಾದ ಆರೋಪಿಗಳನ್ನು ಬಂಧಿಸಬೇಕು ಎಂದು ಆಗ್ರಹಿಸಿದ ಅವರು, ಸಾವಿರ ಗೋವುಗಳನ್ನು ತಂದು ಆ ಮಾಲೀಕರಿಗೆ ಕೊಟ್ಟರೂ ನಿಮ್ಮ ಪಾಪ ದೂರವಾಗದು ಎಂದು ತಿಳಿಸಿದರು. ಪಶುಗಳ ಆಸ್ಪತ್ರೆಯನ್ನು ಹಸ್ತಾಂತರ ಮಾಡದೆ ಹಾಗೇ ಮುಂದುವರೆಸಿ ಎಂದು ಒತ್ತಾಯಿಸಿದರು. ಬಡತನ, ಸ್ಲಂಗಳಿರುವ ಚಾಮರಾಜಪೇಟೆಯನ್ನು ಅಭಿವೃದ್ಧಿ ಪಡಿಸಬೇಕು. ನೋಟು ಕೊಡುವ ನಾಟಕ ನಿಲ್ಲಿಸಬೇಕು ಎಂದರು. ಸಿದ್ದರಾಮಯ್ಯನವರೇ ನೀವೇ ರಾಜಕೀಯ ಮಾಡುತ್ತಿದ್ದೀರಿ. ಅಭಿವೃದ್ಧಿ ಮಾಡದೆ ಬಹುಸಂಖ್ಯಾತರ ಪಶುಗಳು, ಆಸ್ತಿಗಳ ಮೇಲೆ ಆಕ್ರಮಣ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಬಿಜೆಪಿ ರಾಜ್ಯ ವಕ್ತಾರ ಡಾ. ನರೇಂದ್ರ ರಂಗಪ್ಪ, ಬಿಜೆಪಿ ಬೆಂಗಳೂರು ಕೇಂದ್ರ ಜಿಲ್ಲಾಧ್ಯಕ್ಷ ಸಪ್ತಗಿರಿ ಗೌಡ, ಜಿಲ್ಲಾ ಕಾರ್ಯದರ್ಶಿ ಉದಯ್ ಅವರು ಉಪಸ್ಥಿತರಿದ್ದರು.

## ನಿರ್ಧಾರ ಕೈಗೊಳ್ಳುವ ಭರವಸೆ

ಸಚಿವರಲ್ಲಿ ಅಳಲು ತೋಡಿಕೊಂಡರು.ಉದ್ಯೋಗಿಗಳ ಮನವಿ ಆಲಿಸಿದ ನಂತರ ಮಾತನಾಡಿದ ಸಚಿವ ಕುಮಾರಸ್ವಾಮಿ ಅವರು; ಈ ವಿಷಯ ನನ್ನ ಗಮನಕ್ಕೆ ಈಗಾಗಲೇ ಬಂದಿದೆ. ಉದ್ಯೋಗಿಗಳಿಗೆ ಬಾಕಿ ಇರುವ 361 ಕೋಟಿ ರೂ. ಮೊತ್ತ ಪಾವತಿಸುವ ಬಗ್ಗೆ ಮಾರ್ಗೋಪಾಯ ಹುಡುಕಲಾಗುವುದು. ಈ ಬಗ್ಗೆ ಸಚಿವಾಲಯದ ಉನ್ನತ ಅಧಿಕಾರಿಗಳ ಜತೆ ಖಂಡಿತಾ ಚರ್ಚೆ ಮಾಡಲಾಗುವುದು ಎಂದು ಭರವಸೆ ನೀಡಿದರು.

ಹೆಚ್ ಎಂಟಿ ಕಾರ್ಖಾನೆಯನ್ನು ಪುನಶ್ಚೇತನ ಮಾಡುವುದು ಒಂದು ಭಾಗವಾದರೆ, ನಿವೃತ್ತ ಹಾಗೂ ಹಾಲಿ ಕಾರ್ಮಿಕರ ಬಾಕಿ ಪಾವತಿ ಮಾಡುವುದು ಮತ್ತೊಂದು ಸವಾಲಾಗಿದೆ. ಈ ಬಗ್ಗೆ ನಾನು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಸಚಿವರು ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಸಾರ್ವಜನಿಕ ಸ್ವಾಮ್ಯದ ಕೈಗಾರಿಕೆಗಳಿಗೆ ಕಾಯಕಲ್ಪ ನೀಡುವ ಪ್ರಯತ್ನ ಮಾಡುತ್ತಿದ್ದೇನೆ. ಏಕೆಂದರೆ, ಪ್ರಧಾನಿಗಳ ವಿಕಸಿತ ಭಾರತ್ ಕನಸು ಬಹುದೊಡ್ಡದು. ಆ ಗುರಿ ಮುಟ್ಟಲು ನಾವು ಮೆಕ್ ಇನ್ ಇಂಡಿಯಾ ಹಾಗೂ ಆತ್ಮನಿರ್ಭರ್ ಭಾರತ ಯೋಜನೆಗಳ ಅಡಿಯಲ್ಲಿ ಕೆಲಸ ಮಾಡುತ್ತಿದ್ದೇವೆ ಎಂದು ಸಚಿವ ಕುಮಾರಸ್ವಾಮಿ ಅವರು ಹೇಳಿದರು.

ಪ್ರಧಾನಿಗಳ ನೇತೃತ್ವದಲ್ಲಿ ಸಂಕಷ್ಟದಲ್ಲಿರುವ ವಿವಿಧ ಕೈಗಾರಿಕೆಗಳಿಗೆ ಮರುಜೀವ ಕೊಡುವ ಪ್ರಯತ್ನ ನಡೆಯುತ್ತಿದೆ. ಅದರಲ್ಲಿ ವೈಜಾಗ್ ಸ್ಟೀಲ್, ಭದ್ರಾವತಿಯ ಸರ್ ಎಂ ವಿಶ್ವೇಶ್ವರಯ್ಯ ಕಬ್ಬಿಣ ಮತ್ತು ಅದಿರು ಕಾರ್ಖಾನೆ, ಸೇಲಂ ಸ್ಟೀಲ್ ಇತ್ಯಾದಿ ಸೇರಿವೆ ಎಂದು ಕುಮಾರಸ್ವಾಮಿ ಅವರು ಉದ್ಯೋಗಿಗಳಿಗೆ ಧೈರ್ಯ ತುಂಬಿದರು.

ದೇಶದ ಉದ್ದಗಲಕ್ಕೂ ವಿವಿಧ ಘಟಕಗಳಲ್ಲಿ ನಿವೃತ್ತರಾಗಿರುವ ಹಾಗೂ ಹಾಲಿ ಕೆಲಸ ಮಾಡುತ್ತಿರುವ ಅನೇಕರು ಸಚಿವರನ್ನು ಭೇಟಿಯಾಗಿದ್ದರು.

# ಅನಧಿಕೃತ ಜಾಹೀರಾತುಗಳು ಅಳವಡಿಸಿರುವವರ ಮೇಲೆ ಎಫ್‌ಐಆರ್ ದಾಖಲಿಸಿ: ಮುಖ್ಯ ಆಯುಕ್ತ



**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯಲ್ಲಿ ಅನಧಿಕೃತ ಜಾಹೀರಾತುಗಳನ್ನು ಅಳವಡಿಸಿರುವವರ ಮೇಲೆ ಎಫ್.ಐ.ಆರ್ ದಾಖಲಿಸಲು ಮುಖ್ಯ ಆಯುಕ್ತ ತುಷಾರ್ ಗಿರಿ ನಾಥ್ ರವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬಿಬಿಎಂಪಿ ವ್ಯಾಪ್ತಿಯಲ್ಲಿ ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ಇಂದು ಪಾಲಿಕೆ ಕೇಂದ್ರ ಕಛೇರಿಯಲ್ಲಿ ನಡೆದ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಪಾಲಿಕೆ ವ್ಯಾಪ್ತಿಯಲ್ಲಿ ಎಲ್ಲಿಯೂ ಅನಧಿಕೃತ ಜಾಹೀರಾತುಗಳನ್ನು ಅಳವಡಿಸದಂತೆ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪಾಲಿಕೆಯ ಎಲ್ಲಾ 8 ವಲಯಗಳಲ್ಲಿ ಅನಧಿಕೃತ ಜಾಹೀರಾತುಗಳನ್ನು ಅಳವಡಿಸಿರುವುದನ್ನು ತೆರವುಗೊಳಿಸಿ, ಅಳವಡಿಸಿರುವವರ ಮೇಲೆ ಎಫ್.ಐ.ಆರ್ ದಾಖಲಿಸಬೇಕು. ಮತ್ತೆ ಯಾವುದೇ ರೀತಿಯ ಅನಧಿಕೃತ ಜಾಹೀರಾತುಗಳು ಅಳವಡಿಸದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಸೂಚಿಸಲಾಯಿತು.

**ಆಸ್ತಿಗಳನ್ನು ಟ್ಯಾಕ್ಸ್ ನೆಟ್ ಗೆ ತರಲು ಸೂಚನೆ:**

ಬಿಬಿಎಂಪಿ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆಯಿಂದ ಹೊರಗುಳಿದ ಆಸ್ತಿಗಳನ್ನು ಟ್ಯಾಕ್ಸ್ ನೆಟ್ ಗೆ ತರಬೇಕು. ಈ ಸಂಬಂಧ ಆಯಾ ವಲಯ ವ್ಯಾಪ್ತಿಯಲ್ಲಿ ಎಷ್ಟು ಆಸ್ತಿಗಳು ಆಸ್ತಿ ತೆರಿಗೆ ವ್ಯಾಪ್ತಿಯಿಂದ ಹೊರಗುಳಿದಿವೆ ಎಂಬುದನ್ನು ಗುರುತಿಸಿ ಎಲ್ಲಾ ಆಸ್ತಿಗಳನ್ನು ಆಸ್ತಿ ತೆರಿಗೆ ವ್ಯಾಪ್ತಿಗೆ ತರಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ವೇಳೆ ವಿಶೇಷ ಆಯುಕ್ತರಾದ ಮುನೀಶ್ ಮೌದ್ಗಿಲ್, ಡಾ. ಕೆ. ಹರೀಶ್ ಕುಮಾರ್, ಸುರಳ್ಕರ್ ವಿಕಾಸ್ ಕಿಶೋರ್, ಅವಿನಾಶ್ ಮೆನನ್ ರಾಜೇಂದ್ರನ್, ಪ್ರೀತಿ ಗೆಹ್ಲೋಟ್, ವಲಯ ಆಯುಕ್ತರಾದ ಅರ್ಚನಾ, ವಿನೋತ್ ಪ್ರಿಯಾ, ರಮೇಶ್, ಗಿರೀಶ್, ಕರೀಗೌಡ, ರಮ್ಯಾ, ಪ್ರಧಾನ ಅಭಿಯಂತರರು, ಮುಖ್ಯ ಅಭಿಯಂತರರು ಸೇರಿದಂತೆ ಇನ್ನಿತರೆ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

# ಪತ್ರ ಬರೆದು ಆಕ್ರೋಶ ವ್ಯಕ್ತಪಡಿಸಿದ ಗುತ್ತಿಗೆದಾರರ ಸಂಘ

**ಬೆಂಗಳೂರು:** ಬಾಕಿ ಹಣ ಪಾವತಿ ಆಗದೇ ಇರುವುದು ಸೇರಿದಂತೆ ಗುತ್ತಿಗೆದಾರರ ಸಮಸ್ಯೆಗಳಿಗೆ ಸರ್ಕಾರ ಸ್ಪಂದಿಸುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿರುವ ರಾಜ್ಯ ಗುತ್ತಿಗೆದಾರರ ಸಂಘ ಈ ಸಂಬಂಧ ಡಿಸಿಎಂ ಡಿಕೆ ಶಿವಕುಮಾರ್ ಸೇರಿ 7 ಸಚಿವರಿಗೆ ಪತ್ರ ಬರೆದು ಹೋರಾಟದ ಎಚ್ಚರಿಕೆ ನೀಡಿದೆ. ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್, ಸಚಿವರಾದ ಪ್ರಿಯಾಂಕ್ ಖರ್ಗೆ, ಎಚ್ ಸಿ ಮಹದೇವಪ್ಪ, ಜಮೀರ್ ಅಹ್ಮದ್ ಖಾನ್, ಎನ್ ಎಸ್ ಬೋಸರಾಜು, ದಿನೇಶ್ ಗುಂಡೂರಾವ್ ಮತ್ತು ರಹೀಂ ಖಾನ್ ಅವರಿಗೆ ಗುತ್ತಿಗೆದಾರರ ಸಂಘ ಪತ್ರ ಬರೆದು ಆಕ್ರೋಶ ವ್ಯಕ್ತಪಡಿಸಿದೆ.

ಅಧಿಕಾರಿಗಳು ಹಾಗೂ ಸಚಿವರ ವರ್ತನೆ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿರುವ ಗುತ್ತಿಗೆದಾರರ ಸಂಘ, ತಮ್ಮ ಸಮಸ್ಯೆಗಳಿಗೆ ಸ್ಪಂದಿಸದೇ ಇದ್ದರೆ ಹೋರಾಟದ ಹಾದಿ ಹಿಡಿಯಬೇಕಾಗುತ್ತದೆ ಎಂದು ಈ ಗುತ್ತಿಗೆದಾರರು ಎಚ್ಚರಿಕೆ ನೀಡಿದ್ದಾರೆ.

ಸರ್ಕಾರದಿಂದ ಗುತ್ತಿಗೆದಾರರಿಗೆ ಸಾಕಷ್ಟು ಹಣ ಪಾವತಿ ಬಾಕಿ ಇದೆ. ಈ ಬಗ್ಗೆ ಸಾಕಷ್ಟು ಬಾರಿ ಕೇಳಿದರೂ ಸ್ಪಂದನೆ ಇಲ್ಲ. ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳ ಬಳಿ ಬಾಕಿ ಕೇಳಿದರೆ ಸಚಿವರನ್ನು ಭೇಟಿಯಾಗಿ ಎನ್ನುತ್ತಾರೆ. ಯಾವುದೇ ಸಮಸ್ಯೆಗೂ ಅವರು ಸ್ಪಂದಿಸುವುದಿಲ್ಲ. ಸಚಿವರ ಗಮನಕ್ಕೆ ತಂದರೂ ಏನೂ ಪ್ರಯೋಜನವಾಗಿಲ್ಲ ಎಂದು ಗುತ್ತಿಗೆದಾರರ ಸಂಘವು ತನ್ನ ಪತ್ರದಲ್ಲಿ ಅಸಮಾಧಾನ ಹೊರಹಾಕಿದೆ.ಈ ಸರ್ಕಾರಕ್ಕೆ ಗುತ್ತಿಗೆದಾರರ ಬಗ್ಗೆ ಕರುಣೆ ಇಲ್ಲಎಂದನಿಸುತ್ತದೆ. ಈ ರೀತಿ ನಮ್ಮನ್ನು ಕಡೆಗಣಿಸುತ್ತೀರಿ ಎಂದು ಕನಸಿನಲ್ಲೂ ಭಾವಿಸಿರಲಿಲ್ಲ. ಈ ಪತ್ರ ತಲುಪಿ ಏಳು ದಿನದೊಳಗೆ ಗುತ್ತಿಗೆದಾರರ ಸಭೆ ಕರೆದು ಸಮಸ್ಯೆಗಳ ಬಗ್ಗೆ ಚರ್ಚಿಸಬೇಕು. ಇಲ್ಲವಾದರೆ ಈ ವಿಚಾರವನ್ನು ಸಿಎಂ ಗಮನಕ್ಕೆ ತರಬೇಕಾಗುತ್ತದೆ ಎಂದು ಸಂಘವು ಎಚ್ಚರಿಕೆ ನೀಡಿದೆ.

# ಮಕ್ಕಳ ಪ್ರತಿಭೆ ಹಾಗೂ ಸಾಮರ್ಥ್ಯವನ್ನು ಪ್ರೋತ್ಸಾಹಿಸಿ




ಬೆಂಗಳೂರು: ಮಕ್ಕಳ ಪ್ರತಿಭೆ ಹಾಗೂ ಸಾಮರ್ಥ್ಯವನ್ನು ಪ್ರೋತ್ಸಾಹಿಸಿ ಎಂದು ಜಿಲ್ಲಾ ಗವರ್ನರ್ ರೋಟರಿ ಎನ್.ಎಸ್ ಮಹದೇವ್ ಪ್ರಸಾದ್ ತಿಳಿಸಿದರು. ರೋಟರಿ ಕ್ಲಬ್ ಆಫ್ ಬೆಂಗಳೂರು ಕಲ್ಯಾಣ, ಸಹಯೋಗದೊಂದಿಗೆ ಕಬ್ಬನ್ ಪಾರ್ಕ್‌ನ ಬಾಲಭವನದಲ್ಲಿ ರೋಟರಿ ಮಕ್ಕಳ ಫನ್ ಕಾರ್ನಿವಲ್ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು.

ಪ್ರೇರಣಾದಾಯಕ ಚಟುವಟಿಕೆಗಳಿಂದ ಮಕ್ಕಳ ಭವಿಷ್ಯ ಉಜ್ವಲ, ಅವರ ಪ್ರತಿಭೆ ಅನಾವರಣ ಮಾಡಲು ಇಂತಹ ವೇದಿಕೆಗಳ ಆವಶ್ಯಕ ಎಂದರು.

ಕ್ಲಬ್ ಕಾರ್ಯದರ್ಶಿ ಮತ್ತು ಕಾರ್ಯಕ್ರಮ ನಿರ್ದೇಶಕಿ ರೋಟರಿ ಜಯಂತಿ ಮಂಜುನಾಥ ಮಾತನಾಡಿ, ಆಟಿಸಂ ಸ್ಪೆಕ್ಟ್ರಮ್‌ನಲ್ಲಿರುವ ಮಕ್ಕಳನ್ನು ಪ್ರೋತ್ಸಾಹಿಸಿ, ಆಟಿಸಂ ಬಗ್ಗೆ ಅರಿವು ಮೂಡಿಸುವ ಹಾಗೂ ಮಕ್ಕಳ ಅಭಿರುಚಿ ಬೆಂಬಲಿಸಿ ಪ್ರೋತ್ಸಾಹಿಸುವ ಕಾರ್ಯಕ್ರಮವಾಗಿದೆ ಎಂದು ಇದೇವೇಳೆ ರೋಟರಿ ಮಂಜುಳಾ ವೆಂಕಟೇಶ್ ಅವರ ನೇತೃತ್ವದಲ್ಲಿ 250 ಕ್ಕೂ ಹೆಚ್ಚು ಮಕ್ಕಳು ಯೋಗಾಸನಗಳನ್ನು ಅಭ್ಯಾಸ ಮಾಡಿ ಗ್ಲೋಬಲ್ ಯೋಗಾ ರೆಕಾರ್ಡ್ ಸೇರ್ಪಡೆಗೊಂಡರು. ಕಾರ್ಯಕ್ರಮದ ಮುಖ್ಯ ರೋಟರಿ ರಜೀನಾ ಅರ್ಲುಸ್ವಾಮಿ, ಮೆಂಟರ್ ರೋಟರಿ ಗುರುನಾಗೇಶ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಹಣ ಡಬ್ಲಿಂಗ್ ಮಾಡುವುದಾಗಿ ವಂಚನೆ: 7 ಆರೋಪಿಗಳ ಬಂಧನ

**ಬೆಂಗಳೂರು:** ಹಣ ಡಬ್ಲಿಂಗ್ ಮಾಡಿಕೊಡುವುದಾಗಿ ಹೇಳಿ ವ್ಯಕ್ತಿಯೊಬ್ಬರಿಂದ ಹಣ ಪಡೆದು ವಂಚನೆ ಮಾಡಿದ್ದ 7 ಆರೋಪಿಗಳನ್ನು ಬೆಂಗಳೂರಿನ ಹಲಸೂರು ಗೇಟ್ ಠಾಣಾ ಪೊಲೀಸರು ಬಂಧಿಸಿದ್ದಾರೆ. ಶ್ಯಾಮ್ ಥಾಮಸ್, ಜೋಸ್ ಕರುವಿಲ್ಲ, ಹಾಫರ್ ಸಾಧಿಕ್, ಜೀನ್ ಕಮಲ್, ವಿಜಯ್ ಚಿಂಪ್ಲಕರ್ ಅಮಿತ್ ಅಲಿಯಾಸ್ ದೀಪಕ್, ಊರ್ವಶಿ ಬಂಧಿತ ಆರೋಪಿಗಳು. ಬಂಧಿತ 7 ಆರೋಪಿಗಳು ಎಂಇಡಿಸಿ ಎಂಬ ನಕಲಿ ಕಂಪನಿ ಹೆಸರೇಳಿ ಹಣ ದೋಚಿದ್ದರು ಎನ್ನಲಾಗಿದೆ.

ಮಲೇಷ್ಯಾ ಡೆವಲಪ್ ಮೆಂಟ್ ಬ್ಯಾಂಕ್ ಎಂದು ಆರೋಪಿಗಳು ನಗರತ್ ಪೇಟೆಯಲ್ಲಿ ಕಚೇರಿ ತೆರೆದಿದ್ದರು. ಈ ಮಧ್ಯೆ ಹಣ ನೀಡಿದರೇ ಡಬ್ಲಿಂಗ್ ಮಾಡಿಕೊಡುವುದಾಗಿ ಹೇಳಿ ಕಫಆ ಕಾಂಟ್ರ್ಯಾಕ್ಟರ್ ಜೆ ನವೀನ್ ಎಂಬುವವರಿಗೆ ವಂಚನೆ ಮಾಡಿದ್ದಾರೆ. ನವೀನ್ ಬಳಿ ಎರಡು ಕೋಟಿ ಹಣ ಪಡೆದಿದ್ದರು ಎನ್ನಲಾಗಿದೆ. ಪ್ರಾರಂಭದಲ್ಲಿ 1 ಲಕ್ಷ ಹಣವನ್ನು ಆರ್ ಟಿಜಿಎಸ್ ಮಾಡಿಸಿಕೊಂಡಿದ್ದರು. ಬೇರೆ ಕಚೇರಿಯಲ್ಲಿ ಹಣ ಇಡುವುದಾಗಿ ಹೇಳಿದ್ದ ಆರೋಪಿಗಳು ನಂತರ ಪತ್ತೆಯೇ ಇಲ್ಲ

ತಾನು ಮೋಸ ವಿಚಾರ ತಿಳಿದ ನವೀನ್ ಹಲಸೂರು ಗೇಟ್ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ದೂರು ಆಧರಿಸಿ ಇದೀಗ 7 ಆರೋಪಿಗಳನ್ನ ಖಾಕಿ ಪಡೆ ಬಂಧಿಸಿದೆ.

# ಕಂದಕಕ್ಕೆ ಬಿದ್ದ ಬಸ್; 5 ಸಾವು, 17ಕ್ಕೂ ಅಧಿಕ ಮಂದಿ ಗಾಯ

**ಉತ್ತರಾಖಂಡ:** 100 ಅಡಿ ಆಳದ ಕಂದಕಕ್ಕೆ ಬಸ್ ಬಿದ್ದ ಪರಿಣಾಮ ಐವರು ಸಾವನ್ನಪ್ಪಿ, 17ಕ್ಕೂ ಅಧಿಕ ಮಂದಿ ಗಾಯಗೊಂಡಿರುವ ಘಟನೆ ಪೌರಿ ಜಿಲ್ಲೆಯ ಶ್ರೀನಗರ್ ಪ್ರದೇಶದಲ್ಲಿರುವ ದಹಲ್‌ಚೋರಿಯಲ್ಲಿ ನಡೆದಿದೆ.

ಗಾಯಗೊಂಡವರನ್ನು ಕೂಡಲೇ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ಕೊಡಿಸಲಾಗುತ್ತಿದೆ. ಅಪಘಾತದ ಬಳಿಕ ಪೌರಿಯ ಜಿಲ್ಲಾ ನಿಯಂತ್ರಣ ಕೊಠಡಿಯು ಎಸ್‌ಡಿಆರ್‌ಎಫ್‌ಗೆ ಮಾಹಿತಿ ನೀಡಿದ ಬಳಿಕ ತಂಡವು ಅಪಘಾತ ಸ್ಥಳಕ್ಕೆ ಕೂಡಲೇ ಧಾವಿಸಿತ್ತು. ಅಪಘಾತ ಸಂಭವಿಸಿದಾಗ ಬಸ್ ಪೌರಿಯಿಂದ ದಹಚೋರಿಗೆ ಪ್ರಯಾಣಿಸುತ್ತಿತ್ತು ಎಂದು ಹೇಳಿದರು. ಪೌರಿ ಪೊಲೀಸರು ಮತ್ತು ಸ್ಥಳೀಯ ಜನರು ಅಪಘಾತ ಸ್ಥಳದಲ್ಲಿ ರಕ್ಷಣಾ ಕಾರ್ಯಾಚರಣೆ ನಡೆಸಿದರು.

ಪರಿಣಾಮವಾಗಿ, ಒಟ್ಟು 17 ಗಾಯಾಳುಗಳನ್ನು ಹೊರತೆಗೆದು ಆಸ್ಪತ್ರೆಗೆ ಸಾಗಿಸಲಾಯಿತು ಎಂದು ತಿಳಿಸಿದ್ದಾರೆ. ಸುಮಾರು 10 ಗಾಯಾಳುಗಳನ್ನು ಶ್ರೀನಗರ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಲಾಗಿದೆ, 7–8 ರೋಗಿಗಳನ್ನು ಪೌರಿ ಜಿಲ್ಲೆಯ ಆಸ್ಪತ್ರೆಗೆ ದಾಖಲಿಸಲಾಗಿದೆ.

ಈ ಘಟನೆ ಕುರಿತು ಉತ್ತರಾಖಂಡ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಪ್ರತಿಕ್ರಿಯಿಸಿದ್ದು,ಪೌರಿಯ ಕೇಂದ್ರೀಯ ವಿದ್ಯಾಲಯಕ್ಕೆ ತೆರಳುವ ಮಾರ್ಗದಲ್ಲಿ ಬಸ್ ಅಪಘಾತದಲ್ಲಿ ಐವರು ಸಾವನ್ನಪ್ಪಿರುವುದು ದುಃಖದ ಸಂಗತಿ, ದೇವರು ಆತ್ಮಕ್ಕೆ ಚಿರಶಾಂತಿ ನೀಡಲೆಂದು ಪ್ರಾರ್ಥಿಸುತ್ತೇನೆದುಃಖಿತ ಕುಟುಂಬಕ್ಕೆ ಈ ನೋವನ್ನು ತಡೆದುಕೊಳ್ಳುವ ಶಕ್ತಿಯನ್ನು ದೇವರು ಕೊಡಲಿ ಎಂದು ಪ್ರಾರ್ಥಿಸಿದರು. ಗಾಯಗೊಂಡವರು ಬೇಗ ಚೇತರಿಸಿಕೊಳ್ಳಲಿ ಎಂದರು.

# ಅಪಘಾತ: ಪತ್ರಕರ್ತ ಸಾವು

**ಚಿಕ್ಕಬಳ್ಳಾಪುರ:** ಚಾಲಕನ ನಿಯಂತ್ರಣ ತಪ್ಪಿ ಕಾರು ಅಫಘಾತಕ್ಕೀಡಾಗಿ ಯುವ ಪತ್ರಕರ್ತ ಸಾವನ್ನಪ್ಪಿರುವ ದಾರುಣ ಘಟನೆ ಚಿಕ್ಕಬಳ್ಳಾಪುರ ಜಿಲ್ಲೆಯ ಗುಡಿಬಂಡೆ ತಾಲೂಕಿನ ಮಾಚಹಳ್ಳಿ ಬಳಿ ನಡೆದಿದೆ.

ಮೂಲತಃ ಗುಡಿಬಂಡೆ ನಿವಾಸಿ ಭರತ್ (32) ಮೃತ ದುರ್ದೈವಿ. ಬೆಂಗಳೂರಿನಲ್ಲಿ ಖಾಸಗಿ ಪತ್ರಿಕೆಯಲ್ಲಿ ವಿಶೇಷ ವರದಿಗಾರನಾಗಿ ಭರತ್ ಕೆಲಸ ಮಾಡುತ್ತಿದ್ದ. ಬೆಂಗಳೂರಿನಲ್ಲೇ ವಾಸವಿದ್ದ ಭರತ್, ವಾರಾಂತ್ಯದ ಹಿನ್ನೆಲೆ ಸ್ವಗ್ರಾಮ ಗುಡಿಬಂಡೆಗೆ ಆಗಮಿಸಿದ್ದ. ತಡರಾತ್ರಿ ಬಾಗೇಪಲ್ಲಿಗೆ ತೆರಳುವಾಗ ಅಫಘಾತ ಸಂಭವಿಸಿದೆ.

ಮಾಚಹಳ್ಳಿ ಕೆರೆಯ ಏರಿಯ ಮೇಲೆ ಇದ್ದ ದೇವರ ಕಲ್ಲಿನ ಗುಡಿಗೆ ಕಾರು ಡಿಕ್ಕಿಯಾಗಿದೆ. ಡಿಕ್ಕಿಯ ರಭಸಕ್ಕೆ ಕಾರು ನಜ್ಜುಗುಜ್ಜಾಗಿದೆ. ದೇವರ ಗುಡಿಯ ಮೇಲಿನ ಚಪ್ಪಡಿ ಕಲ್ಲು ಕಾರಿನೊಳಗೆ ತೂರಿದೆ. ಪರಿಣಾಮ ತಲೆಗೆ ಗಂಭೀರ ಗಾಯವಾಗಿ ಸ್ಥಳದಲ್ಲೇ ಭರತ್ ಸಾವನ್ನಪ್ಪಿದ್ದಾನೆ.

ಗುಡಿಬಂಡೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ. ಇನ್ನೂ ಮುಂದಿನ ತಿಂಗಳು 09 ತಿಂಗಳ ಮಗಳ ನಾಮಕರಣ ಸಿದ್ಧತೆಯಲ್ಲಿ ಭರತ್ ತೊಡಗಿಕೊಂಡಿದ್ದ. ಆದ್ರೆ ದುರದೃಷ್ಟವಶಾತ್ ಭರತ್ ಸಾವನ್ನಪ್ಪಿದ್ದು ಮೃತನ ಆಗಲಿಕೆಗೆ ಪತ್ರಕರ್ತ ಮಿತ್ರರು ಕಂಬನಿ ಮಿಡಿದಿದ್ದಾರೆ.

# ಡಿಕೆ ಶಿವಕುಮಾರ್ ಮುಂದಿನ ಮುಖ್ಯಮಂತ್ರಿ

**ಬೆಂಗಳೂರು:** ರಾಜ್ಯದಲ್ಲಿ ಮತ್ತೆ ಸಿಎಂ ಬದಲಾವಣೆ ವಿಚಾರವಾಗಿ ಚರ್ಚೆಗಳು ನಡೆಯುತ್ತಲೇ ಇದ್ದು ಈ ಮಧ್ಯೆ ಡಿಸಿಎಂ ಡಿಕೆ ಶಿವಕುಮಾರ್ ಮುಂದಿನ ಮುಖ್ಯಮಂತ್ರಿಯಾಗಲಿದ್ದಾರೆ ಎಂದು ಕಾಂಗ್ರೆಸ್ ಶಾಸಕ ಹೆಚ್.ಸಿ ಬಾಲಕೃಷ್ಣ ಹೇಳಿದ್ದಾರೆ.



ಶಾಸಕಾಂಗ ಪಕ್ಷದ ಸಭೆಗೂ ಮುನ್ನ ಮಾಧ್ಯಮಗಳ ಜೊತೆ ಮಾತನಾಡಿದ ಬಾಲಕೃಷ್ಣ, ಸಿದ್ದರಾಮಯ್ಯ ಬಳಿಕ ಡಿ.ಕೆ ಶಿವಕುಮಾರ್ ಮುಖ್ಯಮಂತ್ರಿ ಆಗುತ್ತಾರೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಿಎಂ ಆಗುವುದು ಬೇಡ್ವಾ? ಸಿದ್ದರಾಮಯ್ಯ ಬಳಿಕ ಉಪಮುಖ್ಯಮಂತ್ರಿ ಅವರೇ ಸಿಎಂ ಆಗಬೇಕು. ಬೇರೆಯವರು ಆಕಾಂಕ್ಷಿಗಳು ಇದ್ದಾರೆ ಎಂದರು.

ಡಿಕೆ ಶಿವಕುಮಾರ್ ಗೆ ಸಿಎಂ ಸ್ಥಾನ ನೀಡಬೇಕೆಂದು ಒಕ್ಕಲಿಗರ ಸಭೆ ವಿಚಾರ ಕುರಿತು ಪ್ರತಿಕ್ರಿಯಿಸಿದ ಶಾಸಕ ಬಾಲಕೃಷ್ಣ, ಅವರವರ ಜಾತಿ ಅಭಿಮಾನದ ಮೇಲೆ ಹೇಳಿದ್ದಾರೆ. ಈ ಬಗ್ಗೆ ಹೈಕಮಾಂಡ್ ಅಂತಿಮವಾಗಿ ನಿರ್ಧಾರ ಮಾಡುತ್ತೆ. ಶಾಸಕರು ಚರ್ಚೆ ಮಾಡುತ್ತಿಲ್ಲ ಮಾಧ್ಯಮಗಳು ಚರ್ಚೆ ಮಾಡುತ್ತಿವೆ. ಯಾರೋ ಹೇಳಿದರು ಎಂಬ ಕಾರಣಕ್ಕೆ ಹೇಳಿದವರನ್ನೆಲ್ಲ ಸಿಎಂ ಮಾಡಲು ಆಗಲ್ಲ. ಕೆಲವರು ಜಾತಿ ಅಭಿಮಾನದ ಕಾರಣಕ್ಕೆ ಹೇಳಿಕೆ ನೀಡುತ್ತಿದ್ದಾರೆ. ಸಿಎಂ ಯಾರಾಗಬೇಕು ಎಂಬುದನ್ನು ಹೈಕಮಾಂಡ್ ತೀರ್ಮಾನ ಮಾಡುತ್ತದೆ ಎಂದರು.

# ಪುಸ್ತಕಾಭಿರುಚಿ ಬೆಳೆಸುವ ಉದ್ದೇಶ

ಮೊದಲ ಪುಟದಿಂದ




ಉಳಿಸುವ ನಿಟ್ಟಿನಲ್ಲಿ ಪ್ರತಿ ಮನೆಯಲ್ಲಿಯೂ ಒಂದು ಪುಟ್ಟ ಗ್ರಂಥಾಲಯ ಕಟ್ಟುವುದು ಈ ಯೋಜನೆಯ ಕನಸು. ಪ್ರಾಧಿಕಾರ ತಮ್ಮ ಮನೆಗಳಲ್ಲಿ ಗ್ರಂಥಾಲಯ ಆರಂಭಿಸುವ ಇಚ್ಛೆ ಉಳ್ಳವರನ್ನು ಸಂಪರ್ಕಿಸಿ ಆ ಭಾಗದ ಸಾಹಿತಿ ಬರಹಗಾರರನ್ನು ಅವರ ಮನೆಗೆ ಕರೆದೊಯ್ದು, ಅಲ್ಲೊಂದು ಕಾರ್ಯಕ್ರಮವನ್ನು ಆಯೋಜಿಸಿ ಪ್ರಾಧಿಕಾರದ ಪರವಾಗಿ ಅವರಿಗೊಂದು ಪ್ರಮಾಣ ಪತ್ರ ನೀಡಲಾಗುತ್ತದೆ ಎಂದು ಅವರು ವಿವರಿಸಿದರು.

ಪ್ರಾಧಿಕಾರ ಪ್ರಕಟಿಸಿರುವ ಕುಮಾರ ವ್ಯಾಸಭಾರತ ಸಂಪುಟಗಳನ್ನು ಲೋಕಾರ್ಪಣೆಗೊಳಿಸಿದ ಸಿದ್ದರಾಮಯ್ಯ ಅವರು, ಆಡು ಭಾಷೆಯಲ್ಲಿ ಮಹಾ ಕಾವ್ಯ ಕಟ್ಟಿಕೊಟ್ಟ ಹಿರಿಮೆ ಗದುಗಿನ ನಾರಾಣಪ್ಪ ಅವರದ್ದು. ಕುಮಾರವ್ಯಾಸ ಎಂದೇ ಪ್ರಖ್ಯಾತರಾದ ಗದುಗಿನ ನಾರಾಣಪ್ಪ ರಚಿಸಿದ ಕರ್ಣಾಟಭಾರತಕಥಾಮಂಜರಿ' ಕುಮಾರವ್ಯಾಸಭಾರತ ಎಂದೇ ಪ್ರಖ್ಯಾತವಾಗಿದೆ ಎಂದರು.ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ ಗ್ರಂಥಾಲಯ ಫಲಕವನ್ನು ಅನಾವರಣಗೊಳಿಸಿ ನಂತರ ಮಾತನಾಡಿದ ಅವರು, ಮನೆ ಮನೆಯಲ್ಲಿ, ಸಂಘ ಸಂಸ್ಥೆಗಳಲ್ಲಿ ಕಚೇರಿಗಳಲ್ಲಿ ಗ್ರಂಥಾಲಯ ಸ್ಥಾಪನೆ, ಪುಸ್ತಕಗಳ ಖರೀದಿ ಹಾಗೂ ಅವುಗಳನ್ನು ಸುಸಜ್ಜಿತವಾಗಿ ಇಡುವ ಜವಾಬ್ದಾರಿ. ಸದರಿ ಗ್ರಂಥಾಲಯವನ್ನು ಗಣ್ಯರಿಂದ/ ವಿದ್ವಾಂಸರುಗಳಿಂದ / ಕಲಾವಿದರುಗಳಿಂದ ಉದ್ಘಾಟನೆಯನ್ನು ಮಾಡಿಸುವ ಜವಾಬ್ದಾರಿ, ಪ್ರಚಾರದ ಜವಾಬ್ದಾರಿ ಪ್ರಾಧಿಕಾರದ್ದು ಎಂದು ಳಿಸಿದರು.ತಾಲ್ಲೂಕು / ಜಿಲ್ಲಾ ಮಟ್ಟದಲ್ಲಿ ಗ್ರಂಥಾಲಯ ಜಾಗೃತ ಸಮಿತಿ ರಚನೆ, ಗ್ರಂಥಾಲಯ ಸ್ಥಾಪಿಸಲು ಪ್ರೋತ್ಸಾಹ ನೀಡುವುದು, ಅದರ ಜೊತೆ ನಿಕಟ ಸಂಪರ್ಕ ಸಮಿತಿಯ ಜವಾಬ್ದಾರಿ ಆಗಿರುತ್ತದೆ ಎಂದು ಬಿಳಿಮಲೆ ಹೇಳಿದರು.

ಕನ್ನಡ ಸಾಹಿತ್ಯ ಲೋಕದ ಅಜರಾಮರ ಕೃತಿಯಾದ ಕುಮಾರವ್ಯಾಸಭಾರತವನ್ನು ಅತ್ಯಂತ ಕಡಿಮೆ ಬೆಲೆಯಲ್ಲಿ ಓದುಗರಿಗೆ ಒದಗಿಸಲಾಗುವುದೆಂದು ಸುವರ್ಣ ಸಂಭ್ರಮ ಕಾರ್ಯಕ್ರಮದ ನಿಮಿತ್ತ ಕಳೆದ ವರ್ಷ ಗದಗಿನಲ್ಲಿ ಆಚರಿಸಲಾಗಿದ್ದ ಸಮಾರಂಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಸಚಿವರು ಘೋಷಿಸಿದ್ದರು. ಅದರಂತೆ ಕನ್ನಡ ಗಣಕ ಪರಿಷತ್ತು ಈ ಹಿಂದೆ ಪ್ರಕಟಿಸಿದ್ದ ಕುಮಾರವ್ಯಾಸಭಾರತದ ಕೃತಿಯ ಹಕ್ಕುಗಳನ್ನು ಪುಸ್ತಕ ಪ್ರಾಧಿಕಾರ ಪಡೆದುಕೊಂಡು ಈ ಕೃತಿಯನ್ನು ಪ್ರಕಟಿಸಿದೆ. ಕನ್ನಡ ಪುಸ್ತಕ ಪ್ರಾಧಿಕಾರ ಈ ಕುಮಾರವ್ಯಾಸಭಾರತವನ್ನು ಎರಡು ಸಂಪುಟಗಳಲ್ಲಿ ಪ್ರಕಟಿಸಿದೆ. ಈ ಎರಡೂ ಸಂಪುಟಗಳು ಸೇರಿ ಒಟ್ಟು ರೂ.500–00ಗಳ ಬೆಲೆ ನಿಗದಿಪಡಿಸಲಾಗಿದೆ ಎಂದು ನುಡಿದರು.ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಸಚಿವರಾದ ಶಿವರಾಜ್ ತಂಗಡಗಿ, ಇಲಾಖೆ ಕಾರ್ಯದರ್ಶಿ ಡಾ. ಎನ್. ಮಂಜುಳಾ, ಇಲಾಖೆ ನಿರ್ದೇಶಕರಾದ ಡಾ. ಧರಣೀದೇವಿ ಮಾಲಗತ್ತಿ ಹಾಗೂ ಪುಸ್ತಕ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಮಾನಸ, ಕನ್ನಡ ಸಾಹಿತ್ಯ ಅಧ್ಯಕ್ಷರಾದ ಡಾ. ಮಹೇಶ್ ಜೋಶಿ, ಪುಸ್ತಕ ಪ್ರಾಧಿಕಾರದ ಆಡಳಿತಾಧಿಕಾರಿ ಕಿರಣ್ ಸಿಂಗ್ ಸೇರಿದಂತೆ ಸಮಿತಿಯ ಸದಸ್ಯರು ಉಪಸ್ಥಿತರಿದ್ದರು.

# ಸಡಗರದಿಂದ ಜರುಗಿದ ಬಂಡಿಜಾತ್ರೆ ಆಚರಣೆ



**ವರದಿ: ರಾಮಸಮುದ್ರ ಎಸ್.ವೀರಭದ್ರಸ್ವಾಮಿ**

**ಚಾಮರಾಜನಗರ:** ತಾಲೂಕಿನ ಪ್ರಸಿದ್ಧ ಕಸ್ತೂರು ಬಂಡಿ ಜಾತ್ರೆ ಭಾನುವಾರ ಸಡಗರ ಸಂಭ್ರಮದಿಂದ ಸಂಚಾರ ಅವ್ಯವಸ್ಥೆ ಇರದೇ ಯಶಸ್ವಿಯಾಗಿ ನಡೆಯಿತು.

ಕಸ್ತೂರು ಬಂಡಿಜಾತ್ರೆಯೆಂದರೆ ಕೇವಲ ಒಂದೂರಿನ ಹಬ್ಬವಲ್ಲ. ಸುತ್ತಮುತ್ತಲ 23 ಹಳ್ಳಿಗಳಲ್ಲಿ ಹಬ್ಬ ಮಾಡಲಾಗುತ್ತದೆ. ಅಲ್ಲದೇ ಇದು ವರ್ಷದ ಮೊದಲ ಹಬ್ಬವೂ ಈ ಭಾಗಕ್ಕೆ ಆಗಿರುವುದರಿಂದ. ಜಾತ್ರೆಗೆ ಜನ ಸಾಗರವೇ ಹರಿದು ಬಂದಿತು.

ಬಂಡಿ ಜಾತ್ರೆಯಲ್ಲಿ ಒಟ್ಟು 16 ಗ್ರಾಮಗಳ ಬಂಡಿಗಳು ತಮ್ಮ ಗ್ರಾಮಗಳಿಂದ ಬಂದು ದೊಡ್ಡಮ್ಮ ತಾಯಿ ದೇವಾಲಯದ ಮುಂಬಾಗ ಬಂದು ಪೂಜೆ ಸಲ್ಲಿಸಿ ಸ್ವಸ್ಥಾನಗಳಿಗೆ ತೆರಳಿದವು. ಕಸ್ತೂರು, ಮರಿಯಾಲ, ಭೋಗಾಪುರ, ಸಪ್ಪಯ್ಯನಪುರ, ಬಸವನಪುರ, ಕೆಲ್ಲಂಬಳ್ಳಿ, ಮರಿಯಾಲದ ಹುಂಡಿ, ಆನಹಳ್ಳಿ, ಮೂಕಹಳ್ಳಿ, ತೊರವಳ್ಳಿ, ದಾಸನೂರು, ಪುಟ್ಟಯ್ಯನಹುಂಡಿ, ಹೊನ್ನೇಗೌಡನ ಹುಂಡಿ, ಅಂಕುಶರಾಯನಪುರ, ದೊಡ್ಡ ಹೊಮ್ಮ, ಚಿಕ್ಕಹೊಮ್ಮ, ಹೆಗ್ಗವಾಡಿ, ಕಿರಗಸೂರು ಗ್ರಾಮಸ್ಥರು ಜಾತ್ರೆಯನ್ನು ಸಡಗರದಿಂದ ಆಚರಿಸುತ್ತಾರೆ.

ಈ ಎಲ್ಲ ಗ್ರಾಮಗಳ ಜನರು ತಮ್ಮ ಬಂಡಿಗಳನ್ನು ರಂಗುರಂಗಿನ ಬಟ್ಟೆ, ನಾನಾ ಬಗೆಯ ಹೂವು, ಬಾಳೆ ಗೊನೆ, ಕಂಬ, ಕಬ್ಬು, ತೆಂಗಿನ ಕಾಯಿ ಗೊನೆ ಒಳಗೊಂಡಂತೆ ಸಿಂಗರಿಸುತ್ತಾರೆ. ಅದೇ ರೀತಿ ಎತ್ತುಗಳನ್ನೂ ವಿಶೇಷವಾಗಿ ಅಲಂಕಾರ ಮಾಡಿ ಜಾತ್ರೆಗೆ ತರುತ್ತಾರೆ. ಇದು ಸುತ್ತಮುತ್ತಲ ಎಲ್ಲ ಗ್ರಾಮಗಳ ಜನತೆ ಸೇರಿ ಮಾಡುವುದರಿಂದ ಜಾತ್ರೆ ನೆಂಟರಿಷ್ಟರೆಲ್ಲರೂ ಸಹಸ್ರಾರು ಮಂದಿ ನೆರೆಯುತ್ತಾರೆ. ಗ್ರಾಮದ ಪ್ರತಿ ಮನೆಯಲ್ಲೂ ಹಬ್ಬ ಕಳೆಗಟ್ಟುತ್ತದೆ.

ದೊಡ್ಡ ಜಾತ್ರೆಯಾದ ಒಂದು ವಾರದ ನಂತರ ಗ್ರಾಮದಲ್ಲಿ ಮರಿ ಜಾತ್ರೆ ನಡೆಯಲಿದ್ದು, ಅದರಲ್ಲೂ ಸಾವಿರಾರು ಮಂದಿ ಪಾಲ್ಗೊಳ್ಳುತ್ತಾರೆ.

ರಸ್ತೆಯಲ್ಲಿ ಸಂಚಾರ ಸುಗಮ: ಕಸ್ತೂರಿನ ಸಂಪರ್ಕ ರಸ್ತೆಗಳೆಲ್ಲವೂ ಹಾಳಾಗಿದ್ದವು. ಆದರೆ, ಕಳೆದ ವರ್ಷದಿಂದ ಪರಿಸ್ಥಿತಿ ಸಾಕಷ್ಟು ಸುಧಾರಿಸಿದೆ. ಈ ವರ್ಷವಂತೂ ಎಲ್ಲ ರಸ್ತೆಗಳು ಡಾಂಬರೀಕರಣಗೊಂಡಿದ್ದು, ಸಂಚಾರಕ್ಕೆ ಸಹಕಾರಿಯಾಗಿವೆ.

ವಿಶೇಷ ಬಸ್ ಸಂಚಾರ: ಜಾತ್ರೆಗೆ ತೆರಳುವ ಮಂದಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಕೆಎಸ್ಆರ್‌ಟಿಸಿ ವತಿಯಿಂದ ವಿಶೇಷ ಬಸ್ ವ್ಯವಸ್ಥೆ ಮಾಡಲಾಗಿತ್ತು. ಚಾಮರಾಜನಗರ ಜಿಲ್ಲಾ ಪೊಲೀಸ್ ವತಿಯಿಂದ ಮುಂಜಾಗ್ರತಾ ಕ್ರಮಗಳನ್ನ ಅನುಸರಿಸಿದ್ದರು.

ಜಾತ್ರಾ ಮಾಳಕ್ಕೆ ಬರುವ ಎರಡು ಮೂರು ಕಿ.ಮಿ ದೂರದಲ್ಲೆ ನಾಲ್ಕೈದು ಕಡೆ ಬ್ಯಾರಿಕೇಡ್ ಹಾಕಿ ಏಕಮುಖ ಸಂಚಾರ ಮಾಡಲಾಗಿತ್ತು. ಕುದೇರು, ಸಂತೆಮರಳ್ಳಿ ವ್ಯಾಪ್ತಿಯ ಠಾಣಾ ಪೊಲೀಸರು ಆಟೋಗಳಲ್ಲಿ ಸರಗಳ್ಳರ ಬಗ್ಗೆ ಅರಿವ ಮೂಡಿಸುತ್ತಿದ್ದರು.

# ಉಚಿತ ಆರೋಗ್ಯ ತಪಾಸಣಾ ಶಿಬಿರ



**ಚೇಳೂರು:** ಚಿಕ್ಕಬಳ್ಳಾಪುರ ಜಿಲ್ಲಾ ಬ್ರಾಹ್ಮಣ ಸಭಾ, ಅಕ್ಷಯ ಫೌಂಡೇಶನ್ ಟ್ರಸ್ಟ್, ಚೇಳೂರು ತಾ. ಬ್ರಾಹ್ಮಣ ಸಭಾ ಮತ್ತು ಎಂ.ಎಸ್.ರಾಮಯ್ಯ ವೈದ್ಯಕೀಯ ಕಾಲೇಜು ಆಸ್ಪತ್ರೆ ಬೆಂಗಳೂರು. ಇವರ ಸಹಯೋಗದಲ್ಲಿ ಭಾನುವಾರ ಚೇಳೂರು ಕರ್ನಾಟಕ ಪಬ್ಲಿಕ್ ಶಾಲೆಯ ಆವರಣದಲ್ಲಿ ಉಚಿತ ಆರೋಗ್ಯ ತಪಾಸಣಾ ಶಸ್ತ ಚಿಕಿತ್ಸಾ ಶಿಬಿರವನ್ನು ಏರ್ಪಾಡಿಸಲಾಗಿತ್ತು.

ಶಿಬಿರದಲ್ಲಿ ಸುಮಾರು ಎಂಟು ನೂರಕ್ಕೂ ಹೆಚ್ಚು ರೋಗಿಗಳು ಭಾಗವಹಿಸಿ ಚಿಕಿತ್ಸೆ ಪಡೆದರು. ಸಾಮಾನ್ಯ ರೋಗ ವಿಭಾಗ, ಮೂತ್ರ ಪಿಂಡದ ಶಸ್ತ ಚಿಕಿತ್ಸೆ, ನರ ರೋಗ, ಮೂಳೆ ವಿಭಾಗ, ಕ್ಯಾನ್ಸರ್, ಹೃದಯ ಚಿಕಿತ್ಸೆ, ಸ್ತ್ರೀ ರೋಗ ವಿಭಾಗ, ಬಿಪಿ ಶುಗರ್ ವಿಭಾಗ, ಹಲ್ಲಿನ ಚಿಕಿತ್ಸೆ, ಸೇರಿದಂತೆ ಇನ್ನೂ ಆರು ಆರೋಗ್ಯ ಸೇವಾ ಸವಲತ್ತುಗಳನ್ನು ಒಂದು ಸಾವಿರಕ್ಕೂ ಹೆಚ್ಚು ಜನರು ಪಡೆದರು. ಆರೋಗ್ಯ ಶಿಬಿರದಲ್ಲಿ ಮಾನಸ ಕಾಲೇಜು, ಜ್ಞಾನೋದಯ ಪ್ರೌಡಶಾಲೆಯ ಮಕ್ಕಳು ಸೇರಿದಂತೆ ಶಿಕ್ಷಕರು, ಸ್ಥಳಿಯ ಸಂಸ್ಥೆಗಳ ಮುಖಂಡರು ಭಾಗವಹಿಸಿ ಸಹಕಾರ ನೀಡಿದರು.

ಶಿಬಿರದಲ್ಲಿ ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ನಾಗಭೂಷಣ್, ಬಾಗೇಪಲ್ಲಿ ತಾ. ಬ್ರಾಹ್ಮಣ ಸಂಘದ ಅಧ್ಯಕ್ಷ ಎಸ್.ಮುನಿರಾಮಯ್ಯ, ರಘುವೀರಶರ್ಮಾ, ಎಂ.ಎಸ್.ರಾಮಯ್ಯ, ಆಸ್ಪತ್ರೆ ಮುಖ್ಯಸ್ಥ ಲಕ್ಷ್ಮಿನಾರಾಯಣ ಸಹ ಕಾರ್ಯದರ್ಶಿ ವೇಣುಗೋಪಾಲ್, ಪಲಿಚೆರ್ಲು ಪಿ.ಪ್ರಕಾಶ್, ರಘುವೀರಶರ್ಮ, ಎಸ್.ಮುನಿರಾಮಯ್ಯ, ಚೇಳೂರು ತಾ ಬ್ರಾಹ್ಮಣ ಸಮುದಾಯದ ಪಧಾದಿಕಾರಿಗಳು ಭಾಗವಹಿಸಿ ಶಿಭಿರ ಯಶಸ್ವಿ ಮಾಡಿದರು

# ಸ್ವಾಮಿ ವಿವೇಕಾನಂದರ ವೈಚಾರಿಕತೆ ಅಳವಡಿಸಿಕೊಳ್ಳಿ



**ಆನೇಕಲ್:** ದೇಶದ ಯುವ ಜನರು ಸ್ವಾಮಿ ವಿವೇಕಾನಂದರ ಧಾರ್ಮಿಕ ಮತ್ತು ವೈಚಾರಿಕತೆ ಅರ್ಥ ಮಾಡಿಕೊಂಡು ಜೀವನದಲ್ಲಿ ಅಳವಡಿಸಿ ಕೊಂಡು ಮುನ್ನಡೆದರೆ ಉತ್ತಮ ಪ್ರಜೆಗಳಾಗುತ್ತಾರೆ ಎಂದು ಬಿಜೆಪಿ ಪಕ್ಷದ ಹಿರಿಯ ನಾಯಕರಾದ ಟಿ.ಬಿ ಬಾಬು ತಿಳಸಿದರು.

ಅವರು ಸರ್ಜಾಪುರ ಸಮೀಪದ ದೊಮ್ಮಸಂದ್ರ ಗ್ರಾಮದ ಸರ್ಕಾರಿ ಶಾಲಾ ಆವರಣದಲ್ಲಿ ಸ್ವಾಮಿ ವಿವೇಕಾನಂದ ಸೇವಾ ಸಮಿತಿ ವತಿಯಿಂದ ಆಯೋಜಿಸಿದ ಸ್ವಾಮಿ ವಿವೇಕಾನಂದರವರ 162ನೇ ಜಯಂತಿ ಕಾರ್ಯಕ್ರಮದಲ್ಲಿ ಸ್ವಾಮಿ ವಿವೇಕಾನಂದರ ಪುತ್ತಳಿಗೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು.

ವಿವೇಕಾನಂದರು ಜಗತ್ತಿನ ಆಧ್ಯಾತ್ಮಿಕ, ಸಾಂಸ್ಕೃತಿಕ ರಾಯಭಾರಿ. 1893ರಲ್ಲಿ ಚಿಕಾಗೊದಲ್ಲಿ ನಡೆದ ಸರ್ವ ಧರ್ಮ ಸಮ್ಮೇಳನದಲ್ಲಿ ಸರ್ವಧರ್ಮ ಸಮನ್ವಯತೆ ಮತ್ತು ಸೋದರತೆ ಸಂಬಂಧ ಜಗತ್ತಿಗೆ ಪರಿಚಯಿಸಿದರು.

ಯುವಜನರು ಜಾಗ್ರತರಾಗಿ ಸಮಾಜದ ಸಮಸ್ಯೆ ಪರಿಹರಿಸಲು ಸಮನ್ವಯತೆ, ಸಹೋದರ ಭಾವನೆ ಬೆಳೆಸಿಕೊಂಡು ಪ್ರಾಮಾಣಿಕ ಪ್ರಯತ್ನ ಮಾಡಿದರೆ ಭ್ರಷ್ಟಾಚಾರ ಮುಕ್ತ ಸೌಹಾರ್ದಯುತ ಸಮಾಜ ಕಟ್ಟಬಹುದು ಎಂದರು.ಕಾರ್ಯಕ್ರಮದಲ್ಲಿ ಮಾಜಿ ತಾಲೂಕು ಪಂಚಾಯಿತಿ ಸದಸ್ಯ ರವೀಂದ್ರ, ದೊಮ್ಮಸಂದ್ರ ಗ್ರಾಮ ಪಂಚಾಯಿತಿಯ ಅಧ್ಯಕ್ಷ ನರೇಶ್, ಉಪಾಧ್ಯಕ್ಷ ಭೋಜರಾಜ್, ಸದಸ್ಯರಾದ ಮೋಹನ್ ಬಾಬು, ಕೆ.ಸುರೇಶ್, ಮುಖಂಡರಾದ ಎಸ್.ವಿ ಭರತ್, ಮುರಳಿ ಹಾಗೂ ಮತ್ತಿತ್ತರರು ಹಾಜರಿದ್ದರು.

# ಗ್ರಾಮ ಅಭಿವೃದ್ಧಿಯಾದರೆ ರಾಜ್ಯ, ದೇಶ ಅಭಿವೃದ್ಧಿಯಾಗಲಿದೆ



**ಶಿಡ್ಲಘಟ್ಟ :** ಪೂಜ್ಯರಾದ ಡಾ.ವೀರೇಂದ್ರಹೆಗ್ಗಡೆ ಅವರು ಕೃಷಿ, ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳಾದ ಗ್ರಾಮ ಕಲ್ಯಾಣ, ಹಾಲು ಉತ್ಪಾದಕರ ಸಂಘದ ಕಟ್ಟಡ ರಚನೆ, ಜ್ಞಾನದೀಪ, ಹಿಂದೂ ರುದ್ರಭೂಮಿ ಅಭಿವೃದ್ಧಿ, ನವ ಚೇತನ , ಜನಮಂಗಲ, ಸುಜ್ಞಾನ ನಿಧಿ ಶಿಷ್ಯವೇತನ, ಮಾಶಾಸನ, ಶುದ್ಧಗಂಗಾ, ಶ್ರದ್ಧಾ ಕೇಂದ್ರ ಸ್ವಚ್ಛತಾ ಕಾರ್ಯಕ್ರಮಗಳ ಬಗ್ಗೆ ತಾಲ್ಲೂಕು ಯೋಜನಾ ಅಧಿಕಾರಿಗಳಾದ ಸುರೇಶ್ ಗೌಡ ಸವಿವರವಾಗಿ ವಿವರಿಸಿದರು.

ತಾಲ್ಲೂಕಿನ ಗಂಜಿಗುಂಟೆ ವಲಯದ ಜಿ.ಕುರುಬರಹಳ್ಳಿ ಯಲ್ಲಿ ಕದಿರಪ್ಪನಕೆರೆಯನ್ನು ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಪುನಶ್ಚೇತನ ಬಗ್ಗೆ ಏರ್ಪಡಿಸಿದ್ದ ಸಮಾಲೋಚನಾ ಸಭೆಯಲ್ಲಿ ಅವರು ಮಾತನಾಡಿದರು.

ಗ್ರಾಮ ಅಭಿವೃದ್ಧಿಯಾದರೆ ರಾಜ್ಯ, ದೇಶ ಅಭಿವೃದ್ಧಿಯಾಗಲಿದೆ. ಆ ನಿಟ್ಟಿನಲ್ಲಿ ಸಂಸ್ಥೆಯು ಯೋಜನೆಗಳನ್ನು ರೂಪಸಿದೆ ಎಂದ ಅವರು ಕದಿರಪ್ಪನಕೆರೆ ಪುನಶ್ಚೇತನ ಗೊಳಿಸಲು ಕೆರೆ ಸಮಿತಿ ರಚನೆ ಮತ್ತು ಕಾರ್ಯಕಾರಿ ಮಂಡಳಿ ರಚನೆ ಮಾಡಿ ಸಮಿತಿಯ ಜವಾಬ್ದಾರಿಗಳು ಹಾಗೂ ನಿರ್ವಹಣೆ ಬಗ್ಗೆ ವಿವರಣೆ ನೀಡಿ ಪ್ರತಿಯೊಬ್ಬರು ಸದುಪಯೋಗಪಡಿಸಿಕೊಳ್ಳಿ ಎಂದರು.

ಗ್ರಾಮ ಪಂಚಾಯಿತಿ ಸದಸ್ಯರಾದ ಬೈರಾರೆಡ್ಡಿ ಮಾತನಾಡಿ ಯೋಜನೆಯ ಕಾರ್ಯಕ್ರಮಗಳ ಒಗ್ಗಟ್ಟಿನಿಂದ ಊರಿನ ಕೆರೆ ಪುನಶ್ಚೇತನ ಕಾರ್ಯಕ್ರಮ ಮಾಡಲು ಗ್ರಾಮಸ್ಥರಿಗೆ ಮನವಿ ಮಾಡಿದರು.

ಇದೇ ವೇಳೆ ಕೆರೆ ಸಮಿತಿಯ ಅಧ್ಯಕ್ಷರಾಗಿ ಕೆ.ಸಿ. ನಾರಾಯಣಸ್ವಾಮಿ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು ಹಾಗು ಆಂಜಿ ರವರನ್ನು ಕಾರ್ಯಕಾರಿ ಮಂಡಳಿಯ ಸದಸ್ಯರನ್ನಾಗಿ ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಕೆ.ಸಿ.ವೆಂಕಟೇಶ್, ಕೆ.ಎನ್.ಲೋಕೇಶ್, ಮುನೇಶ್, ವೆಂಕಟರೆಡ್ಡಿ, ಅಂಬರೀಶ್, ಹೇಮಂತ್, ಕೆ. ಎನ್.ಮುನಿರೆಡ್ಡಿ, ರಿಜ್ವಾನ್, ಅಜಿತ್, ಮಂಜುನಾಥ ಹಾಗೂ ಕೃಷಿ ಮೇಲ್ವಿಚಾರಕರಾದ ರಂಗನಾಥ್ ಸಿ ಎಸ್ ವಲಯದ ಮೇಲ್ವಿಚಾರಕರಾದ ಮಲ್ಲಿಕಾರ್ಜುನ್ ಸೇವಾ ಪ್ರತಿನಿಧಿಗಳಾದ ನಾರಾಯಣಸ್ವಾಮಿ ಇಂದಿರಾ ಹಾಗೂ ಪ್ರಗತಿ ಬಂಧು ಸಂಘದ ಸದಸ್ಯರು ಹಾಗು ಗ್ರಾಮದ ಪ್ರಮುಖರು ಮುಂತಾದವರು ಹಾಜರಿದ್ದರು.

# ಸ್ವಾಮಿ ವಿವೇಕಾನಂದರು ವಿಶ್ವ ಸಂತ



**ಮಾಗಡಿ :** ಸ್ವಾಮಿ ವಿವೇಕಾನಂದರು ವಿಶ್ವ ಸಂತ. ಅವರ ಹೆಸರೇ ಒಂದು ಅದ್ಭುತವಾದ ದಿವ್ಯ ಚೇತನ, ಎಂದು ಮಾಜಿ ವಿಧಾನ ಪರಿಷತ್ ಸದಸ್ಯ ಹಾಗೂ ಬಿಜೆಪಿ ರಾಜ್ಯ ವಕ್ತಾರ ಅಶ್ವತ್ಥನಾರಾಯಣಗೌಡ ಹೇಳಿದರು.

ತಾಲೂಕಿನ ಚಿಲುಮೆ ಮಠದಲ್ಲಿ ಸ್ವಾಮಿ ವಿವೇಕಾನಂದ ಜಯಂತಿಯ ಪ್ರಯುಕ್ತ ಜಿಲ್ಲಾ ಬಿಜೆಪಿ ಯುವಾಮೋರ್ಚಾ ವತಿಯಿಂದ ನಡೆದ ರಾಷ್ಟ್ರೀಯ ಯುವದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಸ್ವಾಮಿ ವಿವೇಕಾನಂದರ ಚಿಂತನೆಗಳು ಯಾವಾಗಲೂ ಯುವಕರನ್ನು ಪ್ರೇರೇಪಿಸುವಂತಿವೆ, ಅವರಲ್ಲಿ ಹೊಸ ಶಕ್ತಿ ಮತ್ತು ಪ್ರಜ್ಞೆಯನ್ನು ತುಂಬುತ್ತಿವೆ, ಸ್ವಾಮಿ ವಿವೇಕಾನಂದರ ಜಯಂತಿಯನ್ನು ಭಾರತದಲ್ಲಿ ರಾಷ್ಟ್ರೀಯ ಯುವ ದಿನವಾಗಿ ಆಚರಿಸಲಾಗುತ್ತಿದೆ. ರಾಷ್ಟ್ರೀಯ ಯುವ ದಿನದಂದು ವೈಯಕ್ತಿಕ ಅಭಿವೃದ್ಧಿ, ಸಮಾಜ ಮತ್ತು ರಾಷ್ಟ್ರ ನಿರ್ಮಾಣಕ್ಕೆ ಧನಾತ್ಮಕವಾಗಿ ಕೊಡುಗೆ ನೀಡಲು ಯುವಕರನ್ನು ಪ್ರೇರೇಪಿಸಲು ಮತ್ತು ಪ್ರೋತ್ಸಾಹಿಸಲು ಸಹಕಾರಿಯಾಗಿದೆ ಎಂದರು.

ಸ್ವಾಮಿ ವಿವೇಕಾನಂದರ ಬೋಧನೆಗಳು, ಜಗತ್ತಿನಾದ್ಯಂತ ಲಕ್ಷಾಂತರ ಜನರಿಗೆ, ಅದರಲ್ಲೂ ವಿಶೇಷವಾಗಿ ಯುವ ಪೀಳಿಗೆಯ ವೈಯಕ್ತಿಕ ಬೆಳವಣಿಗೆ ಸ್ವಯಂ ಸುಧಾರಣೆ ಹಾಗೂ ಸಾಮಾಜಿಕ ಪ್ರಗತಿಯತ್ತ ಶ್ರಮಿಸಲು ಪ್ರೋತ್ಸಾಹ ಹಾಗೂ ಯುವಕರ ಏಳಿಗೆಗಾಗಿ ಅವರ ಸ್ಪೂರ್ತಿದಾಯಕ ಮಾತುಗಳು ಇಂದಿಗೂ ಪ್ರಸ್ತುತವಾಗಿವೆ ಎಂದರು.

ಬೆಂಗಳೂರು ಗ್ರಾಮಾಂತರ ಜಿಲ್ಲಾ ಬಿಜೆಪಿ ರೈತ ಮೋರ್ಚಾ ಅಧ್ಯಕ್ಷ ಕೆ ಪಿ. ಬೃಂಗೇಶ್ ಮಾತನಾಡಿ, ಸ್ವಾಮಿ ವಿವೇಕಾನಂದರು 1863ರ ಜ.12 ರಂದು ಕೋಲ್ಕತಾದಲ್ಲಿ ಜನಿಸಿ 1893ರಲ್ಲಿ ಚಿಕಾಗೋದಲ್ಲಿ ನಡೆದ ವಿಶ್ವದರ್ಮ ಸಂಸತ್ತಿನಲ್ಲಿ ಭಾಷಣ ಮೂಲಕ ದೊಡ್ಡ ಮಟ್ಟದಲ್ಲಿ ಗುರುತಿಸಿಕೊಂಡರು. ಅವರ ಭಾಷಣ ಇತಿಹಾಸದ ಕ್ಷಣದಲ್ಲಿ ಒಂದಾಗಿದೆ. ಕೇವಲ 30ನೇ ವಯಸ್ಸಿನಲ್ಲಿ ವಿವೇಕಾನಂದರು ಹಿಂದುತ್ವದ ದೃಷ್ಟಿಕೋನದಿಂದ ಸಹೋದರತ್ವದ ಪಾಠವನ್ನು ಜಗತ್ತಿಗೆ ಕಲಿಸಿದರು. ಧರ್ಮಗಳ ಸಂಸತ್ತಿನಲ್ಲಿ ಈ ಯುವ ಸನ್ಯಾಸಿ ಮಾಡಿದ ಭಾಷಣದಿಂದ ಇಡೀ ಜಗತ್ತು ಮಂತ್ರಮುಗ್ದವಾಯಿತು ಎಂದರು.

ಬಿಜೆಪಿ ಮುಖಂಡ ಕೆ.ಆರ್. ಪ್ರಸಾದ್ ಗೌಡ ಮಾತನಾಡಿ, ಜಗತ್ತು ಒಂದು ದೊಡ್ಡ ವ್ಯಾಯಾಮ ಶಾಲೆ, ಇಲ್ಲಿ ನಾವು ಬರುವುದೇ ನಮ್ಮನ್ನು ಬಲಪಡಿಸುವುದಕ್ಕಾಗಿ ಇಂಥಹ ಮಾಣಿಕ್ಯದ ಮಾತುಗಳ ಮೂಲಕವೇ ಜನರನ್ನು ತಲುಪಿದವರು ಸ್ವಾಮಿ ವಿವೇಕಾನಂದರು. ಅವರ ತತ್ವ ಆದರ್ಶಗಳು ನಮ್ಮ ವ್ಯಕ್ತಿತ್ವ ಮತ್ತು ಶೀಲ ನಿರ್ಮಾಣದಲ್ಲಿ ಮಹತ್ವದ ಪಾತ್ರವನ್ನು ನಿರ್ವಹಿಸುತ್ತವೆ ಎಂದರು.

ವಿದ್ಯಾರ್ಥಿಗಳಿಗೆ ಭಗವದ್ಗೀತೆ ಪುಸ್ತಕದ ಜೊತೆಗೆ ನೋಟ್ ಪುಸ್ತಕ ವಿತರಿಸಲಾಯಿತು.

ಸೋಲೂರು ವಿಎಸ್ಎಸ್ಎನ್ ಅಧ್ಯಕ್ಷ ಚಂದ್ರಣ್ಣ, ಜಿಲ್ಲಾ ಯುವಮೋರ್ಚಾ ಅಧ್ಯಕ್ಷ ಜಗನ್ನಾಥ್ ಗೌಡ, ಜಿಲ್ಲಾ ಯುವಮೋರ್ಚಾ ಉಪಾಧ್ಯಕ್ಷ ಧನುಷ್ ವೀರಾಪುರ, ಜಿಲ್ಲಾ ಕಾರ್ಯದರ್ಶಿ ಬಿಡದಿ ಸಂದೀಪ್, ಜಿಲ್ಲಾ ಯುವಮೋರ್ಚಾ ಕಾರ್ಯದರ್ಶಿ ಕಿರಣ್ ಕೆಆರ್ ಕೆಂಚನಹಳ್ಳಿ, ಸಿಎಂ. ಮಂಜುನಾಥ್, ಕುದೂರು ಹೋಬಳಿ ಅಧ್ಯಕ್ಷ ಕಣ್ಣೂರು ನಾಗರಾಜು,ಸೋಲೂರು ಹೋಬಳಿ ಅಧ್ಯಕ್ಷ ಮಂಜುನಾಥ್,ಹಿರಿಯ ಮುಖಂಡರಾದ ಶೇಷಪ್ಪ, ಓಬಿಸಿ ಮೋರ್ಚಾ ಅಧ್ಯಕ್ಷ ತಿಗಳರಪಾಳ್ಯ ಕುಮಾರಸ್ವಾಮಿ, ಕುದೂರು ಹೇಮಂತ್ ಕುಮಾರ್,ನಟರಾಜು,ಗಗನ್,ಮಲ್ಲಿಗುಂಟೆ ಬಾಬು ,ಅದರಂಗಿ ದರಣೀಶ್,ಬಿಸ್ಕೂರು ಬಾಸ್ಕರ್,ಅರಿಶಿನಗುಂಟೆ ರೇಣುಕ,ರಂಗಸ್ವಾಮಿ ಇತರರು ಇದ್ದರು.

# ವಿವೇಕಾನಂದರು ರಾಷ್ಟ್ರ ಪ್ರೇಮದ ಪ್ರತೀಕ



**ಚೇಳೂರು:** ಸ್ವಾಮಿ ವಿವೇಕಾನಂದರ ಸಂದೇಶಗಳಲ್ಲಿ ಭೌತಿಕವಾದಕ್ಕಿಂತಲೂ ಮಾನವತಾವಾದವೇ ಪ್ರಮುಖವಾಗಿದೆ ಸ್ವಾಮಿ ವಿವೇಕಾನಂದರು ರಾಷ್ಟ ಪ್ರೇಮದ ಪ್ರತೀಕ ಎಂದು ಬಾಗೇಪಲ್ಲಿ ಬ್ರಾಹ್ಮಣ ಸಂಘದ ಅಧ್ಯಕ್ಷರಾದ ಎಸ್. ಮುನಿರಾಮಯ್ಯ ರವರು ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಭಾನುವಾರ ನೆಡೆದ ಸ್ವಾಮಿ ವಿವೇಕಾನಂದರ ಜಯಂತಿ ಹಾಗೂ ರಾಷ್ಟಿಯ ಯುವ ಸಪ್ತಾಹದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಜಗತ್ತಿನಾದ್ಯಂತ ಸಾಮಾಜಿಕ, ನೈತಿಕ ಮತ್ತು ಅಧ್ಯಾತ್ಮಿಕ ಮೌಲ್ಯಗಳನ್ನು ಬಿತ್ತರಿಸಿದ ಸ್ವಾಮಿ ವಿವೇಕಾನಂದರು ಶ್ರೇಷ್ಠ ತತ್ವಜ್ಞಾನಿ.

ಧರ್ಮ ಎಂಬುದು ಜಾತಿ ಮತಗಳಿಗೆ ಮೀರಿದ ವಿಶಾಲವಾದ ಮನುಷ್ಯತ್ವದ ವ್ಯಾಪ್ತಿಯನ್ನು ಒಳಗೊಂಡಿದೆ ಎಂಬುದು ಅವರ ಆಶಯವಾಗಿತ್ತು ಎಂದರು. ಶಕ್ತಿಯೇ ಜೀವನ, ನಿಶ್ಯಕ್ತಿಯೇ ಮರಣ ಎಂದು ಪ್ರತಿಪಾದಿಸಿದ ವಿವೇಕಾನಂದರು, ತಮ್ಮ ಅಲ್ಪ ಅವಧಿಯ ಜೀವನವನ್ನು ಸಮಾಜಕ್ಕಾಗಿ ಮುಡಿಪಾಗಿಟ್ಟು ವಿಶ್ವದಾದ್ಯಂತ ಪರ್ಯಟನೆ ಮಾಡಿ ವಿಶ್ವ ಮಾನವ ಸಂದೇಶವನ್ನು ಸಾರಿದರು.

ಪರೋಪಕಾರಕ್ಕಾಗಿ ಬದುಕುವುದೇ ನಿಜವಾದ ಸಾರ್ಥಕ ಜೀವನ ಎಂದಿದ್ದ ವಿವೇಕಾನಂದರು ಯುವ ಪೀಳಿಗೆ ಮಾನಸಿಕ ಮತ್ತು ದೈಹಿಕ ದೃಢತೆಗಳನ್ನು ಬೆಳಸಿಕೊಳ್ಳುವುದು ಮತ್ತು ದೇಶಕ್ಕಾಗಿ ಶ್ರಮಿಸುವುದು ಬಹುಮುಖ್ಯವೆಂಬುದು ಅವರ ಭಾವನೆ ಯಾಗಿತ್ತು ಎಂದರು.

ವಿದ್ಯಾರ್ಥಿಗಳು ಸ್ವಾಮಿ ವಿವೇಕಾನಂದರ ಚಿಂತನೆಗಳ ಬಗ್ಗೆ ಗಮನಹರಿಸಬೇಕಾಗಿದೆ. ಇವರ ಸಂದೇಶದ ಪುಸ್ತಕಗಳನ್ನು ಓದಬೇಕು ಯುವಜನತೆ ದುಶ್ಚಟಗಳಿಗೆ ಒಳಗಾಗದೆ ಇರಲು ಶಾಲಾ ಕಾಲೇಜುಗಳಲ್ಲಿ ವಿವೇಕಾನಂದರ ಸಂದೇಶಗಳ ಬಗ್ಗೆ ಕಾರ್ಯಾಗಾರವನ್ನು ಏರ್ಪಡಿಸ ಬೇಕು. ಒಂದು ವಾರಗಳ ಕಾಲ ನಡೆಯುವ ರಾಷ್ಟಿಯ ಯುವ ಸಪ್ತಾಹದ ಕಾರ್ಯಕ್ರಮಗಳನ್ನು ಯುವಜನತೆ ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ನಾಗಭೂಷಣ್, ಬಾಗೇಪಲ್ಲಿ ತಾ. ಬ್ರಾಹ್ಮಣ ಸಂಘದ, ರಘುವೀರಶರ್ಮಾ, ಎಂ.ಎಸ್.ರಾಮಯ್ಯ, ಆಸ್ಪತ್ರೆ ಮುಖ್ಯಸ್ಥ ಲಕ್ಷ್ಮಿನಾರಾಯಣ, ಚೇಳೂರಿನ ಮುಖಂಡರಾದ ಎ.ಎನ್.ಶ್ರೀನಿವಾಸ್, ರೈತ ಸಂಘದ ಅಧ್ಯಕ್ಷ ಕೆ.ಎನ್.ಸೋಮಶೇಖರ, ಬ್ರಾಹ್ಮಣ ಸಂಘದ ಇಂದ್ರಜಾಲ ರಾಘವೇಂದ್ರ, ಕೆ.ವಿ.ವಿಷ್ಣುಮೂರ್ತಿ, ತಂತ್ರಿ, ಟೀಸ್ಟಾಲ್ ರಾಘವ, ಎಸ್.ನಾಗಭೂಷಣ್, ಬಿ.ಎಸ್.ಸೋಮಶೇಖರ್ ಬಾಬು, ಸರಕಾರಿ ವಿವಿಧ ಶಾಲೆಗಳ ಶಿಕ್ಷಕರು, ಮಕ್ಕಳು ಹಾಜರಿದ್ದರು.

# ಪಿಎಲ್‌ಡಿಬ್ಯಾಂಕ್ ಚುನಾವಣೆ: 40 ನಾಮಪತ್ರ ಸಲ್ಲಿಕೆ

ಶಿಡ್ಲಘಟ್ಟ : ತಾಲ್ಲೂಕಿನ ಪ್ರಾಥಮಿಕ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್‌ನ (ಪಿ.ಎಲ್.ಡಿ.ಬ್ಯಾಂಕ್) ಆಡಳಿತ ಮಂಡಳಿ ನಿರ್ದೇಶಕರ ಸ್ಥಾನಕ್ಕೆ ನಾಮಪತ್ರ ಸಲ್ಲಿಸುವ ಪ್ರಕ್ರಿಯೆ ನಡೆದಿದ್ದು, 40 ನಾಮಪತ್ರಗಳು ಸಲ್ಲಿಕೆಯಾಗಿವೆ. ಶಿಡ್ಲಘಟ್ಟ ನಗರ ಬಿಸಿಎಂ ಬಿ ವರ್ಗ ಮೀಸಲು ಕ್ಷೇತ್ರ, ಆನೂರು ಪರಿಶಿಷ್ಟ ಪಂಗಡ ಮೀಸಲು ಕ್ಷೇತ್ರ, ಅಬ್ಲೂಡು ಸಾಮಾನ್ಯ ಕ್ಷೇತ್ರ, ಮೇಲೂರು ಸಾಮಾನ್ಯ ಕ್ಷೇತ್ರ, ಜಂಗಮಕೋಟೆ ಸಾಮಾನ್ಯ ಕ್ಷೇತ್ರ, ದಿಬ್ಬೂರಹಳ್ಳಿ ಸಾಮಾನ್ಯ ಕ್ಷೇತ್ರ, ದೊಡ್ಡತೇಕಹಳ್ಳಿ ಸಾಮಾನ್ಯ ಕ್ಷೇತ್ರ, ವೈ. ಹುಣಸೇನಹಳ್ಳಿ ಮಹಿಳಾ ಮೀಸಲು ಕ್ಷೇತ್ರ, ಗಂಜಿಗುಂಟೆ ಸಾಮಾನ್ಯ ಕ್ಷೇತ್ರ, ಸಾದಲಿ ಪರಿಶಿಷ್ಟ ಜಾತಿ ಮೀಸಲು ಕ್ಷೇತ್ರ, ಚೀಮಂಗಲ ಮಹಿಳಾ ಮೀಸಲು ಕ್ಷೇತ್ರ, ಪಲಿಚೇರ್ಲು ಹಿಂದುಳಿದ ವರ್ಗ ಎ ಮೀಸಲು ಕ್ಷೇತ್ರ, ಮಳಮಾಚನಹಳ್ಳಿ ಸಾಮಾನ್ಯ ಕ್ಷೇತ್ರ ಹಾಗೂ ಸಾಲಗಾರರಲ್ಲದ ಕ್ಷೇತ್ರಕ್ಕೆ ನಾಮಪತ್ರಗಳ ಸಲ್ಲಿಕೆ ಪ್ರಕ್ರಿಯೆ ಮುಗಿಯಿತು. ಒಟ್ಟು 14 ಕ್ಷೇತ್ರಗಳಿಗೆ ಕಾಂಗ್ರೆಸ್, ಜೆಡಿಎಸ್ ಮತ್ತು ಬಿಜೆಪಿ ಬೆಂಬಲಿತ ಆಕಾಂಕ್ಷಿ ಅಭ್ಯರ್ಥಿಗಳು 40 ನಾಮಪತ್ರಗಳನ್ನು ಸಲ್ಲಿಸಿದ್ದಾರೆ. ನಾಮಪತ್ರಗಳ ಸಲ್ಲಿಕೆಯ ಮೊದಲ ದಿನ ಶುಕ್ರವಾರ 31 ಮಂದಿಯಿಂದ 32 ನಾಮಪತ್ರಗಳು ಸಲ್ಲಿಕೆಯಾಗಿದ್ದವು. ಎರಡನೇ ದಿನ ಶನಿವಾರ 8 ನಾಮಪತ್ರಗಳು ಸಲ್ಲಿಕೆಯಾಗಿದ್ದು, ಒಟ್ಟು 40 ಉಮೇದುವಾರಿಕೆಯನ್ನು ಚುನಾವಣಾಯಾಗಿರುವ ಸಹಕಾರಿ ಅಭಿವೃದ್ಧಿ ಅಧಿಕಾರಿ ಮಂಜುನಾಥ್ ಪಿ.ಎಲ್.ಡಿ.ಬ್ಯಾಂಕ್ ನ ಸಭಾಂಗಣದಲ್ಲಿ ನಾಮಪತ್ರಗಳನ್ನು ಸ್ವೀಕರಿಸಿದರು. ಜ.12 ರಂದು ನಾಮಪತ್ರ ಪರಿಶೀಲನೆ ನಡೆಯಲಿದ್ದು, ಜ.13 ರಂದು ನಾಮಪತ್ರ ವಾಪಸ್ ಪಡೆಯಲು ಕಡೆಯ ದಿನ. ಜನವರಿ–15 ರಂದು ಚಿಹ್ನೆಯೊಂದಿಗೆ ಅರ್ಹ ಅಭ್ಯರ್ಥಿಗಳ ಪಟ್ಟಿ ಪ್ರಕಟಿಸಲಿದ್ದು ಜನವರಿ–19ರಂದು ಮತದಾನ ನಡೆಯಲಿದೆ.

# ಜಾತವಾರ ಹೊಸಹಳ್ಳಿ ಚಿರಂತ್ ಎಂ.ಕಶ್ಯಪ್ ರಾಷ್ಟ್ರೀಯ ಕ್ರೀಡಾಕೂಟಕ್ಕೆ ಆಯ್ಕೆ

**ಚಿಕ್ಕಬಳ್ಳಾಪುರ:** ತಾಲೂಕಿನ ಜಾತವಾರ ಹೊಸಹಳ್ಳಿ ಗ್ರಾಮದ ಚಿರಂತ್.ಎಂ ಕಶ್ಯಪ್ ಜಾರ್ಖಂಡ್‌ನ ರಾಂಚಿಯಲ್ಲಿ ನಡೆದ ರಾಷ್ಟ್ರೀಯ ಅಥ್ಲೆಟಿಕ್ ಕ್ರೀಡಾ ಕೂಟಕ್ಕೆ ಆಯ್ಕೆಯಾಗಿರುವುದಕ್ಕೆ ಚಾಂಪಿಯನ್ ಅಥ್ಲೆಟಿಕ್ ಅಕಾಡೆಮಿ ಶುಭವನ್ನು ಕೋರಿದೆ. ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಚಿರಂತ್‌ಗೆ ಶುಭಕೋರಿ ಬೀಳ್ಕೊಟ್ಟ ಚಾಂಪಿಯನ್ ಅಥ್ಲೆಟಿಕ್ ಅಕಾಡೆಮಿ ಕ್ರೀಡಾಪಟುಗಳು ಮತ್ತು ತರಬೇತುದಾರ ಕೆ.ಚಂದ್ರಕಾಂತ್ ಮಾಧ್ಯಮದೊಂದಿಗೆ ಮಾತನಾಡಿದರು. ಜಾತವಾರ ಹೊಸಹಳ್ಳಿ ಗ್ರಾಮದ ವಕೀಲ ಮಂಜುನಾಥ್, ಶಿಕ್ಷಕಿ ಶ್ರೀದೇವಿ ಅವರ ಪುತ್ರನಾದ ಚಿರಂತ್ ಓದಿನಲ್ಲಿ ಚುರುಕಾಗಿರುವವಂತೆ ಅಥ್ಲೆಟಿಕ್‌ನಲ್ಲಿ ಕೂಡ ಭರವಸೆ ಹುಟ್ಟಿಸಿರುವ ಪ್ರತಿಭಾವಂತ ಆಟಗಾರನಾಗಿದ್ದಾನೆ.ನಗರದ ಚಾಂಪಿಯನ್ ಅಥ್ಲೆಟಿಕ್ ಅಕಾಡೆಮಿಯ ವಿದ್ಯಾರ್ಥಿ ಈತ ನಿತ್ಯವೂ 2 ಗಂಟೆಗೂ ಹೆಚ್ಚುಕಾಲ ಟ್ರಾಕ್‌ನಲ್ಲಿ ಪ್ರಾಕ್ಟೀಸ್ ಮಾಡುತ್ತಾನೆ.ಈವೇಳೆ ತರಬೇತುದಾರರು ಹೇಳಿಕೊಡುವ ಅಂಶಗಳನ್ನು ಪಾಲಿಸಿ ಅದರಂತೆ ಅಭ್ಯಾಸ ಮಾಡಿದ್ದರ ಫಲವಾಗಿ ಸ್ಕೂಲ್ ಗೇಮ್ಸ್ ಫೆಡರೇಷನ್ ಆಫ್ ಇಂಡಿಯಾ ವತಿಯಿಂದ ಜಾರ್ಖಂಡ್‌ನ ರಾಂಚಿಯಲ್ಲಿ ನಡೆಯುತ್ತಿರುವ 14, ವರ್ಷದೊಳಗಿನ ವಯೋಮಾನದ ರಾಷ್ಟ್ರೀಯ ಮಟ್ಟದ ಅಥ್ಲೆಟಿಕ್ ಕ್ರೀಡಾಕೂಟ–2025ರಲ್ಲಿ ಸ್ಥಾನಪಡೆದು ಆಯ್ಕೆಯಾಗಿರುವುದು ಸಂತೋಷ ತಂದಿದೆ ಎಂದರು. ನಮ್ಮ ಜಿಲ್ಲೆಯ ಪ್ರತಿಭಾವಂತ ಅಥ್ಲೆಟಿಕ್ ಕ್ರೀಡಾಪಟುವಾಗಿ ಬೆಳೆಯುವ ಭರವಸೆ ಮೂಡಿಸಿರುವ ಚಿರಂತ್ ಸಾಧನೆ ಕಿರಿಯ ಕ್ರೀಡಾಪಟುಗಳಿಗೆ ಮಾದರಿಯಾಗಿದೆ. 600, ಮೀಟರ್ ಓಟದ 14ವರ್ಷದ ಒಳಗಿನ ಕ್ರೀಡೆಯಲ್ಲಿ ಗೆಲುವು ಕಾಣುವ ಮೂಲಕ ಚಾಂಪಿಯನ್ ಆಗಿ ಹೊರಹೊಮ್ಮಲಿ,ಆಮೂಲಕ ಗುರುಗಳಿಗೆ ತಂದೆತಾಯಿಗಳಿಗೆ ಕೀರ್ತಿತರಲಿ ಎಂಬುದು ರಾಷ್ಟ್ರೀಯ 400ಮೀಟರ್ ಓಟದಲ್ಲಿ ಗೋಲ್ಡ್ ಮೆಡಲ್ ಪಡೆದ ಹಿರಿಯ ಕ್ರೀಡಾಪಟು ಪ್ರವೀಣ್ ಮಾತಾಗಿದೆ. ನಗರದ ಚಾಂಪಿಯನ್ ಅಥ್ಲೆಟಿಕ್ ತಂಡದ ತರಬೇತುದಾರ ಕೆ.ಚಂದ್ರಕಾಂತ್ ಅವರ ಮಾರ್ಗ ದರ್ಶನದಲ್ಲಿ ಅಭ್ಯಾಸ ಮಾಡಿರುವ ಹತ್ತಾರು ಕ್ರೀಡಾ ಪ್ರತಿಭೆಗಳು ಈಗಾಗಲೇ ಜಿಲ್ಲಾ ರಾಜ್ಯ ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಅತ್ಯುತ್ತಮ ಸ್ಥಾನ ಪಡೆದಿದ್ದಾರೆ. ಶುಕ್ರವಾರ ಬೆಂಗಳೂರಿನ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಿಂದ ರಾಂಚಿಗೆ ಪ್ರಯಾಣ ಬೆಳೆಸಿರುವ ಚಿರಂತ್.ಎಂ ಕಶ್ಯಪ್ ಸಹ ಉತ್ತಮ ಸಾಧನೆ ಮೂಲಕ ಜಿಲ್ಲೆಯ ಕೀರ್ತಿಯನ್ನು ರಾಷ್ಟ್ರ ಮಟ್ಟದಲ್ಲಿ ಮೆರೆಸಲಿ ಎಂಬುದು ಕ್ರೀಡಾಪ್ರೇಮಿಗಳ ಆಶಯವಾಗಿದೆ.

# ಕಪ್ಪು ಅಕ್ಕಿ ಬೆಳೆ; ಕೃಷಿ ವೈಜ್ಞಾನಿಕತೆಗೆ ಅಚ್ಚರಿ



ನಾ.ಅಶ್ವಥ್ ಕುಮಾರ್

**ಚಾಮರಾಜನಗರ :** ಸಾಮಾನ್ಯವಾಗಿ ಬಿಳಿ ಅಕ್ಕಿ ಬೆಳೆಯುವುದು ಸಹಜವಾಗಿದೆ. ಕೆಲವೆಡೆ ಕಂಪಕ್ಕಿ ಬೆಳೆಯುವುದುಂಟು. ಇದರ ನಡುವೆ ಇದೀಗ ಕೃಷಿ ಪದ್ದತಿಯಲ್ಲಿ ಕ್ರಾಂತಿದಾಯಕವಾಗಿರುವ ಕಪ್ಪಕ್ಕಿಯನ್ನು ಬೆಳೆದು ಕೃಷಿ ವೈಜ್ಞಾನಿಕತೆಗೆ ಅಚ್ಚರಿ ಮೂಡಿಸಲಾಗಿದೆ.

ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ತಾಲ್ಲೂಕಿನ ಕುಂತೂರು ಗ್ರಾಮದ ರೈತ ನಂಜುಂಡಸ್ವಾಮಿ ರವರು ದೇಸಿ ಭತ್ತದ ತಳಿ ಕಲಾಭತಿಯ ಮೂಲಕ ಕಪ್ಪಕ್ಕಿ ಬೆಳೆಯುವ ಮೂಲಕ ಕರಷಿ ವೈಕ್ಞಾನಿಕತೆಗೆ ಅಚ್ಚರಿಗೆ ಕಾರಣರಾಗಿದ್ದಾರೆ.

ಭತ್ತಲೋಕದ ಕೃಷ್ಣವರ್ಣ, ವೈವಿಧ್ಯದ ಹೆಗ್ಗಳಿಕೆಯಾಗಿರುವ 'ಕಲಾಭತಿ' ತಳಿಯ ಕಪ್ಪು ಭತ್ತವನ್ನು (ಕಪ್ಪಕ್ಕಿ) ರೈತರೊಬ್ಬರು ಬೆಳೆದು ಗಮನ ಸೆಳೆದಿದ್ದಾರೆ. ಚಾಮರಾಜನಗರ ಕೊಳ್ಳೇಗಾಲ ತಾಲೂಕಿನ ಕುಂತೂರು ಗ್ರಾಮದ ರೈತ ಮುಖಂಡ ನಂಜುಂಡಸ್ವಾಮಿ ಈ ವಿಭಿನ್ನ ಪ್ರಯೋಗ ಮಾಡಿದ್ದಾರೆ. ಒಡಿಶಾದ ಕಪ್ಪಕ್ಕಿ ತಳಿಯ ಹೆಸರು ಕಲಾಭತಿ ಇದರ ಪೈರು, ಚಿಗುರು, ಕಾಂಡ ಅಷ್ಟೇ ಯಾಕೆ ಅಕ್ಕಿಯೂ ಕಪ್ಪಗೆ ಇರುತ್ತದೆ.

ಪ್ರಯೋಗ ಗುಣದವರು ಆಗಿರುವ ರೈತ ನಂಜುಂಡ ಸ್ವಾಮಿ ಸ್ವಂತ, ಭೋಗ್ಯ ಮತ್ತು ಗುತ್ತಿಗೆ ಸೇರಿ ಒಟ್ಟು 13 ಎಕರೆಯಲ್ಲಿ ಕೃಷಿ ಮಾಡುತ್ತಿದ್ದಾರೆ. ಕಬ್ಬು, ಬಾಳೆ, ತೆಂಗು ಬೆಳೆದಿದ್ದಾರೆ. 2.5 ಎಕರೆಯಲ್ಲಿ ಸಾವಯವ ವಿಧಾನದಲ್ಲಿ ಭತ್ತದ ಕೃಷಿ ಮಾಡುತ್ತಿದ್ದಾರೆ. ಬನ್ನೂರಿನಿಂದ ಕಲಾಭತಿ ತಳಿಯ 1 ಕೆಜಿ ಬಿತ್ತನೆ ಬೀಜ ತಂದಿದ್ದರು. ಇತರ ತಳಿಗಳ ಮಧ್ಯೆ ಕಪ್ಪು ಭತ್ತವನ್ನು ಹಾಕಿದ್ದರು. ಪ್ರಸ್ತುತ ಇದನ್ನು ಕಟಾವು ಮಾಡಿದ್ದು, 110 ಕೆಜಿ ಕಪ್ಪು ಭತ್ತ ಸಿಕ್ಕಿದೆ.

ರೈತ ನಂಜುಂಡಸ್ವಾಮಿ 110 ಕೆಜಿ ಕಲಾಭತಿ ಭತ್ತದ ಬೀಜವನ್ನು ಸಂರಕ್ಷಣೆ ಮಾಡುವ ಉದ್ದೇಶ ಹೊಂದಿದ್ದಾರೆ. ಮತ್ತೆ ತನ್ನ ಜಮೀನಿನಲ್ಲಿ ಕಪ್ಪಕ್ಕಿ ಬೆಳೆಯಲು ಬಿತ್ತನೆ ಬಳಕೆ ಮಾಡಲಿದ್ದಾರೆ. ಜತೆಗೆ ಬೇರೆ ರೈತರಿಗೂ ಕಪ್ಪಕ್ಕಿ ಬಿತ್ತನೆ ನೀಡಲು ನಿರ್ಧರಿಸಿದ್ದಾರೆ. ಮುಂದಿನ ವರ್ಷಕ್ಕೆ 10 ಎಕರೆಯಲ್ಲಾದರೂ ಈ ತಳಿಯನ್ನು ಬೆಳೆಯಬೇಕೆಂಬ ಉದ್ದೇಶವನ್ನು ಹೊಂದಿದ್ದಾರೆ.

ತಾವು ಬೆಳೆದ ಉತ್ಪನ್ನವನ್ನು ತಾವೇ ಮಾರಾಟ ಮಾಡಲು ಮಾರುಕಟ್ಟೆ ಸೃಷ್ಟಿ ಮಾಡಿಕೊಳ್ಳಬೇಕು ಎಂದು ರೈತ ಮುಖಂಡ ಕುಂತೂರು ನಂಜುಂಡಸ್ವಾಮಿ ಹೇಳಿದ್ದಾರೆ. ಈ ನಿಟ್ಟಿನಲ್ಲಿ ಅಕ್ಕಿಯನ್ನು ನೇರವಾಗಿ ಗ್ರಾಹಕರಿಗೆ ಮಾರಾಟ ಮಾಡಲು ವೇದಿಕೆ ಸಿದ್ಧಪಡಿಸಿಕೊಳ್ಳುತ್ತಿದ್ದೇವೆ. ಸ್ವಾಭಿಮಾನಿ ಸಾವಯವ ಬಳಗ ಎಂಬ ಗುಂಪು ರಚನೆ ಮಾಡಿಕೊಂಡಿದ್ದೇವೆ. ಇದರ ಮೂಲಕ ಅಕ್ಕಿಯನ್ನು ಮಾರಾಟ ಮಾಡಲು ನಿರ್ಧರಿಸಿದ್ದೇವೆ. ಜಿಲ್ಲೆ, ತಾಲೂಕು ಮಟ್ಟದಲ್ಲಿ ಅಂಗಡಿ ತೆರೆದು ಅಕ್ಕಿ ಮತ್ತು ಇತರ ಉತ್ಪನ್ನಗಳನ್ನು ಮಾರಾಟ ಮಾಡುತ್ತೇವೆ ಎಂದಿದ್ದಾರೆ.

ರಾಸಾಯನಿಕ ಬಳಕೆ ಮಾಡಿದರೆ ಭೂಮಿಯ ಗುಣಮಟ್ಟ ಹಾಳಾಗುತ್ತಿದೆ. ವಿಷಾಹಾರದಿಂದ ಜನರ ಆರೋಗ್ಯವೂ ಹಾಳು ಮಾಡಿದಂತೆ ಆಗುತ್ತದೆ. ಈ ನಿಟ್ಟಿನಲ್ಲಿ ನಾನು ರಾಸಾಯನಿಕ ಬಳಕೆ ಮಾಡಿಲ್ಲ. ಸಾವಯವ ವಿಧಾನದಲ್ಲಿ ಉತ್ತಮ ಬೆಳೆ ಬರುತ್ತಿದೆ. ಲಾಭವೂ ಸಿಕ್ಕಿದೆ. ದೇಸಿ ತಳಿಯ ಭತ್ತಗಳನ್ನು ಬೆಳೆದಿದ್ದೇನೆ. ಕಲಾಭತಿ ಎಂಬ ವಿಶೇಷ ತಳಿಯ ಭತ್ತವನ್ನು ಬೆಳೆದಿದ್ದೇನೆ. ಇದನ್ನು ಬಿತ್ತನೆಯಾಗಿ ಬಳಕೆ ಮಾಡುತ್ತೇನೆ. ಬೇರೆ ರೈತರಿಗೂ ನೀಡುತ್ತೇನೆ.

ಸಾವಯವ ಪದ್ಧತಿಯಲ್ಲಿ ವ್ಯವಸಾಯ ಒಂದು ಕಾಲದಲ್ಲಿ ದೇಶದಲ್ಲಿ ಅಸಂಖ್ಯಾತ ಭತ್ತದ ತಳಿಗಳಿದ್ದವು. ಆದರೆ, ದಿನ ಕಳೆದಂತೆ ಇವುಗಳ ಸಂಖ್ಯೆ ಕ್ಷೀಣಿಸಿಬಿಟ್ಟಿತು. ಈಗ ಇರುವ ತಳಿಗಳಲ್ಲಿ ದೇಸಿ ತಳಿಗಳಾದ ರತ್ನಚೂಡಿ, ರಾಜ ಮುಡಿ, ಗಂಧಸಾಲ, ಜೀರಿಗೆ ಸಣ್ಣ, ದೊಡ್ಡ ಭೈರ ನಲ್ಲು ಭತ್ತವನ್ನು ಬೆಳೆದಿದ್ದಾರೆ. ಮಂಡ್ಯದ ಸಾವಯವ ರೈತರಿಂದ ಬಿತ್ತನೆ ತಂದಿದ್ದರು. ಇವು ವಿಶಿಷ್ಟ ಭತ್ತದ ತಳಿಗಳಾಗಿದ್ದು, ಇವುಗಳನ್ನು ಸಾವಯವ ವಿಧಾನದಲ್ಲಿ ಬೆಳೆದಿರುವುದು ಮತ್ತೊಂದು ವಿಶೇಷ. ಕಳೆದ 5 ವರ್ಷಗಳಿಂದ ಭತ್ತ ಬೆಳೆಯುತ್ತಿರುವ ಮಹದೇವಸ್ವಾಮಿಗೆ ಪ್ರಾರಂಭಿಕ ಹಂತದಲ್ಲಿ ಕಡಿಮೆ ಇಳುವರಿ ಬಂದಿತ್ತು.

ಬಳಿಕ ನಂತರದ ವರ್ಷಗಳಲ್ಲಿ ಉತ್ತಮ ಇಳುವರಿ ಸಿಕ್ಕಿದೆ. ಅಲ್ಲದೇ, ಬೇರೆ ತಳಿಯ ಭತ್ತವನ್ನು ಅಕ್ಕಿಯನ್ನಾಗಿ ಮಾರಾಟ ಮಾಡಿದಾಗ ದೊರೆಯುವ ಹಣಕ್ಕಿಂತಲೂ 1 ಸಾವಿರ ರೂ. ಹೆಚ್ಚುವರಿ ಹಣ ಸಿಕ್ಕಿದೆ. ಇದಕ್ಕಾಗಿ ಇವರು ರಾಸಾಯನಿಕ ಔಷಧಗಳ ಖರೀದಿಗಾಗಿ ಹಣ ವ್ಯಯಿಸಿಲ್ಲ. ಜಮೀನಲ್ಲಿ ಕಳೆ ಔಷಧ ಬಳಸದೆಯೇ ಕಳೆಯನ್ನು ನಿಯಂತ್ರಣ ಮಾಡುತ್ತಾರೆ. 20 ದಿನಕ್ಕೆ ಭತ್ತ ನಾಟಿ ಮಾಡುತ್ತಾರೆ. ಗೋ ಕೃಪಾಮೃತ, ದೇಸಿ ಗಂಜಲವನ್ನು ಭೂಮಿಗೆ ನೀಡುತ್ತಾರೆ. ಹಿಂದಿನ ವರ್ಷಗಳಲ್ಲಿ ಸಗಣಿ, ಮಜ್ಜಿಗೆ ಹಾಕಿದ್ದರು. ದಿನದಿಂದ ದಿನಕ್ಕೆ ಭೂಮಿಯ ಗುಣಮಟ್ಟವನ್ನು ಕಾಪಾಡಿಕೊಂಡಿ ಬಂದಿರುವುದರಿಂದ ಉತ್ತಮ ಬೆಳೆ ಬಂದಿದೆ. ನೀರಾವರಿಗಾಗಿ ಬೋರ್ವೆಲ್ ಸೌಲಭ್ಯ ಪಡೆಯುತ್ತಿದ್ದಾರೆ. ಕೃಷಿಗೆ ಬಾಡಿಗೆ ಯಂತ್ರಗಳನ್ನು ಬಳಕೆ ಮಾಡುತ್ತಿದ್ದಾರೆ. ಕೃಷಿ ವಿಜ್ಞಾನ ಕೇಂದ್ರದ ಸಂಪರ್ಕದಲ್ಲಿದ್ದುಕೊಂಡು ಮಾಹಿತಿಗಳನ್ನು ಪಡೆದುಕೊಳ್ಳುತ್ತಿದ್ದಾರೆ. ಇತ್ತೀಚೆ ಗಷ್ಟೇ ಕೃಷಿ ವಿಜ್ಞಾನ ಕೇಂದ್ರದಿಂದ ಇವರ ಜಮೀನಿನಲ್ಲಿ ಭತ್ತದ ಕ್ಷೇತ್ರೋತ್ಸವ ಮಾಡಲಾಗಿತ್ತು.

ಕಪ್ಪಕ್ಕಿಯಲ್ಲಿ ಔಷಧ ಗುಣಗಳಿದ್ದು, ಆರೋಗ್ಯಕ್ಕೆ ತುಂಬಾ ಒಳ್ಳೆಯದು ಎಂದು ಹೇಳಲಾಗುತ್ತದೆ. ಈ ಕಾರಣಕ್ಕೆ ಮಾರುಕಟ್ಟೆಯಲ್ಲಿ ಬ್ಲಾಕ್ ರೈಸ್ಗೆ ಉತ್ತಮ ಬೆಲೆ ಇದೆ. ಆರೋಗ್ಯ ಕಾಳಜಿ ಬಯಸುವ ಗ್ರಾಹಕರು ಕಪ್ಪಕ್ಕಿಯನ್ನು ಖರೀದಿ ಮಾಡುವಲ್ಲಿ ದುಡ್ಡಿನ ಲೆಕ್ಕಾಚಾರ ಹಾಕುವುದಿಲ್ಲ. ಹೀಗಾಗಿ ಸಣ್ಣ ಪ್ರಮಾಣದಲ್ಲಿ ಕಪ್ಪಕ್ಕಿ ಕೃಷಿ ಮಾಡಿದವರೂ ಸೋಲುವುದಿಲ್ಲ ಎಂದೇ ಹೇಳಲಾಗುತ್ತದೆ. ಕಲಾಭತಿ ಭತ್ತದ ಬೆಳೆಯನ್ನು ಜಮೀನುಗಳಲ್ಲಿ ನೋಡುವುದೇ ಒಂದು ಚೆಂದ.



**ಹಚ್ಚ ಹಸಿರಿನ ಭತ್ತದ ಗದ್ದೆಯ ಮಧ್ಯೆ ಕಲಾಭತಿ ಭತ್ತ ವಿಶೇಷವಾಗಿ ಕಾಣುತ್ತದೆ. ಭತ್ತದ ಪೈರು ಎಂದರೆ ಹಸಿರು, ಅಕ್ಕಿ ಎಂದರೆ ಬಿಳಿ ಬಣ್ಣ ಎಂದು ತಿಳಿದಿರುವವರಿಗೆ ಕಲಾಭತಿ ಭತ್ತದ ತಳಿ ಅಚ್ಚರಿ ಮೂಡಿಸುತ್ತದೆ. ಏಕೆಂದರೆ ಇದರ ಪೈರು, ಕಾಂಡ ಕಪ್ಪಾಗಿರುತ್ತದೆ. ಅಕ್ಕಿಯೂ ಸಹ ಕಪ್ಪು ಬಣ್ಣದಿಂದ ಕೂಡಿರುತ್ತದೆ.**

**- ನಂಜುಂಡಸ್ವಾಮಿ**
**,ಪ್ರಗತಿ ಪರ ರೈತ, ಕುಂತೂರು, ಕೊಳ್ಳೇಗಾಲ**

## ಬಿಳಿಗಿರಿರಂಗನಬೆಟ್ಟದಲ್ಲಿನನ್ನಗುರುತುಅಭಿಯಾನ

**ಯಳಂದೂರು:** ತಾಲೂಕಿನ ಬಿಳಿಗಿರಿರಂಗನಬೆಟ್ಟದ ಯರಕನಗದ್ದೆ ಕಾಲೋನಿಯ ಸಮುದಾಯ ಭನವದಲ್ಲಿ ರಾಜ್ಯ ಸರ್ಕಾರದ ವಿಶಿಷ್ಟ ಅಭಿಯಾನವಾಗಿರುವ ನನ್ನ ಗುರುತು ಅಭಿಯಾನದ ಮೊದಲ ಹಂತದ ದಾಖಲೆಗಳನ್ನು ನೀಡುವ ಪ್ರತಿಕ್ರಿಯೆಗೆ ಜಿಪಂ ಉಪಕಾರ್ಯದರ್ಶಿ ಲಕ್ಷ್ಮಿ ಶುಕ್ರವಾರ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿ, ರಾಜ್ಯದಲ್ಲಿ ಎರಡು ಕಡೆ ಮಾತ್ರ ಪ್ರಾಯೋಗಿಕವಾಗಿ ಈ ಯೋಜನೆಗೆ ಚಾಲನೆ ನೀಡಲಾಗಿದೆ. ಪರಿಶಿಷ್ಟ ಜಾತಿ ಹಾಗೂ ವರ್ಗದ ಜನರಿಗೆ ಸರ್ಕಾರದ 13 ಸೇವೆಗಳನ್ನು ಅವರಿದ್ದಲ್ಲಿಗೇ ಕೊಂಡೊಯ್ಯುವ ವಿಶಿಷ್ಟ ಯೋಜನೆ ಇದಾಗಿದೆ. ಒಟ್ಟು 8 ಇಲಾಖೆಗಳ ವ್ಯಾಪ್ತಿಗೆ ಒಳಪಡುವ ಆಧಾರ್ ಗುರುತಿನ ಚೀಟಿ ನೀಡಿಕೆ, ಜನನ,ಮರಣ ಪ್ರಮಾಣ ಪತ್ರ, ಜಾತಿ, ಆದಾಯ ಪ್ರಮಾಣಪತ್ರ, ಪಡಿತರ ಗುರುತಿನ ಚೀಟಿ, ಆಧಾರ್ ಜೋಡಣೆಯೊಂದಿಗೆ ವೈಯುಕ್ತಿಕ ಬ್ಯಾಂಕ್ ಉಳಿತಾಯ ಖಾತೆ, ವಿವಿಧ ಯೋಜನೆಗಳಿ ಪಿಂಚಣಿ ಯೋಜನೆಗಳು, ಆಯುಷ್ಮಾನ್ ಭಾರತ್ ಆರೋಗ್ಯ ಗುರುತಿನ ಚೀಟಿ, ಆರೋಗ್ಯ ವಿಮೆಗಳು, ಇ-ಶ್ರಮ ಗುರುತಿನ ಚೀಟಿ, ಭಾಗ್ಯಲಕ್ಷ್ಮಿ ಯೋಜನೆ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿಯ ಚೀಟಿಗಳನ್ನು ಒದಗಿಸುವ ಕಂದಾಯ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳು, ಯುವಜನ ಮತ್ತು ಸಬಲೀಕರಣ ಸೇವೆಗಳು, ಕಾರ್ಮಿಕ ಮತ್ತು ವಿವಿಧ ಇಲಾಖೆಗಳ ಸಮನ್ವಯದಲ್ಲಿ ಸದರಿ ಅಭಿಯಾನವನ್ನು ಅನುಷ್ಠಾನಗೊಳಿಸುವುದು ಇದರ ಉದ್ದೇಶವಾಗಿದೆ ಎಂದು ಮಾಹಿತಿ ನೀಡಿದರು.

ಪಿಡಿಒ ಶಶಿಕಲಾ ಮಾತನಾಡಿ ಬಿಳಿಗಿರಿರಂಗನಬೆಟ್ಟದಲ್ಲಿ ಈ ಸಂಬಂಧ ಕಳೆದ 3 ತಿಂಗಳಿಂದ ಇದರ ಬಗ್ಗೆ ಸರ್ವೇ ಮಾಡಲಾಗುತ್ತಿದೆ. ಇಲ್ಲಿ ಒಟ್ಟು 750 ಕುಟುಂಬಗಳಿವೆ. ಈ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ ಹಾಗೂ ವರ್ಗದವರಿಗೆ ಮಾತ್ರ ಈ ಸೌಲಭ್ಯ ನೀಡಲು ಅವಕಾಶವಿದೆ. ಬೆಟ್ಟದಲ್ಲಿ ಪರಿಶಿಷ್ಟ ಪಂಗಡಕ್ಕೆ ಸೇರಿದ ಸೋಲಿಗ ಜನಾಂಗವೇ ಹೆಚ್ಚಾಗಿದೆ. ಇದರಲ್ಲಿ ಅನೇಕರು ಸರ್ಕಾರದ ಅನೇಕ ಸೌಲಭ್ಯಗಳನ್ನು ಪಡೆದುಕೊಂಡಿಲ್ಲ. ಹೆಚ್ಚಾಗಿ ಇ-ಶ್ರಮ್ ಕಾರ್ಡ್‌ಗಳು ಹಾಗೂ ವಿವಿಧ ವಿಮಾ ಯೋಜನೆಗಳ ಬಗ್ಗೆ ಮಾಹಿತಿ ಇಲ್ಲ. ಹಾಗಾಗಿ ಎಲ್ಲರನ್ನೂ ಒಂದು ಕಡೆ ಸೇರಿಸಿ ಇದನ್ನು ಮಾಡಿಸಿಕೊಡುವ, ಇರುವ ದಾಖಲೆಗಳನ್ನು ಡಿಜಿ ಲಾಕರ್‌ಗೆ ಸೇರಿಸುವ ಪ್ರಕ್ರಿಯೆಯನ್ನು ಹಮ್ಮಿಕೊಳ್ಳಲಾಗಿದೆ. ಇದೊಂದು ಸರ್ಕಾರದ ಪೈಲಟ್ ಪ್ರಾಜೆಕ್ಟ್ ಆಗಿದ್ದು ರಾಜ್ಯದಲ್ಲಿ ಪ್ರಥಮವಾಗಿ ಬೆಂಗಳೂರು ನಗರ ಹಾಗೂ ಬಿಳಿಗಿರಿರಂಗನಬೆಟ್ಟದಲ್ಲಿ ಅನುಷ್ಠಾನಗೊಳಿಸಲು ತೀರ್ಮಾನಿಸಲಾಗಿದ್ದು. ಈ ಪ್ರಕ್ರಿಯೆಯನ್ನು ನಾಲ್ಕು ಹಂತದಲ್ಲಿ ಬೆಟ್ಟದಲ್ಲಿ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಗ್ರಾಪಂ ಅಧ್ಯಕ್ಷ ಸಿ.ಡಿ. ಮಹಾದೇವ ಉಪಾಧ್ಯಕ್ಷೆ ಕಮಲಮ್ಮ ಸದಸ್ಯರಾದ ಎಚ್. ಪ್ರತೀಪ್‌ಕುಮಾರ್, ಮಾದಮ್ಮ, ರಂಗಮ್ಮ, ಬಸವಣ್ಣ, ಸಾಕಮ್ಮ ಕಾರ್ಯದರ್ಶಿ ನಟರಾಜು ಗ್ರಾಮ ಲೆಕ್ಕಿಗರಾದ ಶರತ್, ಪ್ರವೀಣ್, ನಂದಕುಮಾರ್, ಸಚಿನ್, ಗುರು ಸೇರಿದಂತೆ ಅನೇಕರು ಇದ್ದರು.



## 25 ವರ್ಷ ತುಂಬಿದ ಸಂಘಗಳ ಬೆಳ್ಳಿಹಬ್ಬ ಆಚರಣೆ




**ಮಾಗಡಿ:** 25 ವರ್ಷ ತುಂಬಿದ ಹಾಲು ಉತ್ಪಾದಕ ಸಹಕಾರ ಸಂಘಗಳಿಗೆ ಬೆಳ್ಳಿ ಹಬ್ಬ ಆಚರಿಸಲಾಗುವುದು ಎಂದು ಬಮೂಲ್ ನಿರ್ದೇಶಕ ನರಸಿಂಹಮೂರ್ತಿ ಹೇಳಿದರು.

ತಾಲೂಕಿನ ಮಾದಿಗೊಂಡನಹಳ್ಳಿ ಹಾಲು ಉತ್ಪಾದಕ ಸಹಕಾರ ಸಂಘದ 'ಬೆಳ್ಳಿ ಹಬ್ಬ' ಮಹೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಹಾಲು ಉತ್ಪಾದಕ ಸಹಕಾರ ಸ್ಥಾಪನೆಯಾಗಿ 25 ವರ್ಷಕಳೆದ ಎಲ್ಲಾ ಸಂಘಗಳಿಗೆ ಬೆಂಗಳೂರು ಹಾಲು ಒಕ್ಕೂಟದಿಂದ ಬೆಳ್ಳಿ ಹಬ್ಬ ಆಚರಿಸಲು ಆಡಳಿತ ಮಂಡಳಿ ಚರ್ಚಿಸಿ ಅದರಂತೆ 2 ಲಕ್ಷರೂ ನೀಡಲಾಗುವುದು. ಮಾದಿಗೊಂಡನಹಳ್ಳಿ ಡೇರಿ ಸ್ಥಾಪನೆಯಾಗಿ 30 ವರ್ಷಕಳೆದಿದ್ದು ಬೆಳ್ಳಿ ಹಬ್ಬ ಆಚರಿಸಲಾಗುತ್ತಿದೆ. ಎಲ್ಲಾ ತಾಲೂಕಿಗೆ ಪ್ರತಿ ವರ್ಷ 2 ಡೇರಿಗಳಲ್ಲಿ ಬೆಳ್ಳಿ ಹಬ್ಬ ಆಚರಿಸಿ ಉತ್ಪಾದಕರಿಗೆ ಕೃತಜ್ಞತೆ ಸಲ್ಲಿಸಿ ಸಹಕಾರ ನೀಡುವ ಕೆಲಸ ಮಾಡಲಾಗುತ್ತಿದೆ. ಹಾಲು ಉತ್ಪಾದಕರ ಸಹಕಾರದಿಂದ ಸಂಘದ ಕಟ್ಟಡ ಕಟ್ಟಿ ಬೆಂಗಳೂರು ಹಾಲು ಒಕ್ಕೂಟದಿಂದ ಮೇಲಂತಸ್ಥಿನ ಕಟ್ಟಡ ನಿರ್ಮಿಸಲಾಗಿದೆ. ನಿರುದ್ಯೋಗ ಸಮಸ್ಯೆಯನ್ನು ಹೈನುಗಾರಿಕೆಯಿಂದ ಬಗೆಹರಿಸಲು ಮಾತ್ರ ಸಾಧ್ಯ ಎಂದರು.

ವ್ಯವಸಾಯದ ಜೊತೆಗೆ ಹೈನುಗಾರಿಕೆಯಲ್ಲಿ ತೊಡಗಿಕೊಂಡರೆ ಸ್ವಾವಲಂಭಿ ಜೀವನ ನಡೆಸಲು ಸಾಧ್ಯ. ಪ್ರತಿ 15 ದಿನಕ್ಕೊಮ್ಮೆ ಹಣ ಕೊಡುವ ವ್ಯವಸ್ಥೆ ಹಾಲು ಉತ್ಪಾದಕ ಸಹಕಾರ ಸಂಘದಲ್ಲಿದೆ. ರಾಸುಗಳ ಖಾಯಿಲೆಗೆ ಮನೆ ವೈಜ್ಞಾನಿಕವಾಗಿ ಹೈನುಗಾರಿಕೆ ಮಾಡಿದರೆ ಹೆಚ್ಚು ಲಾಭ ಪಡೆಯಬಹುದು ಎಂದರು.

ಹಾಲಿನ ದರ ಏರಿಕೆ ಮಾಡುವ ವಿಚಾರವಾಗಿ ಜ.9 ರಂದು ಸಚಿವ ವೆಂಕಟೇಶ್ ನೇತೃತ್ವದಲ್ಲಿ ಎಲ್ಲಾ ಒಕ್ಕೂಟದ ಅಧ್ಯಕ್ಷರು, ಎಂಡಿ ಅವರೊಂದಿಗೆ ಸಭೆನಡೆಸಿದ್ದು ಈ ಬಗ್ಗೆ ಸಿಎಂ ಗಮನಕ್ಕೆ ತಂದು ಇನ್ನೆರೆಡು ಮೂರು ದಿನಗಳ ಒಳಗೆ ಸಂಕ್ರಾತಿ ಹಬ್ಬದ ಕೊಡುಗೆಯಾಗಿ ದರ ಏರಿಕೆ ಮಾಡುವ ಬಗ್ಗೆ ಪ್ರಸ್ತಾಪಿಸಲಾಗಿದೆ ಎಂದರು.

ಕಳ್ಳಿಪಾಳ್ಯ ಶ್ರೀಭಕ್ತಮುನೇಶ್ವರ ಕ್ಷೇತ್ರದ ಶ್ರೀ ರಂಗನಾಥಾನಂದ ಸ್ವಾಮೀಜಿ ಮಾತನಾಡಿ, ಪಶು ಆಹಾರದ ಬೆಲೆ, ಪಶುಗಳ ಚಿಕಿತ್ಸೆ ವೆಚ್ಚ ದುಬಾರಿಯಿಂದ ಉತ್ಪಾದಕರಿಗೆ ನಷ್ಟ ಉಂಟಾಗುತ್ತಿದ್ದು ಸರಕಾರ ಹಾಲಿನ ಬೆಲೆ ಏರಿಕೆ ಮಾಡಿ ಆ ಹಣವನ್ನು ನೇರವಾಗಿ ಉತ್ಪಾದಕರಿಗೆ ನೀಡುವ ಕೆಲಸ ಮಾಡಬೇಕು, ಬಾಕಿ ಉಳಿದ ಪ್ರೋತ್ಸಾಹ ದನ ನೀಡಬೇಕು. ನಾನು ಕೂಡ ಪ್ರತಿ ನಿತ್ಯ 120 ಲೀಟರು ಹಾಲು ವಿತರಿಸುತ್ತಿದ್ದೆ ಉತ್ಪಾದಕರ ಕಷ್ಟ ನನಗೂ ಗೊತ್ತಿದೆ, ಉತ್ಪಾದಕರಿಗೆ ಸರಕಾರ ಮತಷ್ಟು ಪೋತ್ಸಾಹ ನೀಡಬೇಕು ಎಂದು ಒತ್ತಾಯಿಸಿದರು.

ಡೇರಿ ಅಧ್ಯಕ್ಷ ವಿ. ನಾಗೇಶ್ ಮಾತನಾಡಿ, ಉತ್ಪಾದಕರು ಉತ್ತಮ ಗುಣ ಮಟ್ಟದ ಹಾಲು ಪೂರೈಕೆ ಮಾಡಿ ಹೆಚ್ಚು ಸಹಕಾರ ನೀಡುತ್ತಿರುವುದರಿಂದ ಡೇರಿ ಉತ್ತಮವಾಗಿ ನಡೆಯುತ್ತಿದ್ದು ಕುದೂರು ಹೋಬಳಿಯಲ್ಲಿ ಉತ್ತಮ ಸಂಘವಾಗಿದೆ ಇದರಿಂದ ಬೆಂಗಳೂರು ಹಾಲು ಒಕ್ಕೂಟ ಉತ್ತಮ ಸಂಘ ಎಂದು ಘೋಷಣೆ ಮಾಡಲು ಚಿಂತಿಸಿದೆ. ಮುಂದಿನ ದಿನಗಳಲ್ಲಿ ರಾಜ್ಯಮಟ್ಟದಲ್ಲಿ ಗುರುತಿಸುವಂತೆ ಪ್ರಮಾಣಿಕವಾಗಿ ಕಾರ್ಯನಿರ್ವಹಿಸುತ್ತೇನೆ ಎಂದರು. ಜಿ.ಪಂ. ಮಾಜಿ ಅಧ್ಯಕ್ಷ ಎಂ.ಕೆ.ಧನಂಜಯ, ಬಮೂಲ್ ನಿರ್ದೇಶಕ ರಾಜಣ್ಣ, ಡೇರಿ ಉಪಾಧ್ಯಕ್ಷ ರಂಗಸ್ವಾಮಯ್ಯ, ರವಿಕುಮಾರು, ಜಯರಾಮಯ್ಯ, ಮಂಜುನಾಥ್, ಈರೇಗೌಡ, ಚಲುವ ರಂಗಯ್ಯ, ಗಂಗನಂಜಯ್ಯ, ನಂಜಪ್ಪ, ರಂಗಸ್ವಾಮಯ್ಯ, ವಿಜಯಲಕ್ಷ್ಮಮ್ಮ, ಈರಮ್ಮ, ಕಾರ್ಯದರ್ಶಿ ಗಂಗಬೋರಯ್ಯ ಇತರರು ಇದ್ದರು.

## ತೆರಿಗೆ ಬಾಕಿ ಉಳಿಸಿಕೊಂಡ ಕಟ್ಟಡಗಳಿಗೆ ಬೀಗ ಮುದ್ರೆ

**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯಲ್ಲಿ ಅತಿ ಹೆಚ್ಚು ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡಿರುವ 830 ವಸತಿಯೇತರ ಕಟ್ಟಡಗಳಿಗೆ ಬೀಗ ಮುದ್ರೆ ಹಾಕಲಾಗಿದೆ ಎಂದು ಕಂದಾಯ ವಿಭಾಗದ ವಿಶೇಷ ಆಯುಕ್ತ ಮುನೀಶ್ ಮೌದ್ಗಿಲ್ ರವರು ತಿಳಿಸಿದರು.

ಪಾಲಿಕೆಯ 8 ವಲಯಗಳಲ್ಲಿ ಅತಿ ಹೆಚ್ಚು ಬಾಕಿ ಆಸ್ತಿ ತೆರಿಗೆ ಪಾವತಿಸದ ಸುಸ್ತಿದಾರರಿಂದ ತ್ವರಿತಗತಿಯಲ್ಲಿ ಆಸ್ತಿ ತೆರಿಗೆಯನ್ನು ಸಂಗ್ರಹಿಸಬೇಕು. ಈ ಪೈಕಿ ಆಯಾ ವಲಯಗಳಲ್ಲಿ ಹೆಚ್ಚು ಬಾಕಿ ಉಳಿಸಿಕೊಂಡಿರುವ ವಸತಿಯೇತರ ಕಟ್ಟಡಗಳಿಗೆ ಬೀಗ ಮುದ್ರೆ ಹಾಕಿ ತ್ವರಿತಗತಿಯಲ್ಲಿ ಬಾಕಿ ಆಸ್ತಿ ತೆರಿಗೆಯನ್ನು ಸಂಗ್ರಹಿಸಲು ಕ್ರಮವಹಿಸಲಾಗುತ್ತಿದೆ.

ಅದರಂತೆ, ಎಲ್ಲಾ ಪರಿಷ್ಕರಣೆ ಪ್ರಕರಣಗಳಲ್ಲಿ, ಆಸ್ತಿಗಳಿಗೆ ಬೀಗಮುದ್ರೆ, ಮುಟ್ಟುಗೋಲು ಮತ್ತು ಜಪ್ತಿ ಮಾರಾಟವನ್ನು ಬಳಸಿಕೊಂಡು ವಸೂಲಾತಿ ಮಾಡಬೇಕಿದೆ. ಈ ಸಂಬಂಧ 1ನೇ ಜನವರಿ 2025 ರಿಂದ 9ನೇ ಜನವರಿ 2025 ರವರೆಗೆ ಅತಿ ಹೆಚ್ಚು ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡಂತಹ 830 ವಸತಿಯೇತರ ಕಟ್ಟಡಗಳಿಗೆ ಬೀಗಮುದ್ರೆ ಹಾಕಲಾಗಿದೆ.

ಕಳೆದ 24 ಗಂಟೆಗಳಲ್ಲಿ ಎಲ್ಲಾ 08 ವಲಯಗಳು ಸೇರಿದಂತೆ 182 ವಸತಿಯೇತರ ಕಟ್ಟಡಗಳಿಗೆ ಬೀಗಮುದ್ರೆ ಹಾಕಲಾಗಿದೆ. ಆಯಾ ವಲಯ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಸಂಗ್ರಹಿಸುವ ವಿಚಾರವಾಗಿ ಸೂಕ್ತ ಕ್ರಮಗಳನ್ನು ಕೈಗೊಳ್ಳಲು ವಲಯ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

## ವಿಜಯಪುರದಲ್ಲಿ ಮೈಸೂರು ಸ್ಯಾಂಡಲ್ ಸೋಪ್ ಘಟಕ ಸ್ಥಾಪನೆ



**ವಿಜಯಪುರ:** ಇಲ್ಲಿನ ಹೊರವಲಯದ ಇಟ್ಟಂಗಿಹಾಳ ಬಳಿ 10 ಎಕರೆ ಜಾಗದಲ್ಲಿ ಮೈಸೂರು ಸ್ಯಾಂಡಲ್ ಸೋಪ್ ತಯಾರಿಕೆ ಘಟಕ ಆರಂಭಿಸಲಾಗುವುದು. ಇದರಿಂದ 400 ಮಂದಿಗೆ ಉದ್ಯೋಗ ಸಿಗಲಿದೆ. ಜತೆಗೆ ಬೆಂಗಳೂರಿನಲ್ಲೂ ಕೆಎಸ್ಡಿಎಲ್ ಕಾರ್ಖಾನೆ ವಿಸ್ತರಣೆ ಮತ್ತು ಆಧುನೀಕರಣ ನಡೆಯುತ್ತಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಶನಿವಾರ ಹೇಳಿದ್ದಾರೆ.

ಇಲ್ಲಿ ಕೆಎಸ್ಡಿಎಲ್ ಏರ್ಪಡಿಸಿರುವ ಸಾಬೂನು ಮೇಳಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಇದಕ್ಕೂ ಮೊದಲು ನಾಗಠಾಣ ಶಾಸಕ ವಿಠಲ ಕಟಕದೊಂಡ ಅವರು ಮಾತನಾಡಿ, ವಿಜಯಪುರದಲ್ಲಿ ಕೂಡ ಮೈಸೂರು ಸ್ಯಾಂಡಲ್ ಸೋಪ್ ತಯಾರಿಕಾ ಘಟಕ ಆರಂಭಿಸಬೇಕು ಎಂದು ಮನವಿ ಮಾಡಿದ್ದರು. ಇದಕ್ಕೆ ಕೂಡಲೇ ಸ್ಪಂದಿಸಿದ ಸಚಿವರು, ತಮ್ಮ ಯೋಜನೆಯನ್ನು ಪ್ರಕಟಿಸಿದರು. ಶಾಸಕ ಬಸವರಾಜ ಯತ್ನಾಳ ಕೂಡ ಸಚಿವರು ಇದುವರೆಗೆ ತೆಗೆದುಕೊಂಡಿರುವ ಉಪಕ್ರಮಗಳ ಬಗ್ಗೆ ಮುಕ್ತ ಪ್ರಶಂಸೆ ವ್ಯಕ್ತಪಡಿಸಿದರು.

ವಿಜಯಪುರದ ಸಾಬೂನು ಘಟಕದಿಂದ ಉತ್ತರ ಕರ್ನಾಟಕ ಕ್ಕೆ ಮಾತ್ರವಲ್ಲದೆ, ಮಹಾರಾಷ್ಟ ಕ್ಕೂ ಇಲ್ಲಿಂದಲೇ ಸರಬರಾಜು ಮಾಡುವ ಕೆಲಸ ಮಾಡಲಾಗುವುದು ಎಂದು ಹೇಳಿದರು.

ಕೆಎಸ್ಡಿಎಲ್ ಮೊದಲು ನಷ್ಟದಲ್ಲಿತ್ತು. ಈಗ ಮೂರು ಪಾಳಿಯಲ್ಲಿ ಕೆಲಸ ನಡೆಯುತ್ತಿದ್ದು, ಸಂಸ್ಥೆಯು ಲಾಭದ ಹಳಿಗೆ ಬಂದಿದೆ. ಜತೆಗೆ ತಾವು ಸಚಿವರಾದ ಮೇಲೆ ಗುಣಮಟ್ಟದ 20 ಹೊಸ ಉತ್ಪನ್ನಗಳನ್ನು ಬಿಡುಗಡೆ ಮಾಡಲಾಗಿದೆ. ಬರುವ ದಿನಗಳಲ್ಲಿ ಸಂಸ್ಥೆಯ ಗತವೈಭವ ಮರುಕಳಿಸುವಂತೆ ಮಾಡಲಾಗುವುದು ಎಂದು ಅವರು ತಿಳಿಸಿದ್ದಾರೆ. ಕಿರಾಣಿ ಅಂಗಡಿ, ವಿಮಾನ ನಿಲ್ದಾಣ, ವಿದೇಶಗಳ ಮಳಿಗೆ ಹೀಗೆ ಎಲ್ಲ ಕಡೆಯೂ ಮೈಸೂರು ಸ್ಯಾಂಡಲ್ ಸೋಪ್ ಮತ್ತು ಸಂಸ್ಥೆಯ ಇತರ ಉತ್ಪನ್ನಗಳು ದೊರೆಯುವಂತೆ ಮಾಡಲಾಗುತ್ತಿದೆ. ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ರಾಜ್ಯದ ವಿಶಿಷ್ಟ ಉತ್ಪನ್ನಗಳ ಮಾರಾಟಕ್ಕೆಂದೇ ಕಲಾಲೋಕ ಮಳಿಗೆ ಸ್ಥಾಪಿಸಲಾಗಿದೆ. ಸಂಸ್ಥೆಯ ಅಧ್ಯಕ್ಷ ಸಿ ಎಸ್ ನಾಡಗೌಡ ಕೂಡ ಸಂಸ್ಥೆಯ ಏಳ್ಗೆಗೆ ಶ್ರಮಿಸುತ್ತಿದ್ದಾರೆ ಎಂದು ಅವರು ನುಡಿದಿದ್ದಾರೆ. ಕಾರ್ಯಕ್ರಮದಲ್ಲಿ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಪಿ ಕೆ ಎಂ ಪ್ರಶಾಂತ್, ಜಿಲ್ಲಾಧಿಕಾರಿ ಭೂಪಾಲನ್, ಎಸ್ಪಿ ಲಕ್ಷ್ಮಣ ನಿಂಬರಗಿ, ಜಿಪಂ ಸಿಇಒ ಋಷಿ ಆನಂದ್ ಮುಂತಾದವರು ಉಪಸ್ಥಿತರಿದ್ದರು.

## ಫ್ರೀಡಂಪಾರ್ಕ್‌ನಲ್ಲಿ ಅಮಿತ್ ಷಾ ವಿರುದ್ಧ ಜ.23ರಂದು ಬೃಹತ್ ಪ್ರತಿಭಟನೆ



**ಹನೂರು:** ಕೇಂದ್ರ ಗೃಹ ಮಂತ್ರಿ ಅಮಿತ್ ಷಾ ರವರು ಡಾಕ್ಟರ್ ಬಿಆರ್ ಅಂಬೇಡ್ಕರ್ ಅವರ ಬಗ್ಗೆ ಅವಳನಕಾರಿಯಾಗಿ ಮಾತನಾಡಿರುವುದನ್ನು ಖಂಡಿಸಿ ಬೆಂಗಳೂರು ಫ್ರೀಡಂ ಪಾರ್ಕ್ ನಲ್ಲಿ ದಿನಾಂಕ: 23/01/2025 ಗುರುವಾರದಂದು ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ಸಂಘಟನಾ ಸಂಚಾಲಕರು (ಡಿ.ಎಸ್.ಎಸ್) ದೊಡ್ಡಿಂದವಾಡಿ ಸಿದ್ದರಾಜು ತಿಳಿಸಿದ್ದಾರೆ.

ಹನೂರು ಪಟ್ಟಣದ ಲೋಕೋಪಯೋಗಿ ಇಲಾಖೆ ವಸತಿ ಗೃಹದಲ್ಲಿ ದಲಿತ ಸಂಘರ್ಷ ಸಮಿತಿಯ ಸಭೆಯಲ್ಲಿ ಮಾತನಾಡಿದ ಅವರು ದೆಹಲಿಯ ಸಂಸತ್ತಿನಲ್ಲಿ ಮಾತನಾಡುತ್ತಾ "ಅಂಬೇಡ್ಕರ್. ಅಂಬೇಡ್ಕರ್. ಅಂಬೇಡ್ಕರ್... ಎಂದು ಹೇಳುವುದು ಇಂದು ಫ್ಯಾಶನ್ ಆಗಿದೆ ಎಂದು ಬಿಜೆಪಿಯ ಗೃಹಮಂತ್ರಿ ಅಮಿತ್ ಶಾ ಸಂಸತ್ತಿನಲ್ಲಿ ಆಡಿರುವ ಉದ್ದೇಶಪೂರ್ವಕ ಮಾತುಗಳಾಗಿವೆ. ಗೌರವಾನ್ವಿತ ಪದವಿಯನ್ನು ಅಲಂಕರಿಸಿರುವ ಅಮಿತ್ ಶಾ ಪುಡಿ ರೌಡಿಯಂತೆ ದೇಶದ ಕೇಂದ್ರ ಸ್ಥಾನವಾದ ಸಂಸತ್ತಿನಲ್ಲಿ ಅಂಬೇಡ್ಕರ್ ಕುರಿತು ಆಡಿರುವ ಮಾತುಗಳು ಆತನ 'ವಿಷಯುಕ್ತ ಮನಸ್ಸನ್ನು' ಬಹಿರಂಗಪಡಿಸಿದೆ. ಗೃಹ ಮಂತ್ರಿ ಅಮಿತ್ ಷಾ ಸಂಪುಟದಿಂದ ವಜಾ ಅಗಬೇಕು ಡಾ.ಬಿಆರ್ ಅಂಬೇಡ್ಕರ್ ಅವರ ಪ್ರತಿಮೆ ಮುಂಭಾಗದಲ್ಲಿ ಮಂಡಿಯೂರಿ ಕ್ಷಮೆ ಕೇಳಲೇಬೇಕು ಎಂದು ಆಗ್ರಹಿಸಿದರು.

ಅಂಬೇಡ್ಕರ್ ಅವರಿಗೆ ಅವಮಾನ ಮಾಡಿರುವ ಅಮಿತ್ ಶಾ ಸ್ವಲ್ಪವೂ ಹಿಂಜರಿಕೆ ಇಲ್ಲದೆ ತನ್ನ ಮಾತುಗಳನ್ನು ಸಮರ್ಥಿಸಿಕೊಂಡಿದ್ದಾನೆ. ಈತನ ದೇಶದ್ರೋಹಿ ಮಾತುಗಳನ್ನು ಖಂಡಿಸುತ್ತೇವೆ. ಅವರು ದೇಶದ ಜನತೆಯ ಮುಂದೆ ಕ್ಷಮೆಯಾಚಿಸಬೇಕು. ಅಮಿತ್ ಷಾ ವಿರುದ್ಧ ನಡೆಸುವ ಪ್ರತಿಭಟನೆಗೆ ಪ್ರತಿಯೊಬ್ಬರು ಹೆಚ್ಚಿನ ಸಂಖ್ಯೆಯಲ್ಲಿ ಬಂದು ಪ್ರತಿಭಟನೆಯನ್ನು ಯಶಸ್ವಿ ಮಾಡಿಕೊಡಬೇಕು ಎಂದು ತಿಳಿಸಿದರು.

**ಸುಳ್ವಾಡಿ ವಿಷ ಪ್ರಸಾದ ಆರೋಪಿಗಳನ್ನು ಬಿಡುಗಡೆ ಮಾಡಿದಂತೆ ಆಗ್ರಹ:** ಮಾರ್ಟಳ್ಳಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಸುಳ್ವಾಡಿ ಗ್ರಾಮದ ಕಿಚ್ ಗುತ್ ಮಾರಮ್ಮ ದೇವಸ್ಥಾನದಲ್ಲಿ ಅಮಾಯಕರಿಗೆ ಆಹಾರದಲ್ಲಿ ವಿಷಬೇರಿಸಿ ಜೈಲು ಪಾಲಾಗಿರುವ ಆರೋಪಿಗಳನ್ನು ಯಾವುದೇ ಕಾರಣಕ್ಕೂ ಬಿಡುಗಡೆ ಮಾಡಬಾರದು ಅವರಿಗೆ ಕಾನೂನು ಅಡಿಯಲ್ಲಿ ತಕ್ಕ ಶಿಕ್ಷೆಯಾಗಬೇಕು ಎಂದು ದಲಿತ ಸಂಘರ್ಷ ಸಮಿತಿ ಆಗ್ರಹಿಸುತ್ತದೆ. ಸುಳ್ವಾಡಿ ವಿಷ ಪ್ರಸಾದ ಘಟನೆಯಲ್ಲಿ ಅಮಾಯಕ ಜನರು ಸಾವು ನೋವುಗಳಾಗಿ ಸಾವು ಬದುಕಿನಲ್ಲಿ ಹೋರಾಡುತ್ತಿದ್ದರು ಆ ಕುಟುಂಬಗಳಿಗೆ ಸರ್ಕಾರಿ ಕೆಲಸ ಕೊಡಿಸಿ ಕೊಡಬೇಕು ಇದರ ಬಗ್ಗೆ ಎಸಿ ಅವರ ಗಮನಕ್ಕೂ ತಂದಿದ್ದೇವೆ ಮತ್ತು ಜಿಲ್ಲಾಧಿಕಾರಿಯವರ ಗಮನಕ್ಕೂ ತರಲಾಗುವುದು ಸಂತ್ರಸ್ತರಿಗೆ ತಕ್ಕ ನ್ಯಾಯ ಸಿಗಬೇಕು ಎಂದು ತಿಳಿಸಿದರು. ಬಿದರಳ್ಳಿ ಗ್ರಾಮದ ಷಣ್ಮುಗಂ ಮಾತನಾಡಿ ಸಮಾಜ ಕಲ್ಯಾಣ ಇಲಾಖೆ ಸಚಿವ ಮಹದೇವಪ್ಪ ಅವರನ್ನು ಭೇಟಿ ಮಾಡಿ ಸುಳ್ಳುವಾಡಿ ವಿಷ ಪ್ರಸಾದ್ ತಿಂದು ಸುಮಾರು ಜನರು ಸಾವನ್ನು ಸುಮಾರು ಜನರಿಗೆ ಸಾವು ಬದುಕಿನಲ್ಲಿ ಹೋರಾಡುತ್ತಿದ್ದಾರೆ ನಮ್ಮ ಗ್ರಾಮದ ಜನರಿಗೆ ಶಾಶ್ವತ ಪರಿಹಾರ ಕೊಡಿಸಿಕೊಡಬೇಕು ಎಂದು ಅವರಲ್ಲಿ ಮನವಿ ಮಾಡಿಕೊಂಡಿದ್ದೆವೆ ಅದಕ್ಕೆ ಸಚಿವರು ಸಕಾರಾತ್ಮಕವಾಗಿ ಒಪ್ಪಿದ್ದಾರೆ ಎಂದು ಸಭೆಯಲ್ಲಿ ತಿಳಿಸಿದರು. ದಲಿತ ಸಂಘರ್ಷ ಸಮಿತಿಯ ಸಂಚಾಲಕರಾದ ವೀರ, ಚಿಕ್ಕ ದೊಡ್ಡಯ್ಯ, ಎಂ.ಜಿ ದೊಡ್ಡಿ ಮುರುಗೇಶ್, ಹಿಂಡಯ್ಯ, ಭಾಗ್ಯಮ್ಮ, ಈರತಯ್ಯ, ಮುರುಗೇಶ್, ಮಾರಿಯಪ್ಪ, ಮಾದೇಶ್, ನಂಜಪ್ಪ ಸೇರಿದಂತೆ ದಲಿತ ಸಂಘರ್ಷ ಸಮಿತಿಯ ಕಾರ್ಯಕರ್ತರು ಹಾಜರಿದ್ದರು.

# ‘ಮಹಾಕುಂಭ ಮೇಳ-2025’

## 45 ದಿನಗಳ ಧಾರ್ಮಿಕ ವೈಭವ, 35 ಕೋಟಿಗೂ ಹೆಚ್ಚು ಭಕ್ತರ ಆಗಮನದ ನಿರೀಕ್ಷೆ



ಮಹಾಕುಂಭ ಮೇಳವು ಇಂದಿನಿಂದ ಪ್ರಯಾಗರಾಜ್‌ನಲ್ಲಿ ಪ್ರಾರಂಭವಾಗಿದ್ದು, ಇದು ಮಹಾಶಿವರಾತ್ರಿಯಂದು ಫೆಬ್ರವರಿ 26 ರಂದು ಕೊನೆಗೊಳ್ಳಲಿದೆ. ಈ ಮಹಾಕುಂಭ ಜಾತ್ರೆಯಲ್ಲಿ ಪುಣ್ಯನದಿಯಲ್ಲಿ ಸ್ನಾನ ಮಾಡಲು ದೂರದೂರುಗಳಿಂದ ಭಕ್ತರು ಆಗಮಿಸುತ್ತಾರೆ. ಈ ಸಮಯದಲ್ಲಿ, ಅಮೃತ ಸ್ನಾನಕ್ಕೆ ವಿಶೇಷ ಮಹತ್ವವಿದೆ, ಇದರಲ್ಲಿ ಮೊದಲು ಋಷಿಗಳು ಮತ್ತು ಸಂತರು ಮತ್ತು ನಂತರ ಸಾಮಾನ್ಯ ಜನರು ಸ್ನಾನ ಮಾಡುತ್ತಾರೆ.

ಮಹಾಕುಂಭ ಸ್ನಾನವು ಎಲ್ಲಾ ರೀತಿಯ ತೊಂದರೆಗಳನ್ನು ತೊಡೆದುಹಾಕುತ್ತದೆ ಮತ್ತು ಪಾಪಗಳಿಂದ ಮುಕ್ತಿಯನ್ನು ನೀಡುತ್ತದೆ ಎಂದು ನಂಬಲಾಗಿದೆ. ಹರಿದ್ವಾರ, ಪ್ರಯಾಗರಾಜ್, ಉಜ್ಜಯಿನಿ ಮತ್ತು ನಾಸಿಕ್‌ಗಳಲ್ಲಿ ಪ್ರತಿ 12 ವರ್ಷಗಳಿಗೊಮ್ಮೆ ಮಹಾ ಕುಂಭಮೇಳವನ್ನು ಆಯೋಜಿಸಲಾಗುತ್ತದೆ ಮತ್ತು ಇವುಗಳಲ್ಲಿ, ಪ್ರಯಾಗರಾಜ್‌ನಲ್ಲಿ ನಡೆಯುವ ಮಹಾ ಕುಂಭವು ಅತ್ಯಂತ ಭವ್ಯವಾಗಿದೆ. 35 ಕೋಟಿಗೂ ಹೆಚ್ಚು ಭಕ್ತರು ಪ್ರಯಾಗ್‌ರಾಜ್‌ಗೆ ಆಗಮಿಸುವ ನಿರೀಕ್ಷೆ ಇದೆ.

ಮಹಾಕುಂಭ ಮೇಳ ಅಧಿಕೃತವಾಗಿ ಶುರುವಾಗುವ ಮುನ್ನವೇ ಶನಿವಾರ ಮತ್ತು ಭಾನುವಾರ ಲಕ್ಷಾಂತರ ಹೆಚ್ಚು ಜನರು ಪವಿತ್ರ ಸ್ನಾನದಲ್ಲಿ ಪಾಲ್ಗೊಂಡಿರುವುದು ಸರ್ಕಾರ ನಿರೀಕ್ಷೆಯನ್ನು ಸಾಬೀತುಪಡಿಸುವಂತಿದೆ.

30–45 ದಿನಗಳ ಕಾಲ ನಡೆಯುವ ಮಹಾಕುಂಭವು ಹಿಂದೂಗಳಿಗೆ ಹೆಚ್ಚಿನ ಮಹತ್ವವನ್ನು ಹೊಂದಿದೆ. ಹಿಂದೂ ಕ್ಯಾಲೆಂಡರ್ ಪ್ರಕಾರ, ಪೂರ್ಣಿಮಾ ತಿಥಿಯು ಜನವರಿ 13 ರಂದು ಅಂದರೆ ಇಂದು ಬೆಳಗ್ಗೆ 5:03 ಕ್ಕೆ ಪ್ರಾರಂಭವಾಗಿದೆ ಮತ್ತು ತಿಥಿ ಜನವರಿ 14 ರಂದು ಬೆಳಗ್ಗೆ 3:56 ಕ್ಕೆ ಕೊನೆಗೊಳ್ಳುತ್ತದೆ.

ರಾಜ ಸ್ನಾನಕ್ಕೆ ಅತ್ಯಂತ ಮಂಗಳಕರ ಸಮಯವೆಂದರೆ ಬ್ರಹ್ಮ ಮುಹೂರ್ತ, ಇದರ ಸಮಯವು ಬೆಳಿಗ್ಗೆ 05.27 ರಿಂದ 06.21 ರವರೆಗೆ ಇರುತ್ತದೆ. ಅದರ ನಂತರ, ಬೆಳಿಗ್ಗೆ ಮತ್ತು ಸಂಜೆ ಮುಹೂರ್ತದಲ್ಲಿ ಸ್ನಾನ ಮಾಡಬಹುದು, ಅದರ ಸಮಯವು 5.54 ರಿಂದ 7.15 ರವರೆಗೆ ಇರುತ್ತದೆ. ನಂತರ ಮಧ್ಯಾಹ್ನ 2.15 ರಿಂದ 2.57 ರವರೆಗೆ ವಿಜಯ್ ಮುಹೂರ್ತ ನಡೆಯಲಿದೆ. ಮತ್ತು ಸಂಜೆ 5.42 ರಿಂದ 6.09 ರವರೆಗೆ ಸಂಜೆ ಅಂದರೆ ಮುಸ್ಸಂಜೆಯ ಸಮಯದಲ್ಲಿ ಸ್ನಾನ ಮಾಡಬಹುದು.

ಈ ಕುಂಭ ಮೇಳವು 144 ವರ್ಷಗಳ ಬಳಿಕ ನಡೆಯುತ್ತಿದೆ. ಈ ಸಮಯದಲ್ಲಿ ದೇವತೆಗಳು ಮತ್ತು ರಾಕ್ಷಸರು ಅಮೃತಕ್ಕಾಗಿ ಹೋರಾಡಿದರು. ಈ ದಿನ, ಸೂರ್ಯ, ಚಂದ್ರ ಮತ್ತು ಗುರು ಗ್ರಹಗಳ ಮಂಗಳಕರ ಸ್ಥಾನವು ರೂಪುಗೊಳ್ಳುತ್ತಿದೆ, ಅದು ಆ ಸಮಯದಲ್ಲಿ ಸಮುದ್ರ ಮಂಥನದ ಸಮಯದಲ್ಲಿ ರೂಪುಗೊಂಡಿತು. ಅಲ್ಲದೇ ಮಹಾಕುಂಭದಂದು ರವಿಯೋಗ ಕೂಡ ಆಗಲಿದೆ.

ಇಂದು ಬೆಳಗ್ಗೆ 7.15ರಿಂದ ರವಿಯೋಗ ಆರಂಭವಾಗಲಿದ್ದು, 10.38ಕ್ಕೆ ಮುಕ್ತಾಯವಾಗಲಿದೆ. ಮಹಾ ಕುಂಭಮೇಳದಲ್ಲಿ ಪಾಲ್ಗೊಳ್ಳುವ ಭಕ್ತರು ಸರಳತೆಯಿಂದ ಇರಬೇಕು ಮಹಾಕುಂಭದಲ್ಲಿ, ಮೊದಲು ಸ್ನಾನ ಮಾಡುವವರು ಋಷಿಗಳು ಮತ್ತು ಸಂತರು ಮತ್ತು ನಂತರ ಮಾತ್ರ ಸಾಮಾನ್ಯ ಜನರು ಸ್ನಾನ ಮಾಡಬಹುದು.

ಮಹಾ ಕುಂಭಮೇಳದಲ್ಲಿ ಸ್ನಾನ ಮಾಡಲು ನಿಗದಿತ ಸಮಯವಿದ್ದು, ಅದನ್ನು ಅನುಸರಿಸುವುದು ಅವಶ್ಯಕ, ಮಹಾ ಕುಂಭಮೇಳದಲ್ಲಿ ಅಹಿಂಸೆ ಮತ್ತು ಕರುಣೆಯ ತತ್ವಗಳನ್ನು ಅನುಸರಿಸಬೇಕು.

ಮಹಾ ಕುಂಭಮೇಳದಲ್ಲಿ ಅಮಲು ಪದಾರ್ಥಗಳ ಸೇವನೆಯನ್ನು ನಿಷೇಧಿಸಲಾಗಿದೆ. ಮಹಾ ಕುಂಭಮೇಳವು ಸಾಗರ ಮಂಥನಕ್ಕೆ ಸಂಬಂಧಿಸಿದೆ ಎಂದು ಪರಿಗಣಿಸಲಾಗಿದೆ. ಕಥೆಯ ಪ್ರಕಾರ, ಒಮ್ಮೆ ಇಂದ್ರ ಮತ್ತು ಇತರ ದೇವರುಗಳು ದೂರ್ವಾಸ ಋಷಿಯ ಶಾಪದಿಂದ ದುರ್ಬಲರಾದರು. ಇದರ ಲಾಭ ಪಡೆದ ರಾಕ್ಷಸರು ದೇವತೆಗಳ ಮೇಲೆ ದಾಳಿ ಮಾಡಿ ಈ ಯುದ್ಧದಲ್ಲಿ ದೇವತೆಗಳು ಸೋತರು. ಆಗ ದೇವತೆಗಳೆಲ್ಲರೂ ಸೇರಿ ವಿಷ್ಣುವಿನ ಬಳಿಗೆ ಹೋಗಿ ಸಹಾಯಕ್ಕಾಗಿ ಇಡೀ ಕಥೆಯನ್ನು ಹೇಳಿದರು.

ಭಗವಾನ್ ವಿಷ್ಣುವು ರಾಕ್ಷಸರೊಂದಿಗೆ ಸಾಗರವನ್ನು ಮಂಥನ ಮಾಡಿ ಅಲ್ಲಿಂದ ಅಮೃತವನ್ನು ಹೊರತೆಗೆಯಲು ಸಲಹೆ ನೀಡಿದರು. ಸಾಗರದ ಮಂಥನದಿಂದ ಅಮೃತದ ಮಡಕೆ ಹೊರಹೊಮ್ಮಿದಾಗ, ಭಗವಾನ್ ಇಂದ್ರನ ಮಗ ಜಯಂತ ಅದನ್ನು ಹೊತ್ತು ಆಕಾಶಕ್ಕೆ ಹಾರಿದನು. ಇದನ್ನೆಲ್ಲ ನೋಡಿದ ರಾಕ್ಷಸರೂ ಅಮೃತದ ಮಡಕೆಯನ್ನು ತೆಗೆದುಕೊಳ್ಳಲು ಜಯಂತನ ಹಿಂದೆಯೇ ಓಡಿದ್ದು, ಬಹಳ ಪ್ರಯತ್ನದ ನಂತರ ಭೂತಗಳ ಕೈಗೆ ಅಮೃತದ ಮಡಕೆ ಸಿಕ್ಕಿತು.

ಇದರ ನಂತರ, ಅಮೃತ ಕಲಶದ ಮೇಲೆ ತಮ್ಮ ನಿಯಂತ್ರಣವನ್ನು ಸ್ಥಾಪಿಸಲು ದೇವತೆಗಳು ಮತ್ತು ರಾಕ್ಷಸರ ನಡುವೆ 12 ದಿನಗಳ ಕಾಲ ಯುದ್ಧ ನಡೆಯಿತು. ಸಮುದ್ರ ಮಂಥನದ ಸಮಯದಲ್ಲಿ, ಹರಿದ್ವಾರ, ಉಜ್ಜಯಿನಿ, ಪ್ರಯಾಗರಾಜ್ ಮತ್ತು ನಾಸಿಕ್‌ನಲ್ಲಿ ಅಮೃತ ಕಲಶದ ಕೆಲವು ಹನಿಗಳು ಬಿದ್ದವು, ಆದ್ದರಿಂದ ಈ ನಾಲ್ಕು ಸ್ಥಳಗಳಲ್ಲಿ ಮಹಾ ಕುಂಭಮೇಳವನ್ನು ಆಯೋಜಿಸಲಾಗುತ್ತದೆ.

ಮಹಾಕುಂಭ ಮೇಳಕ್ಕೆ ಪ್ರಯಾಗ್‌ರಾಜ್ ಸಕಲ ರೀತಿಯಲ್ಲೂ ಸಜ್ಜಾಗಿದೆ. ದೇಶದ ನಾನಾ ಕಡೆಗಳಿಂದ ಆಗಮಿಸುವ ಸಾಧುಗಳು, ಸ್ವಾಮೀಜಿಗಳು ಮತ್ತು ಜಗತ್ತಿನೆಲ್ಲೆಡೆಯಿಂದ ಆಗಮಿಸುವ ಯಾತ್ರಿಕರನ್ನು ಬರಮಾಡಿಕೊಳ್ಳಲು ಎಲ್ಲ ರೀತಿಯ ವ್ಯವಸ್ಥೆಗಳಾಗಿವೆ. ಈಗಾಗಲೇ ಹಲವರು ಪ್ರಯಾಗ್‌ರಾಜ್ ಬಂದು ಸೇರಿದ್ದಾರೆ.

ತಮ್ಮ ಪುರಾತನ ಸಂಪ್ರದಾಯಗಳು ಹಾಗು ಸಾಂಸ್ಕೃತಿಕ ಬೇರುಗಳ ಜೊತೆಗೆ ಮರು ಸಂಬಂಧ ಬೆಳೆಸಲು ಮಹಾಕುಂಭ ಮೇಳ ಜಗತ್ತಿನಾದ್ಯಂತದ ಜನರಿಗೆ ಅವಕಾಶ ಮಾಡಿಕೊಡುತ್ತದೆ. ಈ ಸಾಲಿನ ಮಹಾಕುಂಭ ಅದ್ಧೂರಿ, ದೈವಿಕತೆ ಮತ್ತು ಅತ್ಯಾಧುನಿಕ ಡಿಜಿಟಲ್ ತಂತ್ರಜ್ಞಾನದ ಬಳಕೆಯಲ್ಲಿ ಮೇಳೈಸಲಿದೆ.

10 ಸಾವಿರ ಎಕರೆ ಪ್ರದೇಶಗಳಲ್ಲಿ ಅಭೂತ ಪೂರ್ವ ವ್ಯವಸ್ಥೆಯಾಗಿದ್ದು, ವಿಶೇಷವಾಗಿ ಶುಚಿತ್ವ, ಭದ್ರತೆಗೆ ಪ್ರಾಶಸ್ತ್ಯ ನೀಡಿ ಆಧುನಿಕತೆಯನ್ನು ಅಳವಡಿಸಿಕೊಳ್ಳಲಾಗಿದೆ. ಶೌಚಾಲಯಗಳ ಶುಚಿತ್ವವನ್ನು ನಿರ್ವಹಿಸಲು ಭಕ್ತರ ಅನುಕೂಲಕ್ಕಾಗಿ ಡಿಜಿಟಲ್ ಟೂರಿಸಂ ಮ್ಯಾಪ್ ಇದೆ. ಸ್ಮಾರ್ಟ್‌ಫೋನ್‌ಗಳ ಮೂಲಕ ಕೃತಕ ಬುದ್ಧಿಮತ್ತೆ ಆಧಾರಿತ ಭದ್ರತಾ ವ್ಯವಸ್ಥೆಯನ್ನು ಸಂಯೋಜಿಸಲಾಗಿದೆ ಎಂದು ಸಿಎಂ ಯೋಗಿ ಹೇಳಿದರು. ಅದೇ ರೀತಿ ಮಹಾ ಕುಂಭ ಕೇವಲ ಧಾರ್ಮಿಕ ಕಾರ್ಯಕ್ರಮವಲ್ಲ, ಇದು ಸಾಮಾಜಿಕ ಮತ್ತು ಆಧ್ಯಾತ್ಮಿಕ ಒಗ್ಗಟ್ಟಿನ ಸಂಕೇತ ಎಂದೂ ಅವರು ಬಣ್ಣಿಸಿದ್ದಾರೆ. ಈ ಕಾರ್ಯಕ್ರಮವು ಪ್ರಯಾಗ್‌ರಾಜ್ ಅನ್ನು ವಿಶ್ವದ ಅತಿ ದೊಡ್ಡ ತಾತ್ಕಾಲಿಕ ನಗರವನ್ನಾಗಿಯೂ ಮಾರ್ಪಡಿಸಲಿದ್ದು, ಏಕಕಾಲದಲ್ಲಿ 50 ಲಕ್ಷದಿಂದ 1 ಕೋಟಿ ಜನರವರೆಗೂ ಜನ ಸೇರಲು ಸಾಧ್ಯವಿದೆ ಎಂದು ಮಾಹಿತಿ ನೀಡಿದ್ದರು.

ಉತ್ತರ ಪ್ರದೇಶ ಸರ್ಕಾರದ ಮುಖ್ಯ ಕಾರ್ಯದರ್ಶಿ ಮನೋಜ್ ಕುಮಾರ್ ಸಿಂಗ್ ಅವರ ಪ್ರಕಾರ, ಕುಂಭ ಮೇಳದ ಭದ್ರತೆಗೆ 45 ಸಾವಿರಕ್ಕೂ ಹೆಚ್ಚು ಪೊಲೀಸರನ್ನು ನಿಯೋಜಿಸಲಾಗಿದೆ. 45 ಪೊಲೀಸ್ ಠಾಣೆಗಳನ್ನು ಸ್ಥಾಪಿಸಲಾಗಿದೆ. ಜನರನ್ನು ವಂಚಿಸುವ ಮಾಹಿತಿ ಹರಡುವುದನ್ನು ತಡೆಯಲು ಸೋಷಿಯಲ್ ಮೀಡಿಯಾಗಳ ಮೇಲೆ ನಿಗಾ ಇಡುವ ಯೋಜನೆಗೂ ಒಪ್ಪಿಗೆ ದೊರೆತಿದೆ ಎಂದು ತಿಳಿಸಿದರು.

ಸಂಗಮ ಪ್ರದೇಶ ಮತ್ತು ಘಾಘಮಾದಲ್ಲಿ ಜನರು ಓಡಾಡಲು ಸುಮಾರು 30 ಫಂಟೂನ್ ಸೇತುವೆಗಳನ್ನು ನಿರ್ಮಿಸಲಾಗಿದೆ. ಧಾರ್ಮಿಕ ನಗರ ಪ್ರವೇಶ ಪ್ರದೇಶಗಳಲ್ಲಿ ಜನರನ್ನು ಸ್ವಾಗತಿಸಲು ಬೃಹತ್ ಗೇಟುಗಳನ್ನು ಅಳವಡಿಸಲಾಗಿದೆ ಎಂದು ಮಾಹಿತಿ ನೀಡಿದರು. ಡ್ರೋನ್ ಶೋ ಸೇರಿ ವಿವಿಧ ಕಾರ್ಯಕ್ರಮಗಳು ಇದೇ ಜನವರಿ 24 ರಿಂದ 26ರ ವರೆಗೆ ಡ್ರೋನ್ ಪ್ರದರ್ಶನ ನಡೆಯಲಿದ್ದು, ಲೇಸರ್ ಶೋ ಸೇರಿದಂತೆ ಇನ್ನಿತರ ಕಾರ್ಯಕ್ರಮಗಳು ಸಹ ಜರುಗಲಿವೆ.

ಶಂಕರ್ ಮಹಾದೇವನ್ ಸಂಗೀತ ರಸದೌತಣ ಖ್ಯಾತ ಗಾಯಕ ಶಂಕರ್ ಮಹಾದೇವನ್ ಅವರಿಂದ ಇಲ್ಲಿನ ಗಂಗಾ ಪಂಡಲ್‌ನಲ್ಲಿ ಜ. 16 ರಂದು ಸಂಗೀತ ಕಾರ್ಯಕ್ರಮ ನಡೆಯಲಿದೆ.

**ಪ್ರಮುಖ ದಿನಗಳು:**

**ಜನವರಿ 13- ಮಹಾಕುಂಭ ಮೇಳ ಆರಂಭ**

**ಜನವರಿ 29- ಮೌನಿ ಅಮಾವಾಸ್ಯೆ**

**ಫೆಬ್ರವರಿ 26- ಕುಂಭ ಮೇಳಕ್ಕೆ ವಿಧ್ಯುಕ್ತ ತೆರೆ**

### ಕೇವಲ ರೂ. 1,296ಗೆ ಹೆಲಿಕಾಪ್ಟರ್‌ನಲ್ಲಿ ಹಾರಾಟ

ಉತ್ತರ ಪ್ರದೇಶ ಸರ್ಕಾರ ಮಹಾಕುಂಭ ಮೇಳಕ್ಕೆ ಆಗಮಿಸುವ ಜನರಿಗೆ ಒಂದು ಸುವರ್ಣಾವಕಾಶವನ್ನು ಕಲ್ಪಿಸಿದೆ. ಅದು ಕೇವಲ 1,296 ರೂಪಾಯಿಯಲ್ಲಿ ಆಕಾಶದಲ್ಲಿ ಹೆಲಿಕಾಪ್ಟರ್‌ನಲ್ಲಿ ಹಾರಾಡಬಹುದು ಎಂದು ಉತ್ತರ ಪ್ರದೇಶದ ಪ್ರವಾಸೋದ್ಯಮ ಮತ್ತು ಸಂಸ್ಕೃತಿ ಸಚಿವ ಜೈವೀರ್ ಸಿಂಗ್ ತಿಳಿಸಿದ್ದಾರೆ.

ಟಿಕೆಟ್ ದರ ಕಡಿತ ಮಾಡಿದ ಪ್ರವಾಸೋದ್ಯಮ ಇಲಾಖೆ ; ಈ ಮೊದಲು 3000 ಸಾವಿರ ರೂಪಾಯಿ ಇದ್ದ ಹೆಲಿಕಾಪ್ಟರ್ ಪ್ರಯಾಣ ದರವವನ್ನು ಇದೀಗ ಪ್ರಯಾಣಿಕರನ್ನು ಸೆಳೆಯಲು ಅರ್ಧಕ್ಕಿಂತ ಕಡಿಮೆ ದರದಲ್ಲಿ ಆಗಸದಲ್ಲಿ ಹಾರಾಡುತ್ತ ಪ್ರಯಾಗರಾಜ್ ನಗರದ ವೈಮಾನಿಕ ದೃಶ್ಯವನ್ನು 7 ರಿಂದ 8 ನಿಮಿಷ ಕಾಲ ವೀಕ್ಷಿಸುವ ಅವಕಾಶವನ್ನು ಕಲ್ಪಿಸಿರುವುದಾಗಿ ಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆನ್‌ಲೈನ್ ಬುಕ್ಕಿಂಗ್ ವ್ಯವಸ್ಥೆ; ಹೀಗೆ ಕಾಪ್ಟರ್‌ನಲ್ಲಿ ಪ್ರಯಾಣಿಸಲು ಬಯಸುವವರಿಗೆ ಆನ್‌ಲೈನ್ ತಿತಿತಿ.ಣಥಿಣಜಟಿ.ಛಿಠಿ.ಟಿ ಮೂಲಕ ಟಿಕೆಟ್ ಬುಕ್ ಮಾಡಿಕೊಳ್ಳಬಹುದು ಎಂದು ಇದರ ಉಸ್ತುವಾರಿ ವಹಿಸಿಕೊಂಡಿರುವ ಕೇಂದ್ರ ಸರ್ಕಾರದ ಪವನ್ ಹನ್ಸ್ ಮಾಹಿತಿ ನೀಡಿದ್ದಾರೆ.

## ಚಳಿ: 474 ನಿರಾಶ್ರಿತರು ಸಾವು, ರಕ್ಷಣೆಗಾಗಿ ಸರ್ಕಾರಕ್ಕೆ ಎನ್‌ಜಿಒ ಪತ್ರ


**ನವದೆಹಲಿ:** ಉತ್ತರ ಭಾರತದಲ್ಲಿ ಚಳಿಯ ತೀವ್ರತೆಯು ಪ್ರಾಣಾಂತಕವಾಗಿದೆ. ದೆಹಲಿಯಲ್ಲಿ ಅತಿಯಾದ ಶೀತಕ್ಕೆ ಕಳೆದ ಎರಡು ತಿಂಗಳ ಅವಧಿಯಲ್ಲಿ 474 ನಿರಾಶ್ರಿತರು ಪ್ರಾಣ ಕಳೆದುಕೊಂಡಿದ್ದಾರೆ ಎಂಬ ಆಘಾತಕಾರಿ ಅಂಶ ಬಯಲಾಗಿದೆ.

ನಿರಾಶ್ರಿತರಿಗಾಗಿ ಕೆಲಸ ಮಾಡುವ ಸೆಂಟರ್ ಫಾರ್ ಹೋಲಿಸ್ಟಿಕ್ ಡೆವಲಪ್‌ಮೆಂಟ್ (ಸಿಎಚ್‌ಡಿ) ಸಂಸ್ಥೆಯು ಇಂತಹ ಅಚ್ಚರಿ ಮತ್ತು ಮನಕಲಕುವ ದತ್ತಾಂಶವನ್ನು ತನ್ನ ವೆಬ್‌ಸೈಟ್‌ನಲ್ಲಿ ಪ್ರಕಟಿಸಿದೆ. ಅಲ್ಲದೇ, ನಿರಾಶ್ರಿತರಿಗೆ ರಕ್ಷಣೆ ನೀಡಲು ಕೋರಿ ದೆಹಲಿ ಲೆಫ್ಟಿನೆಂಟ್ ಗವರ್ನರ್, ಸಿಎಂ, ಆರೋಗ್ಯ ಸಚಿವ ಮತ್ತು ಜಿಲ್ಲಾಡಳಿತಗಳಿಗೆ ಪತ್ರ ಬರೆದಿದೆ.

ದೆಹಲಿಯಲ್ಲಿ 2024ರ ನವೆಂಬರ್ 15ರಿಂದ ಜನವರಿ 10, 2025 ವರೆಗೆ ತೀವ್ರ ಚಳಿಗೆ 474 ನಿರಾಶ್ರಿತರ ಸಾವಾಗಿದೆ. 100 ಮೃತದೇಹಗಳು ರಾಷ್ಟ್ರ ರಾಜಧಾನಿಯ ಪ್ರಮುಖ ಸ್ಥಳಗಳಾದ ಸಬ್ಜಿ ಮಂಡಿ, ಆನಂದ್ ವಿಹಾರ್, ನವದೆಹಲಿ, ಹಜರತ್ ನಿಜಾಮುದ್ದೀನ್, ಸರೈ ರೋಹಿಲ್ಲಾ, ದೆಹಲಿ ಕಂಟೋನ್ಮೆಂಟ್ ಮತ್ತು ಮೆಟ್ರೋ ಪ್ರದೇಶಗಳಲ್ಲಿ ಪತ್ತೆಯಾಗಿವೆ ಎಂದು ಹೇಳಿದೆ.

ದಿನಕ್ಕೆ 8 ಮಂದಿ ಸಾವು!?: ಎನ್‌ಜಿಒದ ದತ್ತಾಂಶಗಳು ನಿಜವೇ ಆಗಿದ್ದಲ್ಲಿ ರಾಷ್ಟ್ರ ರಾಜಧಾನಿಯಲ್ಲಿ ದಿನಕ್ಕೆ 8 ಜನರು ಮೃತಪಟ್ಟಂತಾಗಿದೆ.

ಇದು ನಿಜಕ್ಕೂ ಆಘಾತಕಾರಿ ವಿಷಯವಾಗಿದೆ. ದೇಹ ಮರಗಟ್ಟಿಸುವ ಚಳಿಯಿಂದ ರಕ್ಷಣೆ ನೀಡುವ ಬೆಚ್ಚಗಿನ ಬಟ್ಟೆ, ಕಂಬಳಿ ಮತ್ತು ಆಶ್ರಯದಂತಹ ಮೂಲಭೂತ ಸೌಕರ್ಯಗಳು ಇಲ್ಲದೆ, ಬೀದಿಬದಿಗಳಲ್ಲಿ ಆಶ್ರಯ ಪಡೆದವರು ಬಲಿಯಾಗುತ್ತಿದ್ದಾರೆ ಎಂದು ಸಂಸ್ಥೆಯು ಹೇಳಿದೆ.



ಎನ್‌ಜಿಒದ ಕಾರ್ಯನಿರ್ವಾಹಕ ನಿರ್ದೇಶಕ ಸುನಿಲ್ ಕುಮಾರ್ ಅಲೆಡಿಯಾ ಅವರು, ಶನಿವಾರ ದೆಹಲಿಯ ಮುಖ್ಯ ಕಾರ್ಯದರ್ಶಿ ಧರ್ಮೇಂದ್ರ ಸಿಂಗ್, ದೆಹಲಿ ನಗರ ಆಶ್ರಯ ಸುಧಾರಣಾ ಮಂಡಳಿಯ ಸಿಇಒ ಅವರಿಗೆ ಪತ್ರ ಬರೆದು ಸಾವು ತಡೆಗಟ್ಟಲು ಒತ್ತಾಯಿಸಿದ್ದಾರೆ.

ಜೊತೆಗೆ ಅದರ ಪ್ರತಿಯನ್ನು ದೆಹಲಿ ಲೆಫ್ಟಿನೆಂಟ್ ಗವರ್ನರ್ ವಿನಯ್ ಕುಮಾರ್ ಸಕ್ಸೇನಾ, ದೆಹಲಿ ಮುಖ್ಯಮಂತ್ರಿ ಅತಿಶಿ, ಆರೋಗ್ಯ ಸಚಿವ ಸೌರಭ್ ಭಾರದ್ವಾಜ್ ಹಾಗೂ ಎಲ್ಲಾ ಜಿಲ್ಲಾಧಿಕಾರಿಗಳಿಗೆ ರವಾನಿಸಿದ್ದಾರೆ.

ವೆಬ್‌ಸೈಟ್‌ನಲ್ಲಿ ಸಾವಿನ ದತ್ತಾಂಶ: ಇನ್ನೂ, ಸಂಸ್ಥೆಯು ನಿರಾಶ್ರಿತರ ಸಾವಿನ ಬಗ್ಗೆ ತನ್ನ ಅಧಿಕೃತ ವೆಬ್‌ಸೈಟ್ http://zipnet.in ನಲ್ಲಿ ಪ್ರಕಟಿಸಿದೆ. ಪೊಲೀಸ್ ಇಲಾಖೆಯು ಪತ್ತೆ ಮಾಡಿದ ಅಪರಿಚಿತ ಶವಗಳ ಲೆಕ್ಕಾಚಾರದಲ್ಲಿ ಅದು ನಿರಾಶ್ರಿತ ವ್ಯಕ್ತಿಗಳು ಎಂದು ಗುರುತಿಸಿದೆ.

ತೀವ್ರ ಚಳಿಯು ನಿರಾಶ್ರಿತರ ಮೇಲೆ ವಿಪರೀತ ಪರಿಣಾಮ ಬೀರಿದೆ. ಚಳಿಗಾಲವು ಅವರ ನಿದ್ದೆಗೆಡಿಸಿದೆ. ಉಸಿರಾಟದ ಸಮಸ್ಯೆ, ಚರ್ಮ ಕಾಯಿಲೆ, ಸಂಧಿವಾತ, ಅಸ್ತಮಾ, ಹೃದಯರಕ್ತನಾಳ ಸೋಂಕಿನಿಂದ ಸಾವಿಗೀಡಾಗಿದ್ದಾರೆ ಎಂದು ಸಂಸ್ಥೆಯು ಹೇಳಿದೆ.

ನಗರದಲ್ಲಿರುವ ಅನೇಕ ಆಶ್ರಯ ತಾಣಗಳು ಚಳಿಗಾಲಕ್ಕೆ ಬೇಕಾದ ಸವಲತ್ತನ್ನು ಹೊಂದಿಲ್ಲ. ತಾಪಮಾನ ತಡೆಯುವ ಮತ್ತು ಬಿಸಿನೀರಿನ ಸೌಲಭ್ಯ ಹೊಂದಿಲ್ಲ. ಇದರಿಂದಾಗಿ ನಿರಾಶ್ರಿತರು ಅಧಿಕ ಶೀತಕ್ಕೆ ಬಲಿಯಾಗುತ್ತಿದ್ದಾರೆ. ಅವರಿಗೆ ತಕ್ಷಣವೇ ಅಗತ್ಯ ನೆರವು ನೀಡಬೇಕಿದೆ. ಇಲ್ಲವಾದಲ್ಲಿ ಸಾವಿನ ಸಂಖ್ಯೆ ಇನ್ನಷ್ಟು ಹೆಚ್ಚಲಿದೆ ಎಂದು ಆತಂಕ ವ್ಯಕ್ತಪಡಿಸಿದೆ.

## ಮದ್ದೂರಿನ ಸೊಸೆಗೆ ‘ಮಿಸೆಸ್ ಇಂಡಿಯಾ’ ಕಿರೀಟ



**ನವದೆಹಲಿ:** ಇತ್ತೀಚೆಗೆ ನವದೆಹಲಿಯಲ್ಲಿ ಮದುವೆಯಾದ ಸ್ತ್ರೀಯರಿಗಾಗಿ ನಡೆದ ಸೌಂದರ್ಯ ಸ್ಪರ್ಧೆ ಮಿಸೆಸ್ ಇಂಡಿಯಾ ಪ್ರೈಡ್ ಆಫ್ ನೇಷನ್ 2024 ಕಿರೀಟವು ಕನ್ನಡತಿ ಡಾ. ಪ್ರಿಯಾ ಗೋಸ್ವಾಮಿಗೆ ಒಲಿದು ಬಂದಿದೆ.

ನವದೆಹಲಿಯಲ್ಲಿ ಐದು ದಿನಗಳು ನಡೆದ ಅಂತಿಮ ಸುತ್ತಿನಲ್ಲಿ ಕರ್ನಾಟಕದ ಮದ್ದೂರಿನ ಡಾ. ಪ್ರಿಯಾ ಗೋಸ್ವಾಮಿ ಅವರು ಎಂಚಾಟಿಂಗ್ ವಿಭಾಗದ ಕಿರೀಟ ಗೆದ್ದು ಬೀಗಿದ್ದಾರೆ. ಜೊತೆಗೆ ಅದೇ ವೇದಿಕೆಯಲ್ಲಿ ಸೋಷಿಯಲ್ ಇನ್ಫ್ಲುಯೆನ್ಸರ್ ಗೌರವಕ್ಕೂ ಪಾತ್ರರಾಗಿದ್ದಾರೆ. ವೃತ್ತಿಯಿಂದ ಪಶುಪಾಲನ ವೈದ್ಯರಾದ ಡಾ ಪ್ರಿಯಾ ಗೋಸ್ವಾಮಿ, ಮೂಲತಃ ಪಂಜಾಬಿಯಾದರೂ ಗೋವಾದಲ್ಲಿ ಬೆಳೆದವರು. ಕಳೆದ ಎರಡು ದಶಕಗಳಿಂದ ಮದ್ದೂರಿನ ನಿವಾಸಿಯಾಗಿ ಕನ್ನಡತಿಯಾಗಿದ್ದಾರೆ. ಭಾರತೀಯ ಸೇನೆಯಲ್ಲಿರುವ ಇವರ ಪತಿ ಕರ್ನಲ್ ಸಂಜೀತ್ ಮಂಡ್ಯ ಜಿಲ್ಲೆಯ ಮದ್ದೂರಿನವರು. ಮದ್ದೂರಿನ ಎಚ್ ಕೆ ವೀರಣ್ಣಗೌಡ ಕಾಲೇಜಿನ ನಿವೃತ್ತ ಕನ್ನಡ ಪ್ರಾಧ್ಯಾಪಕ ಪ್ರೊ. ಬಿ ಸಿದ್ದೇಗೌಡ ಅವರ ಪುತ್ರರಾದ ಕರ್ನಲ್ ಸಂಜೀತ್, ಪ್ರಸ್ತುತ ಉತ್ತರಖಾಂಡ್ ನಲ್ಲಿ ಭಾರತೀಯ ಸೇನೆಯ ಕುದುರೆ ತರಬೇತಿ ವಿಭಾಗದ ಡೆಪ್ಯೂಟಿ ಕಮಾಂಡೆಂಟ್ ಆಗಿದ್ದಾರೆ. ಪಶು ವೈದ್ಯರಾಗಿರುವ ಡಾ. ಪ್ರಿಯಾ ಕೂಡ ಭಾರತೀಯ ಸೇನೆಯ ಕೆಲವು ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದಾರೆ. 16 ವರ್ಷದ ಮಗಳು ಧ್ರುವಿ ಸಂಜಿತ್ ಹಾಗೂ 9 ವರ್ಷದ ಮಗ ಶೌರ್ಯಗೌಡ, ಮಾವ ಸಿದ್ದೇಗೌಡ, ಅತ್ತೆ ಸುಮಿತ್ರಮ್ಮ ಅವರ ಸಹಕಾರ ಹಾಗೂ ಪತಿ ಕರ್ನಲ್ ಸಂಜಿತ್, ನಾದಿನಿ ಸುಪ್ರೀತಾ ಅವರ ಪ್ರೋತ್ಸಾಹವೇ ಈ ಯಶಸ್ಸಿಗೆ ಕಾರಣ ಎಂದು ಡಾ. ಪ್ರಿಯಾ ಗೋಸ್ವಾಮಿ ಸಂತಸ ಹಂಚಿಕೊಂಡಿದ್ದಾರೆ. ಈ ಕಾರ್ಯಕ್ರಮದ ನಿರ್ದೇಶಕರಾದ ಭಾರ್ಕಾ ನಂಗಿಯಾ ಮತ್ತು ಅಭಿಷೇಕ್ ಅವರ ಸಲಹೆಗಳೇ ಗೆಲುವಿಗೆ ದಾರಿ ತೋರಿಸಿದವು ಎಂದು ಸ್ಮರಿಸಿದ್ದಾರೆ.

## ಬಿಜೆಪಿ ಅಧಿಕಾರಕ್ಕೆ ಬಂದರೆ ದೆಹಲಿ ಕೊಳೆಗೇರಿಗಳೆಲ್ಲ ನೆಲಸಮ: ಕೇಜ್ರಿವಾಲ್



**ನವದೆಹಲಿ:** ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಗೆದ್ದು ಅಧಿಕಾರಕ್ಕೆ ಬಂದಲ್ಲಿ ಅದು ದೆಹಲಿಯ ಎಲ್ಲಾ ಕೊಳೆಗೇರಿಗಳನ್ನು ನೆಲಸಮಗೊಳಿಸಲಿದೆ ಎಂದು ಎಎಪಿ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್ ಭಾನುವಾರ ದೂರಿದ್ದಾರೆ.

ಇಲ್ಲಿನ ಶಕುರ್ ಬಸ್ತಿ ಪ್ರದೇಶದಲ್ಲಿ ಮಾಧ್ಯಮಗೋಷ್ಠಿ ಉದ್ದೇಶಿಸಿ ಮಾತನಾಡಿದ ಮಾಜಿ ಮುಖ್ಯಮಂತ್ರಿ, ಕೊಳೆಗೇರಿ ನಿವಾಸಿಗಳ ಕಲ್ಯಾಣಕ್ಕಿಂತ ಭೂಸ್ವಾಧೀನಕ್ಕೆ ಬಿಜೆಪಿ ಆದ್ಯತೆ ನೀಡುತ್ತಿದೆ ಎಂದು ಆರೋಪಿಸಿದರು.

"ಮೊದಲು ಅವರು ನಿಮ್ಮ ಮತ ಕೇಳುತ್ತಾರೆ. ಚುನಾವಣೆಯ ನಂತರ ನಿಮ್ಮ ಭೂಮಿಯನ್ನು ಕಬಳಿಸುತ್ತಾರೆ" ಎಂದರು. ಬಿಜೆಪಿಯ 'ಜಹಾಂ ಜುಗ್ಗಿ ವಹಾನ್ ಮಕಾನ್' ಯೋಜನೆಯನ್ನು ಟೀಕಿಸಿದ ಅವರು, ಇದೊಂದು ಕಣ್ಣೊರೆಸುವ ತಂತ್ರ ಎಂದು ಬಣ್ಣಿಸಿದರು. ಕಳೆದ ಐದು ವರ್ಷಗಳಲ್ಲಿ ಬಿಜೆಪಿಯವರು ಕೊಳೆಗೇರಿ ನಿವಾಸಿಗಳಿಗೆ ಕೇವಲ 4,700 ಫ್ಲ್ಯಾಟ್‌ಗಳನ್ನು ನಿರ್ಮಿಸಿದ್ದಾರೆ ಎಂದು ಅವರು ಹೇಳಿದರು. ಕೊಳೆಗೇರಿ ನಿವಾಸಿಗಳಿಗೆ ಯಾವುದೇ ಪರ್ಯಾಯ ವಸತಿ ವ್ಯವಸ್ಥೆ ಮಾಡದೆಯೇ ಪ್ರಸ್ತುತ ಅವರು ವಾಸಿಸುತ್ತಿರುವ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಬಿಜೆಪಿ ಯೋಜಿಸಿದೆ ಎಂದು ಕೇಜ್ರಿವಾಲ್ ಆರೋಪಿಸಿದರು. "ಅವರು ಎಲ್ಲಾ ಕೊಳೆಗೇರಿಗಳನ್ನು ನೆಲಸಮಗೊಳಿಸಲಿದ್ದಾರೆ ಮತ್ತು ಅಲ್ಲಿನ ನಿವಾಸಿಗಳ ಯೋಗಕ್ಷೇಮದ ಬಗ್ಗೆ ಯಾವುದೇ ಕಾಳಜಿಯಿಲ್ಲದೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಿದ್ದಾರೆ" ಎಂದು ಅವರು ಹೇಳಿದರು. ಗೃಹ ಸಚಿವ ಅಮಿತ್ ಶಾ ಅವರು ದೆಹಲಿ ಕೊಳೆಗೇರಿ ನೆಲಸಮಕ್ಕೆ ಸಂಬಂಧಿಸಿದ ಎಲ್ಲಾ ಪ್ರಕರಣಗಳನ್ನು ಹಿಂತೆಗೆದುಕೊಂಡರೆ ಮತ್ತು ಹೊರಹಾಕಲ್ಪಟ್ಟ ಪ್ರತಿಯೊಬ್ಬ ವ್ಯಕ್ತಿಗೆ ಪುನರ್ವಸತಿ ಕಲ್ಪಿಸಿದರೆ ದೆಹಲಿಯಲ್ಲಿ ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ನಾನು ಸ್ಪರ್ಧಿಸುವುದಿಲ್ಲ ಎಂದು ಕೇಜ್ರಿವಾಲ್ ಇದೇ ಸಂದರ್ಭದಲ್ಲಿ ಸವಾಲು ಹಾಕಿದರು. ದೆಹಲಿ ಲೆಫ್ಟಿನೆಂಟ್ ಗವರ್ನರ್ ಡಿಸೆಂಬರ್ 27ರಂದು ಕೊಳೆಗೇರಿ ಪ್ರದೇಶಗಳ ಭೂ ಸ್ವಾಧೀನ ನಿಯಮಗಳನ್ನು ಬದಲಾಯಿಸಿದ್ದು, ಚುನಾವಣೆಯ ನಂತರ ತಕ್ಷಣವೇ ಕೊಳೆಗೇರಿಗಳನ್ನು ನೆಲಸಮಗೊಳಿಸಲು ದಾರಿ ಮಾಡಿಕೊಟ್ಟಿದ್ದಾರೆ ಎಂದು ಆರೋಪಿಸಿದರು.

ಶಕುರ್ ಬಸ್ತಿ ಕ್ಷೇತ್ರದ ಪಕ್ಷದ ಅಭ್ಯರ್ಥಿ, ಹಿರಿಯ ಎಎಪಿ ನಾಯಕ ಸತ್ಯೇಂದರ್ ಜೈನ್ ಕೇಜ್ರಿವಾಲ್ ಅವರೊಂದಿಗೆ ಮಾಧ್ಯಮಗೋಷ್ಠಿಯಲ್ಲಿ ಹಾಜರಿದ್ದರು. ಜೈನ್ 2013, 2015 ಮತ್ತು 2020ರಲ್ಲಿ ಗೆದ್ದ ನಂತರ ನಾಲ್ಕನೇ ಬಾರಿಗೆ ಈ ಸ್ಥಾನದಿಂದ ಮರು ಆಯ್ಕೆ ಬಯಸಿದ್ದಾರೆ.

2020ರ ಚುನಾವಣೆಯಲ್ಲಿ ದೆಹಲಿಯ 70 ಸ್ಥಾನಗಳಲ್ಲಿ 62 ಸ್ಥಾನಗಳನ್ನು ಗೆದ್ದ ಎಎಪಿ ಸತತ ಮೂರನೇ ಬಾರಿಗೆ ಅಧಿಕಾರ ಹಿಡಿಯಲು ಪ್ರಯತ್ನಿಸುತ್ತಿದೆ.

## ಎಷ್ಟೊತ್ತು ಕೆಲಸ ಮಾಡ್ತೀರಿ ಅನ್ನೋದಕ್ಕಿಂತ ಎಷ್ಟು ಚೆನ್ನಾಗಿ ಕೆಲಸ ಮಾಡ್ತೀರಿ ಅನ್ನೋದು ಮುಖ್ಯ

**ನವದೆಹಲಿ:** ದೈನಂದಿನ ಜೀವನದಲ್ಲಿ ಕೆಲಸ ಮತ್ತು ವೈಯಕ್ತಿಕ ಜೀವನದ ಸಮತೋಲನದ ಬಗೆಗಿನ ಚರ್ಚೆ ಮುಂದುವರೆದಿದ್ದು, ಎಷ್ಟು ಹೆಚ್ಚು ಅವಧಿಗೆ ಕೆಲಸ ಮಾಡುತ್ತೀರಿ ಎನ್ನುವುದಕ್ಕಿಂತಲೂ ಎಷ್ಟು ಚೆನ್ನಾಗಿ (ಗುಣಮಟ್ಟ) ಕೆಲಸ ಮಾಡುತ್ತೀರಿ ಎಂಬುದು ಮುಖ್ಯ ಎಂದು ಸೀರಮ್ ಇನ್‌ಸ್ಟಿಟ್ಯೂಟ್ ಆಫ್ ಇಂಡಿಯಾ (ಎಸ್‌ಐಐ) ಸಿಇಒ ಅದಾರ್ ಪೂನಾವಾಲಾ ಹೇಳಿದ್ದಾರೆ.

"ಯಾವಾಗಲೂ ಕೆಲಸದ ಪ್ರಮಾಣಕ್ಕಿಂತ ಕೆಲಸದ ಗುಣಮಟ್ಟವೇ ಮುಖ್ಯವಾಗಿರುತ್ತದೆ" ಎಂದು ಪೂನಾವಾಲಾ, ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಮಹೀಂದ್ರಾ ಗ್ರೂಪ್ ಅಧ್ಯಕ್ಷ ಆನಂದ್ ಮಹೀಂದ್ರಾ ಅವರ ಭಾವನೆಗೆ ಪೂರಕವಾಗಿ ಅಭಿಪ್ರಾಯ ವ್ಯಕ್ತಪಡಿಸಿರುವ ಪೂನಾವಾಲಾ "ಹೌದು ಆನಂದ್ ಮಹೀಂದ್ರಾ ಅವರೇ, ನನ್ನ ಪತ್ನಿ ನತಾಶಾ ಪೂನಾವಾಲಾ ಕೂಡ ನಾನು ಅದ್ಭುತ ಎಂದು ಭಾವಿಸುತ್ತಾರೆ. ಭಾನುವಾರದಂದು ಆಕೆ ನನ್ನನ್ನು ನೋಡುವುದನ್ನು ಇಷ್ಟಪಡುತ್ತಾರೆ." ಎಂದು ಹೇಳಿದ್ದಾರೆ.

ವಾರಕ್ಕೆ 48, 70 ಅಥವಾ 90 ಗಂಟೆಗಳ ಕಾಲ ಕೆಲಸ ಮಾಡುವ ವಿಚಾರ ಮುಖ್ಯವಲ್ಲ. ಬದಲಿಗೆ ಮಾಡಿದ ಕೆಲಸ ಎಷ್ಟು ಗುಣಮಟ್ಟದ್ದಾಗಿತ್ತು ಎಂಬುದು ಮುಖ್ಯ ಎಂಬ ಮಹೀಂದ್ರಾ ಅವರ ಇತ್ತೀಚಿನ ಹೇಳಿಕೆಯನ್ನು ಪೂನಾವಾಲಾ ಬೆಂಬಲಿಸಿದಂತಾಗಿದೆ. "ನನ್ನ ಹೆಂಡತಿ ಅದ್ಭುತವಾಗಿದ್ದಾಳೆ, ನಾನು ಅವಳನ್ನು ದಿಟ್ಟಿಸಲು ಇಷ್ಟಪಡುತ್ತೇನೆ" ಎಂದಿದ್ದ ಮಹೀಂದ್ರಾ, ಎಲ್ &ಟಿ ಅಧ್ಯಕ್ಷರ ಇತ್ತೀಚಿನ ಹೇಳಿಕೆಗಳನ್ನು ಟೀಕಿಸಿದ್ದರು.



ಇತ್ತೀಚೆಗೆ ಹೇಳಿಕೆ ನೀಡಿದ್ದ ಸುಬ್ರಮಣ್ಯನ್, ತಾವು ಅಧ್ಯಕ್ಷರಾಗಿರುವ ಎಲ್ &ಟಿ ಉದ್ಯೋಗಿಗಳು ಭಾನುವಾರದಂದು ಕೆಲಸ ಮಾಡದಿರುವುದಕ್ಕೆ ವಿಷಾದ ವ್ಯಕ್ತಪಡಿಸುತ್ತೇನೆ ಎಂದಿದ್ದರು. "ನಾನು ನಿಮ್ಮನ್ನು ಭಾನುವಾರದಂದು ಕೆಲಸ ಮಾಡಿಸಲು ಸಾಧ್ಯವಾದರೆ ನನಗೆ ಬಹಳ ಖುಷಿಯಾಗುತ್ತದೆ. ಏಕೆಂದರೆ ನಾನು ಕೂಡ ಭಾನುವಾರ ಕೆಲಸ ಮಾಡುತ್ತೇನೆ" ಎಂದು ಅವರು ಹೇಳಿದ್ದರು.

"ನೀವು ಮನೆಯಲ್ಲಿ ಕುಳಿತು ಮಾಡುವುದಾದರೂ ಏನು? ಅದೆಷ್ಟು ಹೊತ್ತು ಹೆಂಡತಿಯನ್ನು ನೋಡುತ್ತಾ ಮನೆಯಲ್ಲಿ ಕುಳಿತುಕೊಳ್ಳುವಿರಿ? ಹೆಂಡತಿಯರು ಕೂಡ ತಮ್ಮ ಗಂಡಂದಿರನ್ನು ಎಷ್ಟು ಕಾಲ ನೋಡುತ್ತಾ ಇರಬಲ್ಲರು? ಅದೆಲ್ಲ ಬಿಟ್ಟು ಕಚೇರಿಗೆ ಹೋಗಿ ಕೆಲಸ ಮಾಡಲು ಪ್ರಾರಂಭಿಸಿ." ಎಂಬ ಹೇಳಿಕೆ ತೀವ್ರ ವಿವಾದಕ್ಕೀಡಾಗಿತ್ತು.

ಆರೋಗ್ಯ ತಜ್ಞರ ಪ್ರಕಾರ, ಅತಿಯಾಗಿ ಕೆಲಸ ಮಾಡುವುದರಿಂದ ಬರ್ನ್ ಔಟ್ ಅಪಾಯ ಹೆಚ್ಚಾಗುತ್ತದೆ ಮತ್ತು ಕೆಲಸದಲ್ಲಿ ಉತ್ಪಾದಕತೆಯನ್ನು ಕಡಿಮೆ ಮಾಡುತ್ತದೆ. ಇದಲ್ಲದೆ, ಅತಿಯಾದ ಕೆಲಸದಿಂದ ವೈಯಕ್ತಿಕ ಜೀವನ ಮತ್ತು ಕುಟುಂಬ ಸಂಬಂಧಗಳ ಮೇಲೂ ಪರಿಣಾಮ ಬೀರಬಹುದು ಮತ್ತು ನಿದ್ರೆಯ ಚಕ್ರದ ಮೇಲೂ ಪರಿಣಾಮ ಬೀರಬಹುದು. ಇದರಿಂದ ಖಿನ್ನತೆ, ಆತಂಕ ಮತ್ತು ಒತ್ತಡದ ಅಪಾಯಗಳು ಕಾಣಿಸಿಕೊಳ್ಳಬಹುದು. ಇವೆಲ್ಲವೂ ಹೃದಯಾಘಾತ, ಪಾರ್ಶ್ವವಾಯು ಮತ್ತು ಅಕಾಲಿಕ ಸಾವಿನ ಅಪಾಯವನ್ನು ಹೆಚ್ಚಿಸಬಹುದು.

# 19 ವರ್ಷ ಕಿರಿಯಳನ್ನು ಮದುವೆಯಾದ ಸಂಜಯ್ ದತ್



ಬಾಲಿವುಡ್ ಸ್ಟಾರ್ ನಟ ಸಂಜಯ್ ದತ್, ಸಿನಿ ಪ್ರಿಯರ ಸಂಜು ಬಾಬಾ ಅಂತಾನೇ ಫೇಮಸ್. ಬಾಲಿವುಡ್ ನಲ್ಲಿ 80ರ ದಶಕದಲ್ಲೇ ಮೋಡಿ ಮಾಡಿದ ಈ ಸ್ಟಾರ್, ಇಂದಿಗೂ ತಮ್ಮ ನಟನೆ, ಸ್ಟೈಲ್ ನಿಂದ ಸಿನಿಮಾಗಳಲ್ಲಿ ಮಿಂಚುತ್ತಿದ್ದಾರೆ. ಇವರ ರಿಯಲ್ ಲೈಫ್ ಕೂಡ ಸಿನಿಮಾ ಜೀವನಕ್ಕಿಂತ ಕಡಿಮೆ ಏನಲ್ಲ.

ಸಂಜಯ್ ದತ್ ಜೀವನದಲ್ಲಿ ಪ್ರೀತಿ, ಮದುವೆ ಎಲ್ಲಾ ಒಂದು ಸಲ ಆಗಿರಲಿಲ್ಲ. ಮೂರು ಮೂರು ಸಲ ಪ್ರೀತಿಯಾಗಿ ಮದುವೆಯಾದವರು ಸಂಜಯ್ ದತ್. ಇವರು ಮೊದಲು ಮದುವೆಯಾಗಿದ್ದು, ರಿಚಾ ಶರ್ಮಾ, ಇವರು ಮದುವೆಯಾಗಿ 9 ವರ್ಷದ ನಂತರ ಬ್ರೈನ್ ಟ್ಯೂಮರ್ ಗೆ ಬಲಿಯಾಗಿದ್ದರು. ನಂತರ ಮದುವೆಯಾಗಿದ್ದು ರಿಹಾ ಪಿಲ್ಲೈ ಅವರ ಜೊತೆಗಿನ 10 ವರ್ಷದ ದಾಂಪತ್ಯದ ನಂತರ ಡಿವೋರ್ಸ್ ಪಡೆದಿದ್ದರು. ಅದಾದ ಮೇಲೆ ಸಂಜಯ್ ದತ್ ಜೀವನಕ್ಕೆ ಎಂಟ್ರಿ ಕೊಟ್ಟವರು ಮಾನ್ಯತಾ ಸಂಜಯ್ ಅವರ ಪತ್ನಿಯಾಗುವ ಮೊದಲು ಮಾನ್ಯತಾ ಬಿ ಗ್ರೇಡ್ ಚಿತ್ರಗಳಲ್ಲಿ ಕೆಲಸ ಮಾಡುತ್ತಿದ್ದರು.ನಟನನ್ನು ಮದುವೆಯಾದ ನಂತರ, ಅವರು ನಟನೆಗೆ ವಿದಾಯ ಹೇಳಿ, ಸದ್ಯ ಕುಟುಂಬದ ಜೊತೆ ಹಾಯಾಗಿದ್ದಾರೆ.

ಸಂಜಯ್ ದತ್ ಮತ್ತು ಮಾನ್ಯತಾ ದತ್ 2008 ರಲ್ಲಿ ಗೋವಾದಲ್ಲಿ ರಹಸ್ಯವಾಗಿ ಮದುವೆಯಾಗಿದ್ದರು. ಮದುವೆಯ ನಂತರ, ದಂಪತಿಗಳು ಅವಳಿ ಮಕ್ಕಳಾದ ಇಕ್ರಾ ದತ್ ಮತ್ತು ಶಹ್ರಾನ್ ದತ್ ಎನ್ನುವ ಮುದ್ದಾದ ಮಕ್ಕಳಿಗೆ ಪೋಷಕರಾದರು. ಮಾನ್ಯತಾ ಸಂಜಯ್ ದತ್ ಅವರ ಪ್ರೊಡಕ್ಷನ್ ಹೌಸ್ ನ ಸಿಇಒ ಆಗಿದ್ದಾರೆ.

ಸಂಜಯ್ ಮತ್ತು ಮಾನ್ಯತಾ ಲವ್ ಶುರುವಾಗಿದ್ದು ಶೂಟಿಂಗ್ ವೇಳೆ, ಆವಾಗ ಸಂಜುಗಾಗಿ ಮಾನ್ಯತಾ ಅವರಿಗೆ ಇಷ್ಟವಾದ ಆಹಾರ ಮಾಡಿ ಕೊಡುತ್ತಿದ್ದರಂತೆ. ಜೊತೆಗೆ ತಮ್ಮ ಕಷ್ಟಗಳನ್ನು ಹೇಳಿಕೊಳ್ಳುತ್ತಿದ್ದರಂತೆ. ಮೊದಲಿಗೆ ಸ್ನೇಹಿತರಾಗಿದ್ದ ಇವರು, ಬಳಿಕ ಪ್ರೇಮಿಗಳಾಗಿ ಎರಡು ವರ್ಷದಲ್ಲಿ ಮದುವೆಯಾಗಿದ್ದರು ಈ ಜೋಡಿ.

ನಿಮಗೆ ಗೊತ್ತಾ ಮಾನ್ಯತಾ ಮತ್ತು ಸಂಜಯ್ ದತ್ ದಂಪತಿಗಳ ವಯಸ್ಸಿನ ನಡುವೆ ಸುಮಾರು 19 ವರ್ಷಗಳ ಅಂತರವಿದೆ. ಆದರೂ ಕಳೆದ 15 ವರ್ಷಗಳಿಂದ ಈ ಜೋಡಿ ಜೊತೆಯಾಗಿ ಆದರ್ಶ ದಂಪತಿಗಳಾಗಿ ಬಾಳುತ್ತಿದ್ದಾರೆ. ಸಂಜಯ್ ದತ್ ಅತ್ಯಂತ ಕಠಿಣ ಸಮಯ ಅಂದರೆ ಸಂಜಯ್ ದತ್ ಕ್ಯಾನ್ಸರ್ ನಿಂದ ಬಳಲುತ್ತಿದ್ದ ಸಮಯದಲ್ಲೂ ಸಹ ಮಾನ್ಯತಾ, ಪತಿಗೆ ಸಾತ್ ನೀಡುವ ಮೂಲಕ ಬೆಸ್ಟ್ ಪತ್ನಿ ಎನಿಸಿಕೊಂಡಿದ್ದಾರೆ.

ಸಂಜಯ್ ದತ್ ತಮ್ಮ ಕೆಲಸದ ಜೊತೆಗೆ, ತಮ್ಮ ಕುಟುಂಬಕ್ಕೆ ಹೆಚ್ಚಿನ ಸಮಯವನ್ನು ನೀಡುತ್ತಾರೆ. ಆದರೆ ಇವರ ಕುಟುಂಬ ಸದ್ಯ ಮುಂಬೈನಲ್ಲಿ ಇಲ್ಲ. ದುಬೈನಲ್ಲಿ ವಾಸಿಸುತ್ತಿದ್ದಾರೆ. ಸಂಜಯ್ ದತ್ ತಮ್ಮ ಶೂಟಿಂಗ್ ನಿಂದ ಫ್ರೀ ಆದಾಗಲೆಲ್ಲಾ ಫ್ಯಾಮಿಲಿ ಜೊತೆ ಹೆಚ್ಚಿನ ಸಮಯ ಕಳೆಯುತ್ತಾರೆ.

ಮಕ್ಕಳು ಸಹ ದುಬೈನಲ್ಲಿ ಶಾಲೆ ಕಲಿಯುತ್ತಿದ್ದು, ಮಾನ್ಯತಾ ಅವರ ಬ್ಯುಸಿನೆಸ್ ಸಹ ದುಬೈನಲ್ಲಿಯೇ ಇದೆ. ಫ್ಯಾಮಿಲಿಗೆ ದುಬೈನಲ್ಲಿ ನೆಲೆಸಲು ಇಷ್ಟವಾಗಿರೋದರಿಂದ, ಅಲ್ಲಿಯೇ ತಾವು ಸೆಟಲ್ ಆಗಿರೋದಾಗಿ ಸಂಜಯ್ ದತ್ ತಿಳಿಸಿದ್ದರು. ಸಂಜಯ್ ಪುತ್ರ ಶಹ್ರಾನ್ ಅಂಡರ್ 14 ಫುಟ್ ಬಾಲ್ ತಂಡದಲ್ಲಿ ಆಡುತ್ತಿದ್ದಾರೆ.

## ಮೂರನೇ ಬಾರಿ ತಂದೆಯಾದ ಫರ್ಹಾನ್ ಅಖ್ತರ್!

ನಟ, ನಿರ್ದೇಶಕ ಫರ್ಹಾನ್ ಅಖ್ತರ್ ಮತ್ತು ಶಿಬಾನಿ ದಾಂಡೇಕರ್ 2022ರಲ್ಲಿ ಕೆಲವೇ ಅತಿಥಿಗಳ ಸಮ್ಮುಖದಲ್ಲಿ ವಿವಾಹವಾದರು. ಇದೀಗ ಮದುವೆಯಾಗಿ ಮೂರು ವರ್ಷಗಳ ನಂತರ ಹೊಸ ಸುದ್ದಿ ನೀಡಲಿದ್ದಾರೆ ಎಂಬ ಮಾತುಗಳು ಕೇಳಿ ಬರುತ್ತಿವೆ.



ಶಿಬಾನಿ ಜೊತೆ ಫರ್ಹಾನ್‌ಗೆ ಇದು ಎರಡನೇ ಮದುವೆ. ಈ ಹಿಂದೆ ಅವರು ಮೊದಲು ಕೇಶ ವಿನ್ಯಾಸಕಿ ಅಧುನಾ ಭವಾನಿ ಅವರನ್ನು ವಿವಾಹವಾದರು. ಫರ್ಹಾನ್ ಮತ್ತು ಅಧುನಾ ಅವರಿಗೆ ಶಕ್ಯಾ ಮತ್ತು ಅಕಿರಾ ಎಂಬ ಇಬ್ಬರು ಹೆಣ್ಣು ಮಕ್ಕಳಿದ್ದಾರೆ. ಮದುವೆಯಾದ 16 ವರ್ಷಗಳ ನಂತರ, ಫರ್ಹಾನ್ ಮತ್ತು ಅಧುನಾ ವಿಚ್ಛೇದನ ಪಡೆದರು. ಇದೀಗ 51ನೇ ವಯಸ್ಸಿನಲ್ಲಿ ಫರ್ಹಾನ್ ಮೂರನೇ ಬಾರಿಗೆ ತಂದೆಯಾಗಲಿದ್ದಾರೆ ಎಂಬ ಚರ್ಚೆ ಇದೆ.

ಏಪ್ರಿಲ್ 2017 ರಲ್ಲಿ, ಫರ್ಹಾನ್ ಅಧುನಾಗೆ ವಿಚ್ಛೇದನ ನೀಡಿದರು. ಅದರ ನಂತರ, ಫರ್ಹಾನ್ ಮತ್ತು ಶಿಬಾನಿ ಇನ್‌ಸ್ಟಾಗ್ರಾಮ್ ಡಿಎಂ (ಡೈರೆಕ್ಟ್ ಮೆಸೇಜ್) ಮೂಲಕ ಮೊದಲ ಬಾರಿಗೆ ಪರಸ್ಪರ ಮಾತುಕತೆ ನಡೆಸಿದರು. ಈ ಸಂವಹನವು ಕ್ರಮೇಣ ಸ್ನೇಹವಾಗಿ ಮತ್ತು ನಂತರ ಪ್ರೀತಿಗೆ ತಿರುಗಿತು. ಆ ಬಳಿಕ ಇವರು ಮದುವೆ ಆದರು. ಫರ್ಹಾನ್ ತನ್ನ 51 ನೇ ಹುಟ್ಟುಹಬ್ಬವನ್ನು 9 ಜನವರಿ 2025 ರಂದು ಆಚರಿಸಿದರು. ಇದೇ ಹುಟ್ಟುಹಬ್ಬದ ದಿನವೇ ಶಿಬಾನಿ ಪ್ರೆಗ್ನೆಂಟ್ ಎಂಬ ಮಾತು ಶುರುವಾಗಿತ್ತು. 2025ರ ಹೊಸ ವರ್ಷದಲ್ಲಿ ಶಿಬಾನಿ ಮಗುವಿಗೆ ಜನ್ಮ ನೀಡಲಿದ್ದಾರೆ ಎನ್ನಲಾಗಿದೆ.

# ಅಗ್ನಿ ದುರಂತದಲ್ಲಿ ನಾನು ಬದುಕಿದ್ದೇ ಪವಾಡ



ಇದೇ 9ರಂದು ಅಮೆರಿಕದ ಲಾಸ್ ಏಂಜಲಿಸ್‌ನ ಹಾಲಿವುಡ್ ಬೆಟ್ಟದಲ್ಲಿ ನಡೆದ ಶತಮಾನದ ಭೀಕರ ಕಾಳ್ಗಿಚ್ಚು ಇನ್ನೂ ಸಂಪೂರ್ಣ ನಿಯಂತ್ರಣಕ್ಕೆ ಬಂದಿಲ್ಲ 7500 ಅಗ್ನಿಶಾಮಕ ದಳ, 1162 ಅಗ್ನಿಶಾಮಕ ವಾಹನ, 23 ನೀರು ಸರಬರಾಜುದಾರರು, 31 ಹೆಲಿಕಾಪ್ಟರ್, 53 ಬುಲ್ಡೋಜರ್‌ಗಳು ಬಂದರೂ ಅಗ್ನಿಯನ್ನು ನಂದಿಸಲು ಸಾಧ್ಯವಾಗದಂಥ ಸ್ಥಿತಿ ನಿರ್ಮಾಣವಾಗಿದೆ ಎಂದರೆ ಅದರ ಭಯಾನಕತೆ ಅರ್ಥವಾದೀತು. ಈ ಭಾಗದಲ್ಲಿ ಮಳೆಯ ಅಭಾವ ಈ ವರ್ಷ ಉಂಟಾಗಿದ್ದ ಕಾರಣದಿಂದಲೂ ಇದು ಕಷ್ಟಸಾಧ್ಯವಾಯಿತು. ಲಾಸ್ ಏಂಜಲಿಸ್‌ನಲ್ಲಿ ನೀರಿನ ಅಭಾವದಿಂದಾಗಿ ಅಗ್ನಿಶಾಮಕ ದಳದವರು ಸಾಕಷ್ಟು ಸವಾಲು ಎದುರಿಸಬೇಕಾಗುತ್ತಿದೆ. ಸುತ್ತಲಿನ ಈಜುಕೊಳಗಳು ಮತ್ತು ಕೊಳಗಳಿಂದ ನೀರು ಸಂಗ್ರಹಿಸಿ ಕಾರ್ಯಾಚರಣೆ ನಡೆಸಲಾಗಿದೆ. ಫೈರ್ ಎಂದು ಕರೆಯಲ್ಪಡುವ ಅಗ್ನಿ ಹಾಲಿವುಡ್ ಹಿಲ್ಸ್‌ನಲ್ಲಿ ಕಾಣಿಸಿಕೊಂಡಿದೆ. 20ಕ್ಕೂ ಅಧಿಕ ಎಕರೆಗೆ ಆರಂಭದಲ್ಲಿ ವ್ಯಾಪಿಸಿರುವ ಈ ಬೆಂಕಿ, ರನ್ಯಾನ್ ಕ್ಯಾನ್ಯನ್ ಮತ್ತು ವಾಟಲ್ಸ್ ಪಾರ್ಕ್‌ಗಳನ್ನು ಸಂಪೂರ್ಣವಾಗಿ ಆಹುತಿ ಪಡೆದಿದೆ.

ಹಲವಾರು ಹಾಲಿವುಡ್, ಬಾಲಿವುಡ್ ತಾರೆಯರ ಮನೆಗಳೂ ಸುಟ್ಟು ಭಸ್ಮವಾಗಿವೆ. ಪ್ರಾಣ ಉಳಿಸಿಕೊಳ್ಳಲು ಎಲ್ಲರೂ ಕಾಲ್ಕಿಳುತ್ತಿದ್ದಾರೆ. ಇದರ ನಡುವೆಯೇ, ತಾವು ಈ ಅಗ್ನಿ ದುರಂತದಲ್ಲಿ ಬದುಕಿದ್ದೇ ಪವಾಡ ಎಂದಿದ್ದಾರೆ ಬಾಲಿವುಡ್ ನಟಿ ಪ್ರೀತಿ ಜಿಂಟಾ.

ಇವರು ಕೂಡ ಅಗ್ನಿ ಅನಾಹುತ ನಡೆದಿರುವ ಹಾಲಿವುಡ್ ಬೆಟ್ಟದಲ್ಲಿ ಮನೆಯನ್ನು ಹೊಂದಿದ್ದಾರೆ. ಈಗ ಭಾವುಕ ಪೋಸ್ಟ್ ಮಾಡಿರುವ ನಟಿ, ಇಂಥ ಭೀಕರ ದಿನ ಬರುತ್ತೆ ಅಂತ ಕನಸು ಮನಸಿನಲ್ಲಿಯೂ ಯೋಚನೆ ಮಾಡಿಯೇ ಇರಲಿಲ್ಲ. ನನ್ನ ಅಕ್ಕಪಕ್ಕದವರು ಈ ಪರಿಯ ಸಂಕಷ್ಟಕ್ಕೆ ಸಿಲುಕುತ್ತಾರೆ ಎನ್ನುವುದು ನೆನೆಸಿಕೊಳ್ಳಲೂ ಆಗುವುದಿಲ್ಲ. ಇಂಥ ಅಗ್ನಿ ದುರಂತದಿಂದ ನಾನು ಕೂಡ ಬದುಕಿರುವುದೇ ಪವಾಡ. ಆ ದೇವರೇ ನಮ್ಮನ್ನು ಕಾಪಾಡಿದ್ದಾನೆ. ಪ್ರತಿಯೊಬ್ಬರೂ ಸುರಕ್ಷಿತವಾಗಿರಲಿ ಎನ್ನುವುದೇ ನನ್ನ ಆಶಯ ಎಂದಿದ್ದಾರೆ.

ನನ್ನ ಜೀವನದಲ್ಲೇ ಇಂತಹ ದುರಂತವನ್ನು ನೋಡುತ್ತೇನೆ ಎಂದು ಭಾವಿಸಿರಲಿಲ್ಲ. ನನ್ನ ಅನೇಕ ಸ್ನೇಹಿತರು ಮತ್ತು ಕುಟುಂಬದವರು ನಿರಾಶ್ರಿತರಾಗಿದ್ದಾರೆ. ಎಲ್ಲರ ಸ್ಥಿತಿಯನ್ನು ನೋಡಿರುವ ನನ್ನ ಹೃದಯ ಛಿದ್ರವಾಗಿದೆ. ಇಂಥ ವಿಪತ್ತಿನಿಂದ ಆ ದೇವರು ನನ್ನನ್ನು ಕಾಪಾಡಿದ್ದಾನೆ. ಅವನಿಗೆ ಧನ್ಯವಾದಗಳು. ಜೊತೆಗೆ, ಅಗ್ನಿಶಾಮಕ ದಳಕ್ಕೂ ಧನ್ಯವಾದ ಸಲ್ಲಿಸುತ್ತೇನೆ. ಎಲ್ಲವನ್ನೂ ಕಳೆದುಕೊಂಡ ನಿರಾಶ್ರಿತರು ಶೀಘ್ರ ಚೇತರಿಸಿಕೊಳ್ಳಲಿ ಎನ್ನುವುದೇ ನನ್ನ ಪ್ರಾರ್ಥನೆ. ಶೀಘ್ರದಲ್ಲೇ ಬೆಂಕಿ ನಿಯಂತ್ರಣಕ್ಕೆ ಬರಲಿ. ನನ್ನ ಜೀವ ಉಳಿಸಿದ ಅಗ್ನಿಶಾಮಕ ದಳ ಮತ್ತು ಸಿಬ್ಬಂದಿಗೆ ಹೃತ್ಪೂರ್ವಕ ಧನ್ಯವಾದಗಳು. ಎಲ್ಲರೂ ಸುರಕ್ಷಿತವಾಗಿರಿ ಎಂದಿದ್ದಾರೆ ನಟಿ.

ಅಂದಹಾಗೆ,, ಬಾಲಿವುಡ್‌ನಲ್ಲಿ ಉತ್ತುಂಗದಲ್ಲಿ ಇರುವಾಗಲೇ ಪ್ರೀತಿ ಜಿಂಟಾ 2016ರಲ್ಲಿ ಅಮೆರಿಕದ ಜೀನ್ ಗುಡೆನಫ್ ಅವರ ಜೊತೆ ಮದುವೆಯಾದರು. ಹಲವು ವರ್ಷ ಡೇಟಿಂಗ್‌ನಲ್ಲಿದ್ದ ಈ ಜೋಡಿ, ಯಾರಿಗೂ ಹೇಳದೇ ಮದುವೆಯಾಗಿತ್ತು. ಹೇಳದೇ ಕೇಳದೇ ಅಮೆರಿಕಕ್ಕೆ ಹಾರಿದ್ದರು ನಟಿ. ಬಾಡಿಗೆ ತಾಯ್ತನದ ಮೂಲಕ ಇಬ್ಬರು ಅವಳಿ ಮಕ್ಕಳನ್ನು ನಟಿ ಪಡೆದುಕೊಂಡಿದ್ದಾರೆ. ಸದ್ಯ ಲಾಸ್ ಏಂಜಲಿಸ್‌ನಲ್ಲಿ ಪತಿ ಮತ್ತು ಮಕ್ಕಳ ಜೊತೆ ನಟಿ ಪ್ರೀತಿ ಜಿಂಟಾ ಲಾಸ್ ಏಂಜಲೀಸ್ ನಲ್ಲಿ ನೆಲೆಸಿದ್ದರು. ಅವರು ಇರುವ ಪ್ರದೇಶ ಸುಟ್ಟು ಕರಕಲಾಗಿದೆ.

# ಸತ್ಯ ಒಂದಿನ ಹೊರಗೆ ಬರಲೇಬೇಕು!



ತೆಲುಗು ಸ್ಟಾರ್ ನಟ–ನಟಿ ಜೋಡಿ ಸಮಂತಾ ಹಾಗೂ ನಾಗಚೈತನ್ಯ ಅವರಿಬ್ಬರ ಲವ್, ಮದುವೆ ಹಾಗೂ ಡಿವೋರ್ಸ್ ಪ್ರಕರಣ ಬಹುತೇಕ ಎಲ್ಲರಿಗೂ ಗೊತ್ತಿದೆ. ಅವರಿಬ್ಬರೂ ದೂರವಾದ ಮೇಲೂ ಆರಾಮವಾಗಿಯೇ ಇದ್ದಿರಬಹುದು. ಆದರೆ, ಅವರ ಅಭಿಮಾನಿಗಳು ಮಾತ್ರ ತಲೆಬಿಸಿ ಮಾಡಿಕೊಂಡಿದ್ದಾರೆ. ಅವರಿಬ್ಬರ ಫ್ಯಾನ್ಸ್ ತಲೆಬಿಸಿ ಮಾಡಿಕೊಂಡು ಸೋಷಿಯಲ್ ಮೀಡಿಯಾಗಳಲ್ಲಿ ಕಾಮೆಂಟ್ ಹಾಕಿಕೊಂಡು ಒದ್ದಾಡುತ್ತಿದ್ದರು. ಬಳಿಕ ನಟ ನಾಗಚೈತನ್ಯ ಅವರು ನಟಿ ಶೋಭಿತಾ ದುಲಿಪಾಲ ಅವರನ್ನು ಮದುವೆಯಾಗಿ ಮತ್ತೆ ಸಾಂಸಾರಿಕ ಜೀವನಕ್ಕೆ ಕಾಲಿಟ್ಟಿದ್ದಾರೆ.

ಈಗ ಸಮಂತಾವರು ಸದ್ಯಕ್ಕೆ ಒಂಟಿಯಾಗಿದ್ದರೂ ಮತ್ತೆ ಜಂಟಿಯಾಗುವ ಪ್ಲಾನ್‌ನಲ್ಲಿ ಇದ್ದಾರೆ ಎನ್ನಲಾಗುತ್ತಿದೆ. ಆದರೆ ಅದಿನ್ನೂ ಕನ್ಫರ್ಮ್ ಆಗಿಲ್ಲ. ಈ ಮಧ್ಯೆ ನಟಿ ಸಮಂತಾ ಅವರು ಸಂದರ್ಶನವೊಂದರಲ್ಲಿ ಹೇಳಿರುವ ಮಾತು ಇದೀಗ ಸಕತ್ ವೈರಲ್ ಆಗುತ್ತಿದೆ. ಹಾಗಿದ್ದರೆ ಸಮಂತಾ ಅವರು ಅದೇನು ಹೇಳಿದ್ದಾರೆ? ಯಾರ ಬಗ್ಗೆ ಮಾತನ್ನಾಡಿದ್ದಾರೆ ಎಂಬ ಕುತೂಹಲ ಅವರ ಫ್ಯಾನ್ಸ್‌ಗಳಿಗೆ ಇರಬಹುದು. ಅಂಥವರು ಇದನ್ನು ನೋಡಿದರೆ ಅವರಿಗೊಮದು ಕ್ಲಾರಿಟಿ ಸಿಗಬಹುದು. ಮುಂದಿದೆ ಮಾಹಿತಿ ನೋಡಿ..

'ನೀನು ಹೊರಗೆ ಸ್ಟಾರ್ ಆದ್ರೂ ಮನೆಲ್ಲಿ ನೀನು ಸಾಮಾನ್ಯ ಗೃಹಿಣಿ. ಅಡುಗೆಗೆ ಸಾಮಾನುಗಳು ಇದೆಯೋ ಇಲ್ವೋ ನೋಡ್ಕೋಬೇಕು. ವಾರಾಂತ್ಯದ ಪ್ಲಾನ್ ಮಾಡ್ಕೋಬೇಕು' ಅಂತ ನಾಗಚೈತನ್ಯ ಸಮಂತಾಗೆ ಹೇಳಿದ್ರಂತೆ. ಇದನ್ನು ಬೇರೆ ಯಾರೋ ಹೇಳಿದ್ದಲ್ಲ, ಸ್ವತಃ ಸಮಂತಾ ಸಂದರ್ಶನವೊಂದರಲ್ಲಿ ಹೇಳಿಕೊಂಡಿದ್ದಾರೆ. ಹಾಗಿದ್ದರೆ ಸಮಂತಾ ಮಾಜಿ ಪತಿ, ನಟ ನಾಗಚೈತನ್ಯ ಅವರು ಹೇಳಿದ್ದರಲ್ಲಿ ಏನಾದ್ರೂ ತಪ್ಪಿದ್ಯಾ? ಅವರು ಹಾಗೆ ಹೇಳಿದ್ದರು ಎಂದರೆ ಸಮಂತಾ ಅವರು ಅದನ್ನು ಮಾಡುತ್ತಿರಲಿಲ್ಲವೇ? ಈ ಪ್ರಶ್ನೆಗಳು ಸಹಜ!

ಅದರೆ, ಅದಕ್ಕೆ ಉತ್ತರ ಕಂಡುಕೊಳ್ಳಬೇಕಾಗಿರುವುದು ಅವರ ಅಭಿಮಾನಿಗಳೋ ಅಥವಾ ಮತ್ಯಾರೋ ಅಲ್ಲ, ಅದನ್ನು ಸ್ವತಃ ಸಮಂತಾ ಹಾಗೂ ನಾಗಚೈತನ್ಯ ಅವರೇ ಕಂಡುಕೊಳ್ಳಬೇಕಿತ್ತು. ಇಬ್ಬರೂ ಒಂದುಕಡೆ ಕುಳಿತು, ಪರಸ್ಪರ ಮಾತನ್ನಾಡಿಕೊಂಡು ಬಗೆಹರಿಸಿಕೊಳ್ಳಬೇಕಿತ್ತು. ಅದನ್ನು ಬಿಟ್ಟು ಈಗ ಮಾಜಿ ಸತಿಪತಿಗಳಾದ ಬಳಿಕ ಆ ಬಗ್ಗೆ ಮಾತನ್ನಾಡಿದರೆ ಏನು ಪ್ರಯೋಜನ ಎನ್ನಬಹುದು. ಅದಿರಲಿ, ಸಮಂತಾ ಈಗ ಆ ಸಂಗತಿ ಹೇಳಿರುವುದು ಜ್ಞಾನೋದಯದಿಂದಲೋ ಅಥವಾ ನಾಗಚೈತನ್ಯ ವಿರುದ್ಧ ಆರೋಪವೋ? ಬಲ್ಲವರಾರು?

ಅದೇನೇ ಇರಲಿ, ನಟಿ ಸಮಂತಾ ಅವರಿಗೆ ಅಥವಾ ನಾಗಚೈತನ್ಯ ಅವರಿಗೆ ಅವರ ಜೀವನವನ್ನು ಅವರಿಷ್ಟದಂತೆ ಬದುಕುವ ಸಂಪೂರ್ಣ ಸ್ವಾತಂತ್ರ್ಯವಿದೆ. ಅವರೇನೇದಾರೂ ಮಾಡಿಕೊಳ್ಳಲಿ, ಜಗತ್ತು ಹಾಗೂ ಫ್ಯಾನ್ಸ್ ಅವರ ಬಗ್ಗೆ ತಲೆಕೆಡಿಸಿಕೊಳ್ಳುವುದು ಅಚ್ಚರಿಯ ಸಂಗತಿಯೇ ಸರಿ. ಯಾರದೋ ಲೈಫ್ ಬಗ್ಗೆ ತಲೆ ಕೆಡಿಸಿಕೊಳ್ಳುವ ಅಭಿಮಾನಿಗಳು ಈ ಬಗ್ಗೆ ಯೋಚನೆ ಮಾಡಬೇಕಿಷ್ಟೇ. ಅವರು ಬೇಕಾದಾಗ ಮದುವೆ ಆಗುತ್ತಾರೆ, ಬೇಡವೆಂದರೆ ವಿಚ್ಛೇದನ ತೆಗೆದುಕೊಳ್ಳುತ್ತಾರೆ. ಅದೇ ಆಟದಲ್ಲಿ ಅವರ ಜೀವನ ಹೇಗೋ ನಡೆಯುತ್ತದೆ. ಆ ಬಗ್ಗೆ ಜಗತ್ತು ತಲೆಕೆಡಿಸಿಕೊಳ್ಳಬೇಕಿಲ್ಲ' ಅಂತ ಒಂದು ಕಾಮೆಂಟ್ ಓಡಾಡುತ್ತಿದೆ. ಈ ಮಾತು ತುಂಬಾ ಅರ್ಥಪೂರ್ಣವಾಗಿದೆ ಎನ್ನಬಹುದೇ?



# ಸೈಫ್ ಪುತ್ರನ ಸಿನಿಮಾದಲ್ಲಿ ಶ್ರೀಲೀಲಾ

ಕಿಸ್ ಬೆಡಗಿ ಶ್ರೀಲೀಲಾ ಬಾಲಿವುಡ್‌ಗೆ ಕಾಲಿಡ್ತಾ ವಿಷ್ಯ ಗೊತ್ತೇ ಇದೆ. ಧರ್ಮ ಪ್ರೊಡಕ್ಷನ್ಸ್ ನಿರ್ಮಾಣದ ಸಿನಿಮಾದಲ್ಲಿ ನಟಿಸೋ ಮೂಲಕ ಶ್ರೀಲೀಲಾ ಬಿ ಟೌನ್‌ಗೆ ಪಾದಾರ್ಪಣೆ ಮಾಡ್ತಾ ಇದ್ದಾಳೆ. ಈ ಸಿನಿಮಾದಲ್ಲಿ ನಾಯಕನಾಗಿ ಮಿಂಚಲಿರೋದು ಸೈಫ್ ಅಲಿಖಾನ್ ಪುತ್ರ ಇಬ್ರಾಹಿಂ ಖಾನ್.

ಇದು ಇಬ್ರಾಹಿಂ ಚೊಚ್ಚಲ ಚಿತ್ರವಾಗಿದ್ದು ದೊಡ್ಡ ಬಜೆಟ್‌ನಲ್ಲಿ ಸಿನಿಮಾ ನಿರ್ಮಾಣ ಆಗ್ತಾ ಇದೆ. ಇತ್ತೀಚೆಗೆ ಇಬ್ರಾಹಿಂ ಅಂಡ್ ಶ್ರೀಲೀಲಾ ಧರ್ಮ ಪ್ರೊಡಕ್ಷನ್ ಕಚೇರಿಯ ಹೊರಗೆ ಒಟ್ಟಿಗೆ ಕಾಣಿಸಿಕೊಂಡಿದ್ದು, ಪಾಪರಾಜಿಗಳಕ್ಯಾಮೆರಾನಲ್ಲಿ ಸೆರೆಯಾಗಿದ್ದಾರೆ.

'ಡೊಮೆನಿಕ್ ಅಂಡ್ ದಿ ಲೇಡಿಸ್ ಪರ್ಸ್' ಟ್ರೈಲರ್ ರಿಲೀಸ್: ಮಾಲಿವುಡ್ ಮೆಗಾಸ್ಟಾರ್ ಮಮ್ಮೂಟ್ಟಿ ನಟನೆಯ ಬಹುನಿರೀಕ್ಷೆಯ ಡೊಮೆನಿಕ್ ಅಂಡ್ ದಿ ಲೇಡಿಸ್ ಪರ್ಸ್ ಸಿನಿಮಾದ ಟ್ರೈಲರ್ ರಿಲೀಸ್ ಆಗಿದೆ. ಸೌತ್‌ನ ಸ್ಟಾರ್ ಡೈರೆಕ್ಟರ್ ಗೌತಮ್ ಮೆನನ್ ಈ ಚಿತ್ರಕ್ಕೆಆಕ್ಷನ್ ಕಟ್ ಹೇಳಿದ್ದು ವಿಭಿನ್ನ ಕಥಾಹಂದರದ ಈ ಟ್ರೈಲರ್ ಸದ್ದು ಮಾಡ್ತಾ ಇದೆ. ಇದೊಂದು ಮಿಸ್ಟ್ರಿ ಥ್ರಿಲ್ಲರ್ ಕಹಾನಿಯಾಗಿದ್ದು ಮಮ್ಮೂಟ್ಟಿ ಪ್ರೈವೇಟ್ ಇನ್ವೆಸ್ಟಿಗೇಟರ್ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ.

# ಚಿತ್ರರಂಗದಿಂದ ದೂರವಾಗಿದ್ದೇಕೆ ಇಮ್ರಾನ್ ಖಾನ್



ಬಾಲಿವುಡ್‌ನ ಇಮ್ರಾನ್ ಖಾನ್ ಅವರು ಸಾಕಷ್ಟು ಹೆಸರು ಮಾಡಿದವರು. ಅವರು ಆಮಿರ್ ಖಾನ್ ಅವರ ಸಂಬಂಧಿ ಕೂಡ. ಆದರೆ, ಅವರು ಏಕಾಏಕಿ ಚಿತ್ರರಂಗ ತೊರೆದೇ ಬಿಟ್ಟರು. ಅವರು ಈಗ ಗುರುತು ಸಿಗದಷ್ಟು ಬದಲಾಗಿದ್ದಾರೆ.

ಆಮಿರ್ ಖಾನ್ ಮಗಳು ಇರಾ ಖಾನ್ ಮದುವೆಯಲ್ಲಿ ಮಿಂಚಿದ್ದ ಅವರನ್ನು ನೋಡಿ ಅನೇಕರು ಅಚ್ಚರಿ ಹೊರಹಾಕಿದ್ದರು. ಇಂದು ಅವರ ಜನ್ಮದಿನ. ಅವರು ನಟನೆಯಿಂದ ಬ್ರೇಕ್ ಪಡೆದಿದ್ದು ಏಕೆ ಎಂಬುದನ್ನು ಹೇಳಿದ್ದರು.

'2016ರ ಸಂದರ್ಭದಲ್ಲಿ ನಾನು ಸಾಕಷ್ಟು ಕುಗ್ಗಿದ್ದೆ. ನಾನು ಇಂಡಸ್ಟ್ರಿಯಲ್ಲಿ ಕೆಲಸ ಮಾಡುತ್ತಿದ್ದೆ. ಆರ್ಥಿಕವಾಗಿ ಅದು ನನಗೆ ಸಹಾಯ ಮಾಡಿತು. 30ನೇ ವಯಸ್ಸಿಗೆ ನಾನು ಹಣದ ಬಗ್ಗೆ ಆಲೋಚಿಸುವ ಅಗತ್ಯವೇ ಇರಲಿಲ್ಲ. ಆ ಸಮಯದಲ್ಲಿ ಅದು ನನ್ನ ಕರಿಯರ್ ಆಗಿರಲಿಲ್ಲ. ನನಗೆ ಕಷ್ಟ ಪಟ್ಟು ಕೆಲಸ ಮಾಡಬೇಕು ಎಂದಿರಲಿಲ್ಲ. ಮಗು ಜನಿಸಿದ ಬಳಿಕ ಮಕ್ಕಳ ಬಗ್ಗೆ ಆಲೋಚಿಸಬೇಕು ಎಂಬ ಆಲೋಚನೆ ಬಂತು. ನಟನಾಗಿ ಇರಲು ಸಾಧ್ಯವಿಲ್ಲ ಎನಿಸಿತು' ಎಂದಿದ್ದಾರೆ ಅವರು.

'ಕತ್ತಿ ಬತ್ತಿ ಫ್ಲಾಪ್ ಆದಾಗ ನಾನು ಕೆಲವು ವಿಚಾರಗಳನ್ನು ಅರ್ಥೈಸಿಕೊಳ್ಳಬೇಕಿತ್ತು. ಆದ್ದರಿಂದ ನಾನು ಹಿಂಬಂದಿಯಿಂದ ಕೆಲಸ ಮಾಡಲು ಪ್ರಾರಂಭಿಸಿದೆ. ಕಳೆದ ಎರಡು ಅಥವಾ ಮೂರು ವರ್ಷಗಳಲ್ಲಿ ಅತಿ ದೊಡ್ಡ ಹಿಟ್‌ಗಳು ಯಾವುವು? ನನ್ನ ಸಮಕಾಲೀನರಿಗೆ ಯಶಸ್ಸನ್ನು ತಂದುಕೊಟ್ಟ ಚಿತ್ರಗಳು ಯಾವುವು?

ನಾನು ಆ ಚಲನಚಿತ್ರಗಳನ್ನು ಇಷ್ಟಪಡುತ್ತೇನೆಯೇ? ಅವುಗಳನ್ನು ನನಗೆ ನೀಡಿದ್ದರೆ ನಾನು ಆಫರ್‌ನ ಒಪ್ಪಿಕೊಳ್ಳುತ್ತಿದ್ದೇನೆಯೇ? ಉತ್ತರ ಯಾವಾಗಲೂ ಇಲ್ಲ. ನನಗೆ ಅದು ಸ್ಪಷ್ಟಪಡಿಸಿತು. ನಾನು ನಟಿಸಿದ ಚಿತ್ರಗಳು ಯಶಸ್ವಿಯಾಗಬೇಕೆಂದು ನಾನು ನಿಜವಾಗಿಯೂ ಬಯಸಿದ್ದೆ' ಎಂದಿದ್ದಾರೆ.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
**RNI.KAR/KAN/2009/31934.**VOLUME-16/ISSUE-49 Email-mussanje2010@gmail.com, Phone: **9448074878**